ಸಂಪುಟ: 21, ಸಂಚಿಕೆ: 235, ಪುಟಗಳು: 8, ಸೋಮವಾರ, 3 ಜೂನ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಪರರನ್ನು ಗೌರವಿಸುವುದನ್ನು ಕಲಿಯದಿದ್ದರೆ ನಾವೆಂದೂ ದೊಡ್ಡವರಾಗುವುದಿಲ್ಲ.

। ಅನಾಮಿಕ

**ಪಂಚಾಂಗ**

(ಸೋಮವಾರ 3, ಜೂನ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ವೈಶಾಖ ಮಾಸ, ಕೃಷ್ಣ ಪಕ್ಷ,
- ವಾರ: ಸೋಮವಾರ, ತಿಥಿ: ದ್ವಾದಶಿ
- ನಕ್ಷತ್ರ: ಅಶ್ವಿನಿ
- ರಾಹುಕಾಲ: 7.34 ರಿಂದ 9.10
- ಗುಳಿಕಕಾಲ: 1.58 ರಿಂದ 3.44
- ಯಮಗಂಡಕಾಲ: 10.46 ರಿಂದ 12.22



# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines



# ಭಾರೀ ಮಳೆಗೆ ತತ್ತರಿಸಿದ ಕರ್ನಾಟಕ! ಜನಜೀವನ ಅಸ್ತವ್ಯಸ್ಥ





**ಬೆಂಗಳೂರು:** ನಿನ್ನೆ ಸಂಜೆಯಿಂದ ರಾಜ್ಯಾದ್ಯಂತ ಭಾರೀ ಮಳೆಯಾಗುತ್ತಿದೆ. ಬೆಂಗಳೂರು ಸೇರಿದಂತೆ ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗುತ್ತಿದ್ದು, ಒಂದೇ ಸಮನೆ ಸುರಿದ ಬಿರುಸಿನ ಮಳೆಗೆ ಜನರು ತತ್ತರಿಸಿ ಹೋಗಿದ್ದಾರೆ.

ನಿನ್ನೆ ರಾತ್ರಿ ಸುರಿದ ಗಾಳಿ ಮಳೆಗೆ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಭಾರೀ ಅವಘಡಗಳು ಸಂಭವಿಸಿದ್ದು, ಅದರ ವಿವರಗಳು ಇಲ್ಲಿವೆ. ವಿಶೇಷವಾಗಿ ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ರಾತ್ರಿ ಸುರಿದ ಮಳೆಗೆ ನಗರದ ಬಹುತೇಕ ಭಾಗಗಳಲ್ಲಿ ಮರಗಳು ಧರೆಗುರುಳಿವೆ. ನಿನ್ನೆ ಒಂದೇ ದಿನ ಬರೋಬ್ಬರಿ 206 ಮರಗಳು ಧರೆಗೆ ಉರುಳಿದೆ ಎಂಬ ಮಾಹಿತಿ ಸಿಕ್ಕಿದ್ದು, ಬೆಂಗಳೂರಿನ 38 ಪ್ರದೇಶಗಳಲ್ಲಿ ರಸ್ತೆ, ತಗ್ಗು ಪ್ರದೇಶಗಳಲ್ಲಿರುವ ಮನೆಗಳಿಗೆ ನೀರು ನುಗ್ಗಿರುವ ಬಗ್ಗೆ ದೂರು ಬಂದಿವೆ. ಸದ್ಯ ರಸ್ತೆಗಳಲ್ಲಿ ನಿಂತಿದ್ದ ನೀರು ಖಾಲಿಯಾಗುತ್ತಿದ್ದು, ಪ್ರಮುಖ ರಸ್ತೆಗಳಲ್ಲಿ ಬಿದ್ದ ಮರಗಳನ್ನು ತೆರವು ಮಾಡಲಾಗುತ್ತಿದೆ. ರಾತ್ರಿ ಸುರಿದ ಮಳೆಯಿಂದಾಗಿ ಸಿಲಿಕಾನ್ ಸಿಟಿ ಜನರು ಹೈರಾಣಾಗಿದ್ದಂತೂ ಸುಳ್ಳಲ್ಲ.

ಈತನ್ಮಧ್ಯೆ, ಬೆಂಗಳೂರಿನ ಹಾಸ್ ಮ್ಯಾಟ್ ಆಸ್ಪತ್ರೆ ಸಿಗ್ನಲ್ ಬಳಿ ಚಲಿಸುತ್ತಿದ್ದ ಕಾರು ಮತ್ತು ಆಟೋ ಮೇಲೆ ಬೃಹತ್ ಗಾತ್ರದ ಮರ ಬಿದ್ದಿದ್ದು, ಸದ್ಯ ಕಾರು, ಆಟೋದಲ್ಲಿದ್ದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ತಿಳಿದು ಬಂದಿದೆ, ಎರಡು ವಾಹನಗಳು ಜಖಂಗೊಂಡಿದ್ದು, ಸದ್ಯ ಮರ ತೆರವುಗೊಳಿಸಿ ವಾಹನ ಸಂಚಾರಕ್ಕೆ ವ್ಯವಸ್ಥೆ ಮಾಡಲಾಗಿದೆ. ಇನ್ನು ಬೆಂಗಳೂರು ನಗರದ ಬಹುತೇಕ ಭಾಗಗಲ್ಲಿ ಸಾವಿರಾರು ಮನೆಗಳಿಗೆ ನೀರು ನುಗ್ಗಿದ್ದು, ನಗರದ ತಗ್ಗು ಪ್ರದೇಶಗಳಲ್ಲಿ ಇರುವ ಬಹುತೇಕ ಮನೆಗಳಿಗೆ ನೀರು ನುಗ್ಗಿದೆ. ರಾಜಕಾಲುವೆ ಸಮೀಪ ಇರುವ ಮನೆಗಳಿಗೂ ನೀರು ನುಗ್ಗಿದ್ದು, ಇದಕ್ಕೆ ರಾಜಕಾಲುವೆಯನ್ನು ಒತ್ತುವರಿ ಮಾಡಿದ್ದೇ ಕಾರಣ ಎಂದು ಬಿಡಿಸಿ ಹೇಳಬೇಕಾಗಿಲ್ಲ. ಇದರ ಜೊತೆಗೆ ಭಾರೀ ಗಾಳಿಯ ರಭಸಕ್ಕೆ ಫ್ಲೋರ್ ಗಳಲ್ಲಿರುವ ಮನೆ, ಫ್ಲಾಟ್‌ಗಳ ಮೇಲೂ ನೀರು ನುಗ್ಗಿದೆ. ಪುಟ 2

## ಎಕ್ಸಿಟ್ ಪೋಲ್‌ನಲ್ಲಿ ಬಿಜೆಪಿಗೆ ಸಿಹಿ, ಕೈಗೆ ಕಹಿ | ಲೋಕಸಭಾ ಚುನಾವಣೆ

# ಮತಎಣಿಕೆಗೆ ಕೌಂಟ್ ಡೌನ್

**ಬೆಂಗಳೂರು:** ಲೋಕಸಭಾ ಚುನಾವಣೆಯ ಮತಎಣಿಕೆಗೆ ಕೌಂಟ್ ಡೌನ್ ಶುರುವಾಗಿದೆ. ನಾಳೆ ಬೆಳಗ್ಗೆ 8 ಗಂಟೆಯಿಂದ ಮತಎಣಿಕೆ ಆರಂಭವಾಗಲಿದ್ದು, ಇದಕ್ಕಾಗಿ ಬೆಂಗಳೂರಿನ 3 ಮತಎಣಿಕೆ ಕೇಂದ್ರಗಳಲ್ಲಿ ಸಕಲ ಸಿದ್ಧತೆ ನಡೆದಿದೆ. ಬಿಬಿಎಂಪಿ ಮುಖ್ಯ ಆಯುಕ್ತ ಹಾಗೂ ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ಸ್ಟ್ರಾಂಗ್ ರೂಂಗಳ ಪರಿಶೀಲನೆ ನಡೆಸಿದ್ದಾರೆ.

ನಾಳೆ ಬೆಳಗ್ಗೆ 7.45ಕ್ಕೆ ಸ್ಟ್ರಾಂಗ್ ರೂಂಗಳು ಓಪನ್ ಆಗಲಿದ್ದು, ಬೆಳಗ್ಗೆ 8 ಗಂಟೆಯಿಂದ ಮತಎಣಿಕೆ ಆರಂಭಿಸಲು ತಯಾರಿ ನಡೆಸಲಾಗಿದೆ. ಸದ್ಯ ಬೆಂಗಳೂರಿನ 3 ಸ್ಟ್ರಾಂಗ್ ರೂಂಗಳಲ್ಲಿ 9 ಕೊಠಡಿಗಳಲ್ಲಿನ ಪ್ರತಿ ಕೊಠಡಿಗೆ 14 ಟೇಬಲ್ ಗಳಲ್ಲಿ ಮತಎಣಿಕೆ ನಡೆಯಲಿದೆ. 8 ಗಂಟೆಯಿಂದ ಅಂಚೆಮತಗಳ ಎಣಿಕೆ ಶುರುವಾಗಲಿದ್ದು, ಬಳಿಕ ಇವಿಎಂ ಕೌಂಟಿಂಗ್ ಆರಂಭವಾಗಲಿದೆ.

ಮತಎಣಿಕೆ ಕೇಂದ್ರಗಳಲ್ಲಿ ಸಿಸಿಟಿವಿಗಳ ಮೂಲಕ ನಿಗಾ ಇಡಲಿದ್ದು, ಮತಎಣಿಕೆ ಸಿಬ್ಬಂದಿಗೆ ಮೊಬೈಲ್ ,ಪರ್ಸ್ ನಿಷೇಧ ಹೇರಲಾಗಿದೆ. ಆನ್ ಕೂರ್ ಸಾಫ್ಟ್‌ವೇರ್ ನಲ್ಲಿ ಪ್ರತಿ ರೌಂಡ್ ಮತಎಣಿಕೆ ಅಪ್ ಲೋಡ್ ಆಗಲಿದ್ದು, ಎಣಿಕೆಯಲ್ಲಿ ಸಮಸ್ಯೆಯಾಗದಂತೆ ನಿಗಾ ಇಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ತಿಳಿಸಿದ್ದಾರೆ.

1200 ಸಿಬ್ಬಂದಿಯಿಂದ ಮೂರು ಮತ ಎಣಿಕಾ ಕೇಂದ್ರಗಳಲ್ಲಿ ಮತಎಣಿಕೆ ನಡೆಯಲಿದ್ದು, ಪ್ರತಿಕೇಂದ್ರದಲ್ಲೂ ಬಿಗಿಭದ್ರತೆ ಮೂಲಕ ಎಚ್ಚರವಹಿಸಲಾಗಿದೆ.

ಒಟ್ಟಿನಲ್ಲಿ ಎಕ್ಸಿಟ್ ಪೋಲ್ ಬಿಸಿ ಬಿಸಿ ಚರ್ಚೆ ಹುಟ್ಟುಹಾಕಿರೋ ಹೊತ್ತಲ್ಲೇ, ಇದೀಗ ಲೋಕಸಭಾ ಚುನಾವಣಾ ಫಲಿತಾಂಶಕ್ಕೆ ಸಿಲಿಕಾನ್ ಸಿಟಿಯ ಮತ ಎಣಿಕೆ ಕೇಂದ್ರಗಳು ಸಜ್ಜಾಗಿದ್ದು, ಮತದಾರರ ಒಲವು ಯಾರ ಮೇಲಿದೆ ಅನ್ನೋದನ್ನ ಕಾದುನೋಡಬೇಕಿದೆ.



**ಬೆಂಗಳೂರಿನ ಸ್ಟ್ರಾಂಗ್ ರೂಂಗಳ ವಿವರ**

| ಬೆಂಗಳೂರು ಕೇಂದ್ರ: ಮೌಂಟ್ ಕಾರ್ಮೆಲ್ ಕಾಲೇಜು, ಅರಮನೆ ರಸ್ತೆ, ವಸಂತನಗರ | |
|---|---|
| ವಿಧಾನಸಭಾ ಕ್ಷೇತ್ರಗಳ ಸಂಖ್ಯೆ | 8 |
| ಮತಗಟ್ಟೆಗಳ ಸಂಖ್ಯೆ | 2125 |
| ಮತ ಎಣಿಕೆ ಕೊಠಡಿಗಳ ಸಂಖ್ಯೆ | 10 |
| ಒಟ್ಟು ಟೇಬಲ್ ಗಳ ಸಂಖ್ಯೆ | 135 |
| ಒಟ್ಟು ಸಿಬ್ಬಂದಿಯ ಸಂಖ್ಯೆ | 416 |

| ಬೆಂಗಳೂರು ದಕ್ಷಿಣ: ಎಸ್‌ಎಸ್‌ಎಂಆರ್‌ವಿ ಕಾಲೇಜು, 9ನೇ ಬ್ಲಾಕ್, ಜಯನಗರ | |
|---|---|
| ವಿಧಾನಸಭಾ ಕ್ಷೇತ್ರಗಳ ಸಂಖ್ಯೆ | 8 |
| ಮತಗಟ್ಟೆಗಳ ಸಂಖ್ಯೆ | 2120 |
| ಮತ ಎಣಿಕೆ ಕೊಠಡಿಗಳ ಸಂಖ್ಯೆ | 9 |
| ಒಟ್ಟು ಟೇಬಲ್ ಗಳ ಸಂಖ್ಯೆ | 118 |
| ಒಟ್ಟು ಸಿಬ್ಬಂದಿಯ ಸಂಖ್ಯೆ | 354 |

| ಬೆಂಗಳೂರು ಉತ್ತರ: ಸೆಂಟ್ ಜೋಸೆಫ್ ಕಾಲೇಜು, ಮಲ್ಯ ರಸ್ತೆ | |
|---|---|
| ವಿಧಾನಸಭಾ ಕ್ಷೇತ್ರಗಳ ಸಂಖ್ಯೆ | 8 |
| ಮತಗಟ್ಟೆಗಳ ಸಂಖ್ಯೆ | 2911 |
| ಮತ ಎಣಿಕೆ ಕೊಠಡಿಗಳ ಸಂಖ್ಯೆ | 19 |
| ಒಟ್ಟು ಟೇಬಲ್ ಗಳ ಸಂಖ್ಯೆ | 130 |
| ಒಟ್ಟು ಸಿಬ್ಬಂದಿಯ ಸಂಖ್ಯೆ | 390 |

## ಟ್ರೆಂಡ್ ಬೇಗನೇ ಗೊತ್ತಾದ್ರೂ ತಡವಾಗಲಿದೆ ಅಧಿಕೃತ ಫಲಿತಾಂಶ

**ನವದೆಹಲಿ:** ಈ ಬಾರಿ ಲೋಕಸಭಾ ಚುನಾವಣೆಯ ಫಲಿತಾಂಶದ ಟ್ರೆಂಡ್ ಬೇಗನೇ ಗೊತ್ತಾದರೂ ಅಧಿಕೃತ ಫಲಿತಾಂಶ ತಡವಾಗಿ ಪ್ರಕಟವಾಗಲಿದೆ.

ಅಧಿಕೃತ ಫಲಿತಾಂಶ ತಡವಾಗಲು ಕಾರಣ ಸುಪ್ರೀಂ ಕೋರ್ಟ್ ನಿರ್ದೇಶನ. ಈ ಬಾರಿ ಪ್ರತಿ ವಿಧಾನಸಭಾ ಕ್ಷೇತ್ರದ 5 ವಿವಿಪ್ಯಾಟ್ ಮತ ಎಣಿಕೆ ನಡೆಸಬೇಕೆಂದು ಸುಪ್ರೀಂ ಕೋರ್ಟ್ ಆದೇಶ ಪ್ರಕಟಿಸಿದೆ.

ಈ ಆದೇಶವನ್ನು ಚುನಾವಣಾಧಿಕಾರಿಗಳು ಪಾಲಿಸಬೇಕಾದ ಕಾರಣ ಪೋಸ್ಟಲ್, ಇವಿಎಂ ಮತ ಎಣಿಕೆ ಮುಗಿದ ಬಳಿಕ ವಿವಿಪ್ಯಾಟ್ ಮತ ಮತಗಳನ್ನು ತಾಳೆ ಹಾಕಲಾಗುತ್ತದೆ. ಪುಟ 2



## ಸಂಕ್ಷಿಪ್ತ ಸುದ್ದಿ

### ಖಾಸಗಿ ಬಸ್ ಪಲ್ಟಿ ಸಾವು



**ಯಾದಗಿರಿ:** ಖಾಸಗಿ ಬಸ್ ಪಲ್ಟಿಯಾಗಿ ಇಬ್ಬರು ಪ್ರಯಾಣಿಕರು ಮೃತಪಟ್ಟು, 7 ಜನ ಪ್ರಯಾಣಿಕರ ಸ್ಥಿತಿ ಚಿಂತಾಜನಕವಾಗಿರುವ ಘಟನೆ ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ಹತ್ತಿಗುಡೂರು ಬಳಿ ನಡೆದಿದೆ.

ಕಲಬುರಗಿಯಿಂದ ಬೆಂಗಳೂರು ಕಡೆ ತೆರಳುತ್ತಿದ್ದ ಬಸ್‌ನಲ್ಲಿ 37 ಜನ ಪ್ರಯಾಣಿಕರು ಪ್ರಯಾಣಿಸುತ್ತಿದ್ದರು. ಹತ್ತಿಗುಡೂರು ಬಳಿಯ ಹಳ್ಳದ ಸೇತುವೆ ಬಳಿ ಚಾಲಕನ ನಿಯಂತ್ರಣ ತಪ್ಪಿ ಬಸ್ ಪಲ್ಟಿಯಾಗಿದೆ. ಘಟನೆಯ ಪರಿಣಾಮ ಸ್ಥಳದಲ್ಲೇ ಇಬ್ಬರು ಪ್ರಯಾಣಿಕರು ಮೃತಪಟ್ಟಿದ್ದಾರೆ.

ಮಾಹಿತಿ ತಿಳಿದ ಕೂಡಲೇ ಸ್ಥಳಕ್ಕೆ ಆಗಮಿಸಿದ ಸುರಪುರ ಪೊಲೀಸರು ಬಸ್‌ನಲ್ಲಿ ಸಿಲುಕಿದ್ದ ಗಾಯಾಳುಗಳನ್ನು ಹೊರತೆಗೆಯಲು ಹರಸಾಹಸ ಪಟ್ಟಿದ್ದಾರೆ. ಪುಟ 2

### ಕಳ್ಳತನ ಮಾಡಲು ಹೋಗಿ ಎಸಿ ಕೆಳಗೆ ನಿದ್ರೆಗೆ ಜಾರಿದ ಕಳ್ಳ



**ಲಕ್ನೋ:** ಕಳ್ಳತನ ಮಾಡಲು ಹೋದ ಕಳ್ಳನೊಬ್ಬ ಎಸಿ ಕೆಳಗೆ ಮಲಗಿ ನಿದ್ರೆಗೆ ಜಾರಿರುವ ಘಟನೆ ಲಕ್ನೋದಲ್ಲಿ ನಡೆದಿದೆ.

ಇಂದಿರಾನಗರ ಸೆಕ್ಟರ್ 20ರಲ್ಲಿರುವ ಡಾ.ಸುನೀಲ್ ಪಾಂಡೆ ಎಂಬುವವರ ಮನೆಗೆ ನುಗ್ಗಿದ ಕಳ್ಳನೊಬ್ಬ ಬೀಗ ಒಡೆದು ಪಾತ್ರೆ ಹಾಗೂ ಇತರೆ ವಸ್ತುಗಳನ್ನು ತೆಗೆದುಕೊಂಡು ಚೀಲಕ್ಕೆ ತುಂಬಿಸಿದ್ದಾನೆ. ಬಳಿಕ ಎಸಿಯ ತಣ್ಣನೆಯ ಗಾಳಿಯಲ್ಲಿ ನಿದ್ರೆಗೆ ಜಾರಿದ್ದಾನೆ, ಅಕ್ಕಪಕ್ಕದ ಮನೆಯವರು ಮನೆಯ ಬೀಗ ಒಡೆದಿರುವುದನ್ನು ಪುಟ 2

## ರಾಜ್ಯದ ಪದವೀಧರ, ಶಿಕ್ಷಕರ ಕ್ಷೇತ್ರದ ಒಟ್ಟು 6 ಸ್ಥಾನಗಳಿಗೆ

# ಮತದಾನ ಆರಂಭ

**ಬೆಂಗಳೂರು:** ಲೋಕಸಭಾ ಚುನಾವಣೆಯ ಈಗಷ್ಟೇ ಮುಗಿದಿದೆ. ಜನರು ಮತ್ತು ರಾಜಕಾರಣಿಗಳು ಫಲಿತಾಂಶಕ್ಕಾಗಿ ಕಾಯುತ್ತಿದ್ದಾರೆ. ಈತನ್ಮಧ್ಯೆ ಇಂದು ರಾಜ್ಯದಲ್ಲಿ ಮತ್ತೊಂದು ಚುನಾವಣೆ ನಡೆಯುತ್ತಿದೆ. ರಾಜ್ಯ ವಿಧಾನಪರಿಷತ್ತಿನ ಆರು ಕ್ಷೇತ್ರಗಳಿಗೆ ಇಂದು ಮತದಾನ ನಡೆಯುತ್ತಿದ್ದು, ಈಗಾಗಲೇ ಮತದಾರರು ತಮ್ಮ ಹಕ್ಕು ಚಲಾಯಿಸಲು ಆರಂಭಿಸಿದ್ದಾರೆ.

ಶಿಕ್ಷಕರು ಹಾಗೂ ಪದವೀಧರ ಕ್ಷೇತ್ರಗಳ ಆರು ಸ್ಥಾನಗಳಿಗೆ ಇಂದು ಚುನಾವಣೆ ನಡೆಯುತ್ತಿದ್ದು, ಬೆಂಗಳೂರು ಪದವೀಧರರ ಕ್ಷೇತ್ರ, ಆಗ್ನೇಯ ಶಿಕ್ಷಕರ ಕ್ಷೇತ್ರ, ಈಶಾನ್ಯ ಪದವೀಧರರ ಕ್ಷೇತ್ರ, ನೈರುತ್ಯ ಶಿಕ್ಷಕರು ಹಾಗೂ ಪದವೀಧರರ ಕ್ಷೇತ್ರ ಹಾಗೂ ಪುಟ 2



## ಇಂದಿನಿಂದ ದೇಶಾದ್ಯಂತ ಎಕ್ಸ್‌ಪ್ರೆಸ್‌ವೇ, ಹೈವೇಗಳಲ್ಲಿ

# ಟೋಲ್ ದರ ಏರಿಕೆ

**ನವದೆಹಲಿ:** ಇಂದಿನಿಂದ ದೇಶಾದ್ಯಂತ ರಾಷ್ಟ್ರೀಯ ಹೆದ್ದಾರಿ ಮತ್ತು ಎಕ್ಸ್‌ಪ್ರೆಸ್‌ವೇಗಳಲ್ಲಿ ಟೋಲ್ ದರ ಏರಿಕೆ ಆಗಲಿದೆ.

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ರಾಷ್ಟ್ರೀಯ ಹೆದ್ದಾರಿ ಬಳಕೆದಾರರ ಶುಲ್ಕವನ್ನು3% ರಿಂದ 5% ರಷ್ಟು ಹೆಚ್ಚಿಸಿದ್ದು ಸೋಮವಾರದಿಂದಲೇ ಜಾರಿಗೆ ಬಂದಿದೆ.

18ನೇ ಲೋಕಸಭೆಯ ಚುನಾವಣೆಗೆ ಮತದಾನ ಮುಗಿದ ಒಂದು ದಿನದ ನಂತರ ಟೋಲ್ ಪ್ಲಾಜಾ ದರಗಳಲ್ಲಿ ಪರಿಷ್ಕರಣೆಯಾಗಿದೆ. ಪ್ರತಿ ವರ್ಷ ಏಪ್ರಿಲ್ 1 ರಿಂದ ಈ ದರ ಜಾರಿಗೆ ಬರುತ್ತದೆ. ಆದರೆ ಚುನಾವಣೆ ಇದ್ದ ಕಾರಣ ಬಳಕೆದಾರರ ಶುಲ್ಕವನ್ನು ತಡೆ ಹಿಡಿಯಲಾಗಿತ್ತು. ಪುಟ 2



## ಬಾಗಲಕೋಟೆ ಅಕ್ರಮ ಗರ್ಭಪಾತ ಕೇಸ್

# ಆರೋಪಿ ಕವಿತಾ ಖಾತೆಗೆ ಪ್ರತಿ ತಿಂಗಳು ಹಣ ವರ್ಗ

**ಬಾಗಲಕೋಟೆ:** ಆರೋಪಿ ಆಯಾ ಕವಿತಾ ಬಾಡನವರ ಗರ್ಭಪಾತ ದಂಧೆಗೆ ಮಹಾರಾಷ್ಟ್ರ ಮೂಲದ ಮಹಿಳೆ ಮೃತಪಟ್ಟಿದ್ದು, ಪ್ರಕರಣದ ತನಿಖೆಯನ್ನು ಪೊಲೀಸರು ಚುರುಕುಗೊಳಿಸಿದ್ದಾರೆ. ಪ್ರಕರಣದ ತನಿಖೆಯಲ್ಲಿ ಸ್ಫೋಟಕ ವಿಚಾರಗಳು ಬಯಲಾಗಿವೆ. ಆಯಾ ಕವಿತಾ ಬಾಡನವರ ಹೆಸರಿನಲ್ಲಿ ಒಟ್ಟು ಐದು ಖಾತೆಗಳಿವೆ. ಕಂದಾಯ ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ಕವಿತಾಳ ಖಾತೆಗಳಿಗೆ ಹಣ ವರ್ಗಾವಣೆ ಮಾಡುತ್ತಿದ್ದರು ಎಂಬುವುದು ತಿಳಿದು ಬಂದಿದೆ. ಈ ಖಾತೆಗಳನ್ನು ಫ್ರೀಜ್ ಮಾಡುವಂತೆ ಮಹಾಲಿಂಗಪುರ ಪೊಲೀಸರು ಬ್ಯಾಂಕ್‌ಗಳಿಗೆ ಪತ್ರ ಬರೆದಿದ್ದಾರೆ.

ಯಾಕೆ ಹಣದ ವರ್ಗಾವಣೆಯಾಗಿದೆ, ಇಬ್ಬರ ಸಂಪರ್ಕ ಹಿಂದಿನ ಕಾರಣವೇನು? ಎಂಬುವುದರ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಈ ಸಂಬಂಧ ಹೆಚ್ಚಿನ ತನಿಖೆಗಾಗಿ ಬನಹಟ್ಟಿ ಸಿಪಿಐ ನೇತೃತ್ವದಲ್ಲಿ ನಾಲ್ಕು ಜನರ ಪೊಲೀಸ್ ತಂಡ ರಚಿಸಲಾಗಿದೆ.



**ತಿಂಗಳಿಗೆ 10-30 ಸಾವಿರ ಹಣ ಜಮೆ:** ಪ್ರಾಥಮಿಕ ತನಿಖೆಯಲ್ಲಿ ಈಕೆ ಕಳೆದ ಆರು ತಿಂಗಳಿಂದ ವಾರಕ್ಕೆ ಕನಿಷ್ಠ ಮೂರು ಗರ್ಭಪಾತ ಮಾಡಿಸಿರುವ ಮಾಹಿತಿ ಸಿಕ್ಕಿದೆ. ಇನ್ನು ಕವಿತಾ ಹೆಸರಲ್ಲಿ ಐದು ಬ್ಯಾಂಕ್ ಖಾತೆಗಳಿವೆ ಇಂಡಿಯನ್ ಬ್ಯಾಂಕ್, ಕೆನರಾ ಬ್ಯಾಂಕ್, ಇಂಡಿಯನ್ ಒವರ್ ಸೀಸ್ ಬ್ಯಾಂಕ್, ಬಸವೇಶ್ವರ ಸಹಕಾರಿ ಬ್ಯಾಂಕ್. ಮಗನ ಜೊತೆ ಜಂಟಿ ಖಾತೆ ಹೊಂದಿದ ಕೆನರಾ ಬ್ಯಾಂಕ್‌ನ ಮತ್ತೊಂದು ಖಾತೆಯಿದೆ. ಪುಟ 2

## ಬೆಂಗಳೂರು ರೇವ್ ಪಾರ್ಟಿ ಪ್ರಕರಣ

# ಪೆಡ್ಲರ್ ಅರೆಸ್ಟ್

**ಬೆಂಗಳೂರು:** ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿ ಬಳಿ ನಡೆದಿದ್ದ ರೇವ್ ಪಾರ್ಟಿ ಪ್ರಕರಣಕ್ಕೆ ಸಂಬಂಧಿಸಿ ಈ ಪಾರ್ಟಿಗೆ ಡ್ರಗ್ಸ್ ಸಪ್ಲೈ ಮಾಡಿದ್ದ ಪೆಡ್ಲರ್‌ನನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಡಿಜೆ ಹಳ್ಳಿ ನಿವಾಸಿ, ಇಮಾರ್ ಶರೀಫ್ ಬಂಧಿತ ಆರೋಪಿ. ಈತ ಹೈಟೆಕ್ ರೇವ್ ಪಾರ್ಟಿಯಲ್ಲಿ ಭಾಗಿಯಾಗಿದ್ದ. ಡ್ರಗ್ಸ್ ಸಹಿತ ಬರುವಂತೆ ಶರೀಫ್‌ಗೆ ತಿಳಿಸಲಾಗಿತ್ತು. ಅದ್ರಂತೆ ವಿವಿಧ ಮಾದರಿಯ ಡ್ರಗ್ಸ್ ತೆಗೆದುಕೊಂಡು ಈತ ಪಾರ್ಟಿಗೆ ಬಂದಿದ್ದ. ಸದ್ಯ ಸಿಸಿಬಿ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ.

ರೇವ್ ಪಾರ್ಟಿಯಲ್ಲಿ ಆಯೋಜಕರ ಮೂಲಕ ಡ್ರಗ್ಸ್ ನೀಡಲಾಗಿತ್ತು. ಆರೋಪಿ ಶರೀಫ್ ಬಳಿ ನಲವತ್ತು ಎಂಡಿಎಂಎ ಮಾತ್ರೆಗಳು ಪತ್ತೆಯಾಗಿವೆ. ಸದ್ಯ ಶರೀಫ್ ಅರೆಸ್ಟ್ ಮಾಡಿ ಡ್ರಗ್ಸ್ ವಶಕ್ಕೆ ಪಡೆಯಲಾಗಿದೆ. ಸಿಸಿಬಿ ನೋಟಿಸ್‌ಗೆ ಹಾಜರಾಗದವರಿಗೆ ಸಂಕಷ್ಟ ಎದುರಾಗಲಿದೆ. ಪಾರ್ಟಿಯಲ್ಲಿ ಹಾಜರಾಗಿ ಡ್ರಗ್ಸ್ ಸೇವನೆ ಹಿನ್ನಲೆ ತೆಲುಗು ನಟಿ ಹೇಮಾ, ಆಶಿ ರಾಯ್ ಸೇರಿ ಇದುವರೆಗೆ ಇಪತ್ತಕ್ಕೂ ಹೆಚ್ಚು ಜನರಿಗೆ ಸಿಸಿಬಿ ನೋಟಿಸ್ ನೀಡಿದೆ. ಆದರೆ ಯಾರು ಕೂಡ ಇದುವರೆಗೆ ಸಿಸಿಬಿ ವಿಚಾರಣೆಗೆ ಹಾಜರಾಗಿಲ್ಲ. ಹೀಗಾಗಿ ಸಿಸಿಬಿ ನ್ಯಾಯಾಲಯದ ಮೊರೆ ಹೋಗಲಿದೆ. ವಿಚಾರಣೆಗೆ ಹಾಜರಾಗದ ವ್ಯಕ್ತಿಗಳ ವಿರುದ್ದ ಅರೆಸ್ಟ್ ವಾರಂಟ್ ಪಡೆದು ಬಂಧಿಸಲು ಅಧಿಕಾರಿಗಳು ತೀರ್ಮಾನ ಮಾಡಿದ್ದಾರೆ. ಪುಟ 2



## ಬುರ್ಖಾ ಸ್ಟುಡೆಂಟ್‌ನಿಂದ ಹಿಂದುತ್ವವಾದಿಗಳ ಗೇಲಿ

# ದುರದೃಷ್ಟಕರ

**ಮೈಸೂರು:** ಉಡುಪಿಯ ಮಾಜಿ ಶಾಸಕ ರಘುಪತಿ ಭಟ್ ಅವರಿಗೆ ಎಂಎಲ್‌ಸಿ ಟಿಕೆಟ್ ನೀಡದ್ದಕ್ಕೆ ಪರೋಕ್ಷವಾಗಿ ಮೈಸೂರು ಸಂಸದ ಪ್ರತಾಪ್ ಸಿಂಹ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ ಅವರು, ಉಡುಪಿ ಶಾಲೆಯೊಂದರಲ್ಲಿ ಬುರ್ಖಾ ಧರಿಸಿ ಕ್ಲಾಸಿಗೆ ಬಂದ ಜಿಹಾದಿ ಮನಸ್ಥಿತಿ ವಿರುದ್ಧ ಹೋರಾಡಿದ ರಘುಪತಿ ಭಟ್ಟರಿಗೆ ಎಂಎಲ್ ಟಿಕೆಟ್ ಸಿಗಲಿಲ್ಲ ಎಂಎಲ್‌ಸಿ ಟಿಕೆಟ್ಟನ್ನೂ ಕೊಡಲಿಲ್ಲ. ಸಾಲದೆಂಬಂತೆ ಪಕ್ಷದಿಂದಲೂ ಉಚ್ಚಾಟನೆಗೆ ಒಳಗಾಗಿ ಬುರ್ಖಾ ಸ್ಟೂಡೆಂಟ್ ಅಸ್ನಾದಿಯಿಂದ ಗೇಲಿಗೆ ಒಳಗಾಗುವ ಪರಿಸ್ಥಿತಿ ಹಿಂದುತ್ವವಾದಿಗಳಿಗೆ ಬಂದಿದ್ದು ದುರದೃಷ್ಟಕರ ಎಂದು ಬರೆದುಕೊಂಡಿದ್ದಾರೆ. ಪುಟ 2



## ಮತ ಎಣಿಕೆ ಎಚ್ಚರವಾಗಿ ನಿಭಾಯಿಸಿ; ಅಪರ ಜಿಲ್ಲಾಧಿಕಾರಿ

**ಮಂಡ್ಯ:** ಮತ ಎಣಿಕೆ ದಿನದಂದು ಸಹಾಯಕ ಚುನಾವಣಾಧಿಕಾರಿ, ಎಣಿಕೆ ಮೇಲ್ವಿಚಾರಕರು, ಎಣಿಕೆ ಸಹಾಯಕರು, ಮೈಕ್ರೋ ಅಬ್ಸರ್ವರ್ ಗಳು ತಮ್ಮ ಕರ್ತವ್ಯವನ್ನು ಜಾಗರೂಕತೆಯಿಂದ ನಿಭಾಯಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ ಎಚ್ ಎಲ್ ನಾಗರಾಜ್ ಅವರು ಹೇಳಿದರು. ಡಾ ಬಿ ಆರ್ ಅಂಬೇಡ್ಕರ್ ಭವನದಲ್ಲಿ ನಡೆದ ಇವಿಎಂ-ಅಂಚೆ ಮತ ಏಣಿಕೆ ಸಿಬ್ಬಂದಿ ಗಾಗಿ ನಡೆದ ಚುನಾವಣಾ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಅಂಚೆ ಮತ ಎಣಿಕೆಯು ಬಹಳ ಮುಖ್ಯವಾಗಿರುವದರಿಂದ ಯಾವುದೇ ಲೋಪದೋಷವಾಗದಂತೆ ಮತ ಎಣಿಕೆಯನ್ನು ಜಾಗರೂಕತೆಯಿಂದ ನಿಭಾಯಿಸಬೇಕು, ಯಾವುದೇ ಗೊಂದಲಮಯ ವಾತಾವರಣ ಸೃಷ್ಟಿ ಆಗದಂತೆ ನೋಡಿಕೊಳ್ಳಬೇಕು ಎಂದರು. ಮತ ಎಣಿಕೆ ದಿನದಂದು ಮತ ಎಣಿಕೆ ಸಿಬ್ಬಂದಿಗಳು ಸರಿಯಾಗಿ ಬೆಳಿಗ್ಗೆ 7 ಗಂಟೆ ಅಷ್ಟರಲ್ಲಿ ಕಡ್ಡಾಯವಾಗಿ ಎಲ್ಲರೂ ಇರಲೇಬೇಕು ಯಾರು ಕೂಡ ತಡವಾಗಿ ಬರಬಾರದು, ನಿಮಗೆ ನೀಡಿರುವಂತಹ ಗುರುತಿನ ಚೀಟಿಯನ್ನು ಪೊಲೀಸ್ ಅವರಿಗೆ ತೋರಿಸಿ ಒಳಗೆ ಬರಬೇಕು. ಮತ ಎಣಿಕೆ ದಿನದಂದು ಬೇಕಾದ ಎಲ್ಲಾ ಸಕಲ ವ್ಯವಸ್ಥೆಗಳನ್ನು ಮಾಡಲಾಗಿದೆ. ಚುನಾವಣಾ ಆಯೋಗ ನೀಡಿರುವ ಸೂಚನೆಗಳನ್ವಯ ನಿಗದಿತ ಕಾಲಾವಧಿಯಲ್ಲಿ ಯಾವುದೇ ಲೋಪಕ್ಕೆ ಅವಕಾಶ ಕೊಡದೆ ಚುನಾವಣಾ ಮತ ಎಣಿಕೆ ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದರು. ಎಲ್ಲಾ ಇವಿಎಂ-ಅಂಚೆ ಮತ ಏಣಿಕೆ ಸಿಬ್ಬಂದಿಗಳು ಹಾಗೂ ಇವಿಎಂ-ಅಂಚೆ ಮತ ಏಣಿಕೆ ಸಿಬ್ಬಂದಿಗಳಿಗೆ ತರಬೇತಿ ನೀಡಿದಂತಹ ಜಿಲ್ಲಾ ಮಟ್ಟದ ಚುನಾವಣಾ ತರಬೇತಿದಾರ ಹಾಗೂ ಸಹ ಶಿಕ್ಷಕರಾದ ಶ್ರೀನಿವಾಸ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## 5 ರಿಂದ 26 ರವರೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರ

**ಮಂಡ್ಯ:** ಮಂಡ್ಯ ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಜೂನ್ 2024 ರ ಮಾಹೆಯ ಜೂನ್ 06 ರಿಂದ 30 ರವರೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ. ಜೂನ್ 05 ರಂದು ಕೀಲಾರ ಸರ್ಕಾರಿ ಆರೋಗ್ಯ ಕೇಂದ್ರ, ಜೂನ್ 07 ರಂದು ಬಸರಾಳು ಪ್ರಾಥಮಿಕ ಆರೋಗ್ಯ ಕೇಂದ್ರ, ಜೂನ್ 11 ರಂದು ಅರಕೆರೆ ಸರ್ಕಾರಿ ಆರೋಗ್ಯ ಕೇಂದ್ರ, ಜೂನ್ 12 ರಂದು ಪಾಂಡವಪುರ ಉಪ ವಿಭಾಗ ಆಸ್ಪತ್ರೆ, ಜೂನ್ 13 ರಂದು ಕೆರಗೋಡು ಪ್ರಾಥಮಿಕ ಆರೋಗ್ಯ ಕೇಂದ್ರ, ಜೂನ್ 14 ರಂದು ಮದ್ದೂರು ತಾಲ್ಲೂಕು ಆಸ್ಪತ್ರೆ, ಜೂನ್ 15 ರಂದು ಮಂಡ್ಯ ಮಿಮ್ಸ್, ಜೂನ್ 19 ರಂದು ಕೆ. ಆರ್. ಪೇಟೆ ತಾಲ್ಲೂಕು ಆಸ್ಪತ್ರೆ, ಜೂನ್ 20 ರಂದು ಕಿರುಗಾವಲು ಸರ್ಕಾರಿ ಆರೋಗ್ಯ ಕೇಂದ್ರ, ಜೂನ್ 21 ರಂದು ಕೆ.ಎಂ.ದೊಡ್ಡಿ ಸರ್ಕಾರಿ ಆರೋಗ್ಯ ಕೇಂದ್ರ, ಜೂನ್ 25 ರಂದು ಶಿವಳ್ಳಿ ಸರ್ಕಾರಿ ಆರೋಗ್ಯ ಕೇಂದ್ರ ಮತ್ತು ಬಿಂಡಿಗನವಿಲೆ ಸರ್ಕಾರಿ ಆರೋಗ್ಯ ಕೇಂದ್ರ, ಜೂನ್ 26 ರಂದು ನಾಗಮಂಗಲ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಬೆಳಿಗ್ಗೆ 10 ಗಂಟೆಗೆ ಉದರ ದರ್ಶಕ ಶಸ್ತ್ರ ಚಿಕಿತ್ಸಾ ಶಿಬಿರ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಾಂಡವಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಿಂದ ಅರ್ಜಿ

**ಮಂಡ್ಯ:** ಪಾಂಡವಪುರ ಟೌನ್ ನಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿನ ಎಲೆಕ್ಟ್ರಾನಿಕ್ಸ್ ಮೆಕ್ಯಾನಿಕ್, ಜೋಡಣೆಗಾರ ಮತ್ತು ಸಿ.ಓ.ಪಿ.ಎ ವೃತ್ತಿಗಳ ತರಬೇತಿಗಾಗಿ ಎಸ್ ಎಸ್ ಎಲ್ ಸಿ ಪಾಸ್/ಫೇಲ್ ಆದ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಜೂನ್ 4 ರೊಳಗೆ https://cite.karnataka.gov.in/ ವೆಬ್ ಸೈಟ್ ಮೂಲಕ ನೋಂದಣಿಯಾಗಿ ಅರ್ಜಿ ಸಲ್ಲಿಸಬಹುದಾಗಿದ್ದು, ಎಲೆಕ್ಟ್ರೀಷಿಯನ್, ಜೋಡಣೆಗಾರ ಮತ್ತು ವೆಲ್ಡರ್ ವೃತ್ತಿಗಳಿಗೆ ಆಫ್ ಲೈನ್ ಮೂಲಕ ಸಂಸ್ಥೆಯ ಕಚೇರಿಯ ವೇಳೆಯಲ್ಲಿ ಅರ್ಜಿ ಶುಲ್ಕ ಪಾವತಿಸಿ ಪ್ರವೇಶ ಅರ್ಜಿಗಳನ್ನು ಪಡೆದು ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08236-295060 ನ್ನು ಸಂಪರ್ಕಿಸಬಹುದು ಎಂದು ಪಾಂಡವಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಿಂದ ಅರ್ಜಿ ಆಹ್ವಾನ

**ಮಂಡ್ಯ:** ಪಾಂಡವಪುರ ತಾಲ್ಲೂಕಿನ ಚಿನಕುರಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅನುಷ್ಠಾನಗೊಂಡಿರುವ ಸಿ.ಟಿ.ಎಸ್ ಮತ್ತು ಟಾಟಾ ಉದ್ಯೋಗ ಯೋಜನೆಗಳ ವೃತ್ತಿಗಳಲ್ಲಿ ಲಭ್ಯವಿರುವ ಸ್ಥಾನಗಳಿಗೆ 2024-25 ರ ಒಂದು ವರ್ಷದ ಮತ್ತು 2024-26 ರ ಎರಡು ವರ್ಷದ ವೃತ್ತಿಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 3 ಕೊನೆಯ ದಿನಾಂಕವಾಗಿದ್ದು, ಅರ್ಜಿಯನ್ನು https://www.cite.karnataka.gov.in ವೆಬ್ ಸೈಟ್ ಮೂಲಕ ವಿದ್ಯುತ್ ಕರ್ಮಿ, ವಿದ್ಯುನ್ಮಾನ ದುರಸ್ಥಿಗಾರ, ಜೋಡಣೆಗಾರ, ಎಂ.ಎಂ.ವಿ, ಆರ್‌ಎ.ಸಿ.ಟಿ, ಚರಕೀಯ ಐ.ಆರ್.ಡಿ.ಎಮ್ ವೃತ್ತಿಗಳಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ.709629409, 9900683214 ಅನ್ನು ಸಂಪರ್ಕಿಸಬಹುದು ಎಂದು ಪಾಂಡವಪುರ ತಾಲ್ಲೂಕಿನ ಚಿನಕುರಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

## ಮೀನು ಹಿಡಿಯುವುದು ನಿಷೇಧ

**ರಾಮನಗರ:** ಮುಂಗಾರು ಮಳೆಗಾಲದ ಅವಧಿಯಲ್ಲಿ ಮೀನುಗಳ ವಂಶಾಭಿವೃದ್ಧಿ ಚಟುವಟಿಕೆಗಳು ನಡೆಯುವುದರಿಂದ ಪ್ರತಿ ವರ್ಷದ ಜೂನ್-01 ರಿಂದ ಜುಲೈ-30ರ ವರೆಗೆ ಜಿಲ್ಲೆಯ ಎಲ್ಲಾ ಸರ್ವಋತು ಕೆರೆಗಳು, ಜಲಾಶಯಗಳು, ತೊರೆಗಳು, ಅಳಿವೆಗಳು ಮತ್ತು ನದಿಗಳಲ್ಲಿ ಮೀನು ಹಿಡಿಯವುದನ್ನು ನಿಷೇಧಿಸಲಾಗಿರುತ್ತದೆ .

# ನಿಷೇಧಾಜ್ಞೆ ಕಟ್ಟುನಿಟ್ಟಾಗಿ ಪಾಲಿಸಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಲೋಕಸಭಾ ಚುನಾವಣೆ ಕ್ಷೇತ್ರದ ಮತ ಎಣಿಕೆ ಕಾರ್ಯವು ಜೂನ್ 4 ರಂದು ನಾಗಾರ್ಜುನ ಕಾಲೇಜಿನಲ್ಲಿ ನಡೆಯಲಿದ್ದು, ಜೂನ್ 3ರ ಸಂಜೆ 6 ಗಂಟೆಯಿಂದ ಜೂನ್ 5 ರ ಮಧ್ಯರಾತ್ರಿ 12 ಗಂಟೆಯವರೆಗೆ ಕಲಂ 144 ಸಿ.ಆರ್.ಪಿ.ಸಿ ರಂತೆ ಜಿಲ್ಲಾದ್ಯಂತ ನಿಷೇದಾಜ್ಞೆಯನ್ನು ಹೊರಡಿಸಿ ಜಿಲ್ಲಾಧಿಕಾರಿಗಳು ಆದೇಶಿಸಿದ್ದು, ಕಟ್ಟುನಿಟ್ಟಾಗಿ ಆದೇಶ ಪಾಲನೆ ಮಾಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಿ.ಎನ್. ನಾಗೇಶ್ ಅವರು ತಿಳಿಸಿದ್ದಾರೆ.

ಸಾರ್ವಜನಿಕರು ಐದು ಅಥವಾ ಅದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕ ರಸ್ತೆ, ಬೀದಿ, ಓಣಿ, ಕೇರಿಗಳಲ್ಲಿ ಸಾರ್ವಜನಿಕ ಸ್ಥಳ, ಸಾರ್ವಜನಿಕ ಕಟ್ಟಡ ಮುಂತಾದವುಗಳಲ್ಲಿ ಗುಂಪು ಸೇರುವುದನ್ನು ನಿಷೇಧಿಸಿದೆ. ಯಾವುದೇ ಆಯುಧ, ಕುಡುಗೋಲು, ಖಡ್ಗ, ಭರ್ಜಿ, ಚೂರಿ, ದೊಣ್ಣೆ ಅಥವಾ ದೈಹಿಕ ದಂಡನೆಗೆ ಕಾರಣವಾಗುವ ಅಥವಾ ಪೂರಕವಾಗುವ ಇನ್ಯಾವುದೇ ವಸ್ತುಗಳನ್ನು ಹೊಯ್ಯುವುದನ್ನು ಮತ್ತು ಸಾಗಾಟ ಮಾಡುವುದನ್ನು ನಿಷೇಧಿಸಲಾಗಿದೆ.

ಗೆದ್ದ ಅಭ್ಯರ್ಥಿಗಳ ಮೆರವಣಿಗೆ ಹಾಗೂ ಪಟಾಕಿ/ಬಾಣ/ಬಿರುಸುಗಳನ್ನು ಹಚ್ಚುವುದು ಹಾಗೂ ಸಾರ್ವಜನಿಕ ಸಭೆ ಸಮಾರಂಭಗಳು, ಗೆಲುವಿನ ಸಂಭ್ರಮಗಳನ್ನು ನಡೆಸುವುದನ್ನು ನಿಷೇದಿಸಿದೆ. ಸಾರ್ವಜನಿಕವಾಗಿ ಯಾವುದೇ ಕೂಗನ್ನು ಉಚ್ಚರಿಸುವುದು ಅಥವಾ ಪದ ಹಾಡುವುದು, ಚೇಷ್ಟೆ ಮಾಡುವುದು, ಸಂಜ್ಞೆಗಳನ್ನು ಉಪಯೋಗಿಸುವುದು ಮತ್ತು ಚಿತ್ರಗಳ ಮೂಲಕ ಪ್ರದರ್ಶನ ಅಥವಾ ಪ್ರಸಾರ ಮಾಡುವುದು, ಪ್ರಕಟಣಾ ಪತ್ರಿಕೆಗಳ ಅಥವಾ ಇತರ ಯಾವುದೇ ವಸ್ತುಗಳ ಪ್ರದರ್ಶನ, ಭಿತ್ತಿ ಪತ್ರಗಳನ್ನು ಅಂಟಿಸುವುದರಿಂದ, ಸಭ್ಯತನ, ಸದಾಚಾರ, ಸಾರ್ವಜನಿಕ ಭದ್ರತೆ ಶಿಥಿಲಗೊಳ್ಳುವಂತಹ ಯಾವುದೇ ರೀತಿಯ ಅಪರಾಧ ಎಸಗುವಂತೆ ಪ್ರೇರೇಪಿಸುವ ಕ್ರಮವನ್ನು ನಿಷೇಧಿಸಲಾಗಿದೆ.

ಯಾವುದೇ ರೀತಿಯ ಬಂದ್, ಪ್ರತಿಭಟನೆ, ಮುಷ್ಕರ, ಪ್ರತಿಕೃತಿ ದಹನ, ಪ್ರದರ್ಶನ, ಪೂರಕ ಚಟುವಟಿಕೆಗಳು, ಯಾವುದೇ ಖಾಸಗಿ/ ಸಾರ್ವಜನಿಕ ಆಸ್ತಿ ಪಾಸ್ತಿಗಳನ್ನು ಹಾನಿಗೊಳಿಸುವ ಹಾಗೂ ವಿರೂಪಗೊಳಿಸುವ ಎಲ್ಲಾ ರೀತಿಯ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ. ಯಾವುದೇ ವ್ಯಕ್ತಿಯ ಜಾತಿ-ಧರ್ಮ, ಕೋಮು ಪಂಥಗಳಿಗೆ ಅಥವಾ ಸಾರ್ವಜನಿಕ ನೈತಿಕತೆಗೆ ಬಾಧಕ ಉಂಟು ಮಾಡಬಹುದಾಂತಹ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ. ಈ ಅವಧಿಯಲ್ಲಿ ಯಾವುದೇ ಸಂತೆ, ಜಾತ್ರೆ ಮತ್ತು ಇತರೆ ಜನಸಮೂಹಗಳನ್ನು ನಿಷೇಧಿಸಲಾಗಿದೆ. ಸರ್ಕಾರಿ ಸಂಸ್ಥೆಗಳು, ಸಂಘಟನೆಗಳು ಹಾಗೂ ಕಾರ್ಯನಿರತ ಅಧಿಕಾರಿ/ ಸಿಬ್ಬಂದಿಗಳ ವಿರುದ್ಧ ನಿಂದಿಸುವಂತಹ ಅವಹೇಳನಾಕಾರಿಯಾದಂತಹ ಯಾವುದೇ ಘೋಷಣೆಗಳು, ಭಾಷಣಾ ಪ್ರಕಟಣೆಗಳು ಅವಾಚ್ಯ ಶಬ್ದಗಳ ಬಳಕೆ, ಆವೇಶಕಾರಿ/ ಪ್ರಚೋದನಾಕಾರಿ ಭಾಷಣ, ಗಾಯನ ಇತ್ಯಾದಿ ಚಟುವಟಿಗಳನ್ನು ನಡೆಸುವಂತಿಲ್ಲ. ಚುನಾವಣಾ ಆಯೋಗದ ನಿರ್ದೇಶನದಂತೆ ಮತ ಎಣಿಕೆ ಕೇಂದ್ರದ ವ್ಯಾಪ್ತಿಯಲ್ಲಿ ಸಾರ್ವಜನಿಕರ ಪ್ರವೇಶವನ್ನು ನಿಷೇಧಿಸಿರುವ ಪ್ರದೇಶದಲ್ಲಿ ಪ್ರವೇಶಿಸುವಂತಿಲ್ಲ. ಜೂನ್ 3ರ ಮಧ್ಯರಾತ್ರಿ 12 ಗಂಟೆಯಿಂದ ಜೂನ್ 4 ರ ಮಧ್ಯರಾತ್ರಿ 12 ಗಂಟೆಯವರೆಗೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಡಿಸ್ಟಲರಿಗಳು, ವೈನರಿ ಹಾಗೂ ಎಲ್ಲಾ ಬಗೆಯ ಮದ್ಯದಂಗಡಿಗಳಲ್ಲಿ ಸಂಪೂರ್ಣವಾಗಿ ಮದ್ಯ ಶೇಖರಣೆ, ಸಾಗಾಣಿಕೆ ಹಾಗೂ ಮಾರಾಟವನ್ನು ನಿರ್ಬಂದಿಸಿ ''ಶುಷ್ಕ ದಿನಗಳೆಂದು'' (ಆಡಿಥಿ ಆಚಿಥಿ) ಘೋಷಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಿ.ಎನ್. ನಾಗೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿತ್ತನೆ ಬೀಜ, ರಸಗೊಬ್ಬರ ಪೂರೈಸಿ

**ಬೆಂಗಳೂರು ಗ್ರಾಮಾಂತರ:** ರೈತರಿಗೆ ಬಿತ್ತನೆ ಬೀಜ, ಗೊಬ್ಬರ ಸೇರಿದಂತೆ ಉತ್ತಮ ಗುಣಮಟ್ಟದ ಕೃಷಿ ಪರಿಕರಗಳನ್ನು ಒದಗಿಸಿ ರೈತರಿಗೆ ಸಮಸ್ಯೆ ಆಗದಂತೆ ಕ್ರಮ ವಹಿಸಿ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ ಅವರು ಅಧಿಕಾರಿಗಳಿಗೆ ಸೂಚಿಸಿದರು.



ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ಇಂದು ನಡೆದ ರೈತರಿಗೆ ಉತ್ತಮ ಗುಣಮಟ್ಟದ ಕೃಷಿ ಪರಿಕರಗಳನ್ನು ಒದಗಿಸಲು ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ. ರೈತರು ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದಾರೆ. ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರಗಳು ಸಮರ್ಪಕವಾಗಿ ಲಭ್ಯವಾಗುವಂತೆ ರೈತ ಸಂಪರ್ಕ ಕೇಂದ್ರಗಳಲ್ಲಿ ಹಾಗೂ ಮಾರಾಟ ಮಳಿಗೆಗಳಲ್ಲಿ ಶೇಖರಿಸಿಡಬೇಕು. ಕೃಷಿ ಪರಿಕರಗಳನ್ನು ಮಾರಾಟ ಮಾಡುವ ಅಂಗಡಿಗಳು ಕಡ್ಡಾಯವಾಗಿ ಪರಿಕರಗಳ ಬೆಲೆ ವಿವರಗಳನ್ನು ಅಂಗಡಿ ಮುಂದೆ ಪ್ರದರ್ಶಿಸಿರಬೇಕು. ರೈತರು ಖರೀದಿಸಲು ಬಂದಾಗ ವಿಳಂಬ ಮಾಡದೆ ನಿಗದಿತ ಸಮಯದಲ್ಲಿ ಅವಶ್ಯಕತೆ ಇರುವ ಕೃಷಿ ಪರಿಕರಗಳನ್ನು ಒದಗಿಸಬೇಕು. 2024-25 ನೇ ಸಾಲಿಗೆ 69,559 ಹೆಕ್ಟೇರ್ ಮುಂಗಾರು ಬಿತ್ತನೆ ಗುರಿ ಹೊಂದಲಾಗಿದ್ದು, 1,42,292 ಮೆಟ್ರಿಕ್ ಟನ್ ಮುಂಗಾರು ಉತ್ಪಾದನೆ ಗುರಿ ಹೊಂದಲಾಗಿದೆ. ಪ್ರಸಕ್ತ ವರ್ಷದಲ್ಲಿ 3,837 ಕ್ವಿಂಟಾಲ್ ಬಿತ್ತನೆ ಬೀಜ ಬೇಡಿಕೆ ಇದ್ದು ಇಲ್ಲಿಯವರೆಗೆ 737.6 ಕ್ವಿಂಟಾಲ್ ಬಿತ್ತನೆ ಬೀಜ ದಾಸ್ತಾನು ಮಾಡಲಾಗಿದೆ. ಮುಂಗಾರು ಹಂಗಾಮಿನಲ್ಲಿ 31,842 ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆ ಇದ್ದು ಜುಲೈ ಅಂತ್ಯಕ್ಕೆ 10,353 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಮಾಡಲಾಗಿದೆಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಲಲಿತ ರೆಡ್ಡಿ ಅವರು ಮಾಹಿತಿ ನೀಡಿದರು. ಅಪರ ಜಿಲ್ಲಾಧಿಕಾರಿ ಸಂಗಪ್ಪ, ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಲಲಿತ ರೆಡ್ಡಿ, ಉಪನಿರ್ದೇಶಕಿ ಗಾಯಿತ್ರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ಹೇಮಾವತಿ ಜೆ, ಸಹಾಯಕ ಕೃಷಿ ನಿರ್ದೇಶಕರು, ರಸಗೊಬ್ಬರ ತಯಾರಿಕ ಕಂಪನಿಗಳ ಮುಖ್ಯಸ್ಥರು ಇದ್ದರು.

### ಕುಡಿಯುವ ನೀರು ಸರಬರಾಜು ಮುನ್ನ ನಿಯಮಿತವಾಗಿ

# ನೀರಿನ ಪರೀಕ್ಷೆ ನಡೆಸಿ

**ಮೈಸೂರು:** ಸಾರ್ವಜನಿಕರಿಗೆ ಕುಡಿಯುವ ನೀರನ್ನು ಸರಬರಾಜು ಮಾಡುವ ಮುನ್ನ ನಿಯಮಿತವಾಗಿ ನೀರಿನ ಪರೀಕ್ಷೆ ನಡೆಸಿ ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅವರು ಅಧಿಕಾರಿಗಳಿಗೆ ಸೂಚಿಸಿದರು.




ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿಕರಿಗೆ ಸರಬರಾಜು ಮಾಡುತ್ತಿರುವ ಕುಡಿಯುವ ನೀರಿನ ಗುಣಮಟ್ಟ ಪರಿಶೀಲನೆ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕುರಿತು ವಿಡಿಯೋ ಕಾನ್ಫರೆನ್ಸ್ ನಡೆಸಿ ಮಾತನಾಡಿದರು.

ಕಲುಷಿತ ನೀರು ಸೇವನೆಯಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ಕುಡಿಯುವ ನೀರಿಗೆ ಯಾವುದೇ ಕಲುಷಿತ ನೀರು ಸೇರ್ಪಡೆಯಾಗದಂತೆ ಎಚ್ಚರವಹಿಸಿ ಎಂದರು.

ನೀರಿನ ಸರಬರಾಜು ವ್ಯವಸ್ಥೆಯಲ್ಲಿರುವ ಎಲ್ಲಾ ನೀರು ಶೇಖರಣಾ ಘಟಕಗಳನ್ನು ಸ್ವಚ್ಛಗೊಳಿಸಿ ಪ್ರತಿ ಹಂತದಲ್ಲಿಯೂ ಕ್ಲೋರಿನೇಷನ್ ಮಾಡಲು ಕ್ರಮವಹಿಸಿ ಎಂದರು. ನೀರಿನ ಮೂಲಗಳಾದ ಕೊಳವೆ ಬಾವಿಗಳ ಸುತ್ತ ಮುತ್ತಲೂ ಯಾವುದೇ ಕಲುಷಿತ ಅಥವಾ ಚರಂಡಿ ನೀರು ನಿಲ್ಲದಂತೆ ನೀರು ಸರಾಗವಾಗಿ ಹರಿಯಲು ಸೂಕ್ತ ಚರಂಡಿ ವ್ಯವಸ್ಥೆ ಕೈಗೊಂಡು ನೀರಿನ ಮೂಲದ ಸುತ್ತ ಕಾಂಕ್ರೀಟ್ ಕಟ್ಟೆ ಕಟ್ಟಲು ಅಗತ್ಯ ಕ್ರಮ ವಹಿಸಬೇಕು ಎಂದು ಸೂಚಿಸಿದರು.

ಪರೀಕ್ಷೆ ನಡೆಸದೆ ಕುಡಿಯುವ ನೀರು ಸರಬರಾಜು ಮಾಡಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ತೊಂದರೆ ಉಂಟಾದಲ್ಲಿ ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಯ ಮುಖ್ಯಸ್ಥರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಗ್ರಾಮಗಳಲ್ಲಿ ಸ್ವಚ್ಛತೆ, ಚರಂಡಿಗಳ ನಿರ್ವಹಣೆ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಮೇಲ್ವಿಚಾರಣೆ ನಡೆಸಬೇಕು. ಹೋಟೆಲ್, ರಸ್ತೆಯ ಬದಿಯ ಫಾಸ್ಟ್ ಫುಡ್ ಕೇಂದ್ರಗಳಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳುವ ಬಗ್ಗೆ ತಿಳಿಸಬೇಕು. ಶುದ್ಧ ಕುಡಿಯುವ ನೀರು ಒದಗಿಸುವಂತೆ ಕಟ್ಟುನಿಟ್ಟಿನ ಸೂಚನೆ ಕೊಡಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಡೆಂಗ್ಯೂ, ಚಿಕನ್ಗುನ್ಯಾ ವ್ಯಾಪಿಸದಂತೆ ತೀವ್ರ ನಿಗಾವಹಿಸುವಂತೆ ಅಧಿಕಾರಿಗಳು ಮುಂದಾಗಬೇಕು. ವಿವಿಧ ಇಲಾಖೆಯ ಅಧಿಕಾರಿಗಳು ಸಮನ್ವಯತೆಯೊಂದಿಗೆ ಕೆಲಸ ನಿರ್ವಹಿಸಬೇಕು ಎಂದು ಅವರು ತಿಳಿಸಿದರು.

ನೀರಿನ ವ್ಯವಸ್ಥೆಯಡಿ ಬರುವ ಎಲ್ಲಾ ಪೈಪ್ಲೈನ್ಗಳನ್ನು ಪ್ರತಿದಿನವೂ ಕಣ್ಣಾವಲು ನಡೆಸಿ. ಪೈಪ್ಲೈನ್ ಹಾನಿಯಾಗಿದ್ದರೆ ಕಲುಷಿತ ನೀರು ಕುಡಿಯುವ ನೀರಿಗೆ ಸೇರ್ಪಡೆಯಾಗುವ ಸಾಧ್ಯತೆಯಿದೆ. ಗಮನವಹಿಸಿ ದುರಸ್ಥಿ ಕಾರ್ಯ ನಡೆಯಬೇಕು ಎಂದರು.

ಒಂದು ವೇಳೆ ನಗರ ಪ್ರದೇಶಗಳಲ್ಲಿ ಕರುಳು ಬೇನೆ, ವಾಂತಿ, ಭೇಧಿ ಪ್ರಕರಣಗಳು ಕಂಡು ಬಂದರೆ ತಕ್ಷಣ ಸಂಬಂಧ ಪಟ್ಟ ಅಧಿಕಾರಿಗಳು ಆ ಗ್ರಾಮಕ್ಕೆ ಭೇಟಿ ನೀಡಿ ಅಗತ್ಯ ಕ್ರಮ ವಹಿಸಬೇಕು. ತಾಲ್ಲೂಕಿನ ಆಸ್ಪತ್ರೆ ಹಾಗೂ ಕ್ಲಿನಿಕ್ಗಳಲ್ಲಿ ಕರುಳು ಬೇನೆ ಪ್ರಕರಣಗಳು ಬಂದರೆ ಮಾಹಿತಿ ನೀಡುವಂತೆ ಹಾಗೂ ಆ ಸಂಬಂಧ ಅಗತ್ಯ ಕ್ರಮವಹಿಸಲು ಮುಂದಾಗಬೇಕು ಎಂದು ಅವರು ತಿಳಿಸಿದರು.

ಕುಡಿಯುವ ನೀರು ಸರಬರಾಜಿನ ಕೊಳವೆ ಮಾರ್ಗಗಳು ಒಡೆದು ಹೋದಲ್ಲಿ ತಕ್ಷಣ ದುರಸ್ಥಿಪಡಿಸಲು ಕ್ರಮವಹಿಸಬೇಕು ಎಂದು ಸೂಚಿಸಿದರು.

## ಋತು ಚಕ್ರ ನೈರ್ಮಲ್ಯ ದಿನ ಆಚರಣೆ

**ರಾಮನಗರ:** ಮಹಿಳೆಯರಿಗೆ ಋತು ಚಕ್ರ ಸಹಜ ಪ್ರಕ್ರಿಯೆಯಾಗಿದ್ದು ಕೆಲವರಲ್ಲಿ ತೀವ್ರ ರಕ್ತಸ್ರಾವದಿಂದ ರಕ್ತಹೀನತೆ ಇತ್ಯಾದಿ ಸಮಸ್ಯೆಗಳು ಕಂಡುಬರಬಹುದು ಆದ್ದರಿಂದ ಪೌಷ್ಟಿಕ ಆಹಾರ ಸೇವನೆ, ಕುಡಿಯುವ ನೀರು, ವಿಶ್ರಾಂತಿ ಬಹಳ ಮುಖ್ಯವಾಗಿದ್ದು ಮುಟ್ಟಿನ ಸಮಯದಲ್ಲಿ ಎಲ್ಲರೂ ಆರೋಗ್ಯದ ದೃಷ್ಟಿಯಿಂದ ವೈದ್ಯರು ಸೂಚಿಸಿದ ಸಲಹೆಗಳನ್ನು ಅನುಸರಿಸುವಂತೆ ವೈದ್ಯಾಧಿಕಾರಿ ಡಾ. ಆಯೆಷಾ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಸಂಯುಕ್ತ ಆಶ್ರಯದಲ್ಲಿ ವಿಶ್ವ ಋತು ಚಕ್ರ / ಮುಟ್ಟಿನ ನೈರ್ಮಲ್ಯ ದಿನದ ಅಂಗವಾಗಿ ರಾಮನಗರ ಟೌನಿನ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಸಭಾಂಗಣಲ್ಲಿ ಮುಟ್ಟಿನ ನೈರ್ಮಲ್ಯ ನಿರ್ವಹಣೆ ಕುರಿತು ಆಯೋಜಿಸಲಾಗಿದ್ದ ಜಾಗೃತಿ ಮತ್ತು ಆರೋಗ್ಯ ತಪಾಸಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಋತು ಚಕ್ರದ ಸ್ವಚ್ಛತೆಯ ಜೊತೆಗೆ ಪರಿಸರ ಸ್ವಚ್ಛತೆ ಕಾಪಾಡುವುದು ಮುಖ್ಯವಾಗಿದ್ದು ಮುಟ್ಟಿನ ಸಂದರ್ಭದಲ್ಲಿ ಶೌಚಾಲಯ ಮತ್ತು ಋತು ಚಕ್ರ ಉತ್ಪನ್ನ ಧರಿಸುವ ಮುನ್ನ, ಬದಲಾಯಿಸಿದ ನಂತರ ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಅರ್ಪಿತ ಕೆ.ಜೆ. ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮುಟ್ಟಿನ ನೈರ್ಮಲ್ಯ ದಿನವನ್ನು ವಿಶ್ವದಾದ್ಯಂತ ಆಚರಿಸಲಾಗುತ್ತಿದ್ದು, ವೈಯಕ್ತಿಕ ನೈರ್ಮಲ್ಯಗಳಲ್ಲಿ ಮುಟ್ಟಿನ ನೈರ್ಮಲ್ಯ ನಿರ್ವಹಣೆ ಬಹಳ ಮುಖ್ಯವಾಗಿದ್ದು ಆ ಸಮಯದಲ್ಲಿ ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಳ್ಳುವುದರಿಂದ ಅನೇಕ ಆರೋಗ್ಯ ಸಮಸ್ಯೆಗಳನ್ನು ನಿಯಂತ್ರಿಸಲು ಸಾಧ್ಯ ಎಂದು ತಿಳಿಸಿದರು.

ಮಹಿಳೆಯರು ಇಂದಿಗೂ ಮುಟ್ಟಿನ ಸಮಯ ಅಪವಿತ್ರವೆಂದು ಭಾವಿಸಿ ಶುಭ ಕಾರ್ಯಗಳಲ್ಲಿ ಪಾಲ್ಗೊಳ್ಳುವುದಿಲ್ಲ ಮುಟ್ಟಿನ ಸಮಯದಲ್ಲಿ ಹಾರ್ಮೋನ್ ವ್ಯತ್ಯಯದಿಂದ ಭಯ, ಆತಂಕ, ಮಾನಸಿಕ ಒತ್ತಡದಿಂದ ಬಳಲುತ್ತಾರೆ. ಋತು ಚಕ್ರ 28 ದಿನಗಳಿಗೊಮ್ಮೆ ಸಹಜವಾದ ಮುಟ್ಟಿನ ಪ್ರಕ್ರಿಯೆಯಾಗಿದ್ದು ಇದರಿಂದ ಯಾವುದೇ ಭಯ, ಆತಂಕ, ಖಿನ್ನತೆಗೆ ಒಳಗಾಗಬಾರದು, ಮುಟ್ಟಿನ ಸಮಯದಲ್ಲಿ ರಕ್ತಸ್ರಾವ, ಹೊಟ್ಟೆನೋವು, ಸುಸ್ತು, ವಯಸ್ಕರಲ್ಲಿ ಮೊಡವೆಗಳು, ಇತ್ಯಾದಿ ಸಮಸ್ಯೆಗಳು ಕಂಡುಬರುವುದು ಸಹಜವಾಗಿರುತ್ತದೆ. ಕೆಲವರಲ್ಲಿ ಹೆಚ್ಚಾಗಿ ರಕ್ತಸ್ರಾವ, ಹೊಟ್ಟೆನೋವು, ವಾಸನೆಯುಕ್ತ ಬಿಳಿಸ್ರಾವ ಕಾಣಿಸಿಕೊಳ್ಳಬಹುದು ಇಂತಹ ಸಂದರ್ಭಗಳಲ್ಲಿ ಮಹಿಳಾ ವೈದ್ಯರನ್ನು ಸಂಪರ್ಕಿಸುವುದು ಸೂಕ್ತ ಜೊತೆಗೆ ಪೌಷ್ಠಿಕ ಆಹಾರ ಸೇವನೆ, ವಿಶ್ರಾಂತಿ ಪಡೆಯಬೇಕು ಎಂದು ತಿಳಿಸಿದರು. ಪ್ರಾಂಶುಪಾಲರಾದ ಪುಟ್ಟಸ್ವಾಮಿ, ದೈಹಿಕ ಶಿಕ್ಷಕರಾದ ವಿಶ್ವನಾಥ್, ಆರೋಗ್ಯ ಸಿಬ್ಬಂದಿ ಮತ್ತು ಆಶಾ ಕಾರ್ಯಕರ್ತೆಯರು, ಕಾಲೇಜು ವಿದ್ಯಾರ್ಥಿಗಳು ಹಾಜರಿದ್ದರು.

## ಬೆಂಗಳೂರು ಪದವೀಧರರ ಕ್ಷೇತ್ರದ ಚುನಾವಣೆ ಸಂಬಂಧ ಸಹಾಯವಾಣಿ ಸಂಖ್ಯೆ ಪ್ರಾರಂಭ

**ಬೆಂಗಳೂರು ಗ್ರಾಮಾಂತರ ಜಿಲ್ಲೆ:** ಬೆಂಗಳೂರು ಪದವೀಧರರ ಕ್ಷೇತ್ರದ ಚುನಾವಣೆ-2024ಕ್ಕೆ ಸಂಬಂಧಿಸಿದಂತೆ ಜೂನ್ 3ರಂದು ಮತದಾನ ನಡೆಯಲಿದ್ದು, ಪದವೀಧರರು ಮತ ಚಲಾಯಿಸಲು ಅನುಕೂಲವಾಗುವಂತೆ ಸಹಾಯವಾಣಿ ಸಂಖ್ಯೆ 080-29902025 ಅನ್ನು ಆರಂಭಿಸಲಾಗಿದೆ. ಪದವೀಧರ ಮತದಾರರು ಮತದಾನಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ ಮೇಲ್ಕಂಡ ಸಹಾಯವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ತಿಳಿಸಿದ್ದಾರೆ.

## ಸಮಸ್ಯೆಗಳಿಗೆ ಸ್ಪಂದಿಸುವ ಮರಿತಿಬ್ಬೇಗೌಡರನ್ನು ಗೆಲ್ಲಿಸಿ

**ತಾಂಡವಪುರ:** ಶಿಕ್ಷಕರ ಸಮಸ್ಯೆಗಳಿಗೆ ಕಷ್ಟ ಸುಖಗಳಿಗೆ ಸ್ಪಂದಿಸುವ ಮರಿತಿಬ್ಬೇಗೌಡರನ್ನು ಗೆಲ್ಲಿಸಿ ಎಂದು ವರುಣ ಕ್ಷೇತ್ರದ ಮಾಜಿ ಶಾಸಕ ಹಾಗೂ ಆಶ್ರಯ ಸಮಿತಿಯ ಅಧ್ಯಕ್ಷ ಡಾಕ್ಟರ್ ಯತಿಂದ್ರ ಸಿದ್ರಾಮಯ್ಯನವರು ಶಿಕ್ಷಕ ಮತದಾರರಲ್ಲಿ ಮನವಿ ಮಾಡಿದರು. ಇದೇ ಮೂರರಂದು ನಡೆಯಲಿರುವ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಿರುವ ಮರಿತಿದ್ದೆ ಗೌಡ್ರ ಪರವಾಗಿ ನಂಜನಗೂಡು ತಾಲೂಕು ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಮಲ್ಲುಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಶಿಕ್ಷಕ ಮತದಾರರನ್ನು ಭೇಟಿಯಾಗಿ ಮತಯಾಚಿಸಿ ಯತಿಂದ್ರ ರವರು ಮಾತನಾಡುತ್ತಾ ಶಿಕ್ಷಕರು ತಮ್ಮ ಹಲವಾರು ಸಮಸ್ಯೆಗಳನ್ನು ನಮ್ಮ ಗಮನಕ್ಕೆ ತನ್ನಿದಿರಿ ನಿಮ್ಮ ಸಮಸ್ಯೆಗಳಿಗೆ ಸದಾ ಸ್ಪಂದಿಸುವ ಮರಿತಿಬ್ಬೆಗೌಡರು ಮೂರು ಬಾರಿ ಗೆಲುವನ್ನು ಸಾಧಿಸಿದ್ದಾರೆ ಈ ಬಾರಿಯೂ ಅವರಿಗೆ ಅವಕಾಶ ಅವಕಾಶ ಮಾಡಿಕೊಟ್ಟು ತಮ್ಮ ಸೇವೆ ಮಾಡಲು ಆಶೀರ್ವಾದ ಮಾಡಿ ಎಂದು ಮನವಿ ಮಾಡಿದರು ಈ ಸಂದರ್ಭದಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಚುನಾವಣಾ ಉಸ್ತುವಾರ ಎಸ್ ಸಿ ಬಸವರಾಜು ತಗಡೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ ಮುಖಂಡರಾದ ಮಲ್ಲುಪುರ ಪ್ರಕಾಶ್ ಎಪಿಎಂಸಿ ಮಾಜಿ ಉಪಾಧ್ಯಕ್ಷ ತಗಡರು ಆರ್ ಮಹದೇವ್ ತಾಂಡವಪುರ ಗ್ರಾಮ ಪಂಚಾಯತಿ ಮಾಜಿ ಉಪಾಧ್ಯಕ್ಷರಾದ ಬಿಪಿ ಮಹಾದೇವ ರಾಜಣ್ಣ ಮೈಸೂರು ಜಿಲ್ಲಾ ಹಿರಿಯ ಕಾಂಗ್ರೆಸ್ ಮುಖಂಡ ಲಲಿತಾದ್ರಿಪುರ ಬಸವರಾಜು ತಾಲೂಕು ಪಂಚಾಯತಿ ಮಾಜಿ ಸದಸ್ಯ ಪದ್ಮನಾಭ ಗ್ರಾಮ ಪಂಚಾಯತಿ ಮಾಜಿ ಸದಸ್ಯ ಅಡಕನಹಳ್ಳಿ ಮಾದಪ್ಪ ಮಲ್ಲುಪುರ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಕೋಮಲ ಸಿದ್ದರಾಜು ಮಾಜಿ ಅಧ್ಯಕ್ಷರಾದ ನಾಗಮಣಿ ಸದಸ್ಯರಾದ ಶಶಿ ಆನಂದ ರಮೇಶ್ ಮರಿಸ್ವಾಮಿ ಸಂಪತ್ತು ಗುರುರಾಜು ಹುಚ್ಚೇಗೌಡ ಸೇರಿದಂತೆ ಮುಂತಾದವರು ಹಾಜರಿದ್ದರು.



## ನಿಷೇಧಾಜ್ಞೆ ಜಾರಿ

**ರಾಮನಗರ:** ಬೆಂಗಳೂರು ಗ್ರಾಮಾಂತರ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಮತ ಎಣಿಕೆ ಕಾರ್ಯ ನಿಮಿತ್ತ ಭಾರತೀಯ ದಂಡ ಪ್ರಕ್ರಿಯೆ ಸಂಹಿತೆ 1973ರ ಕಲಂ 144 ರಲ್ಲಿನ ಪ್ರದತ್ತವಾದ ಅಧಿಕಾರದ ಮೇರೆಗೆ ರಾಮನಗರ ಜಿಲ್ಲೆಯಾದ್ಯಂತ ಜೂನ್ 4ರ ಬೆಳಿಗ್ಗೆ 12 ಗಂಟೆಯಿಂದ (ಮಧ್ಯರಾತ್ರಿ 12:01) ಜೂನ್ 6ರ ಬೆಳಿಗ್ಗೆ 5 ಗಂಟೆಯವರೆಗೆ ಷರತ್ತುಗಳನ್ನು ವಿಧಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ನಿಷೇದಾಜ್ಞೆ ಹೊರಡಿಸಿದ್ದಾರೆ. ನಿಷೇಧಾಜ್ಞೆ ಅವಧಿಯಲ್ಲಿ ಯಾವುದೇ ಬಹಿರಂಗ ಸಾರ್ವಜನಿಕ ಸಭೆ, ಸಮಾರಂಭ, ಜಾತ್ರೆ, ಮೆರವಣಿಗೆ ಇತ್ಯಾದಿಗಳನ್ನು ನಡೆಸುವುದನ್ನು ನಿರ್ಬಂಧಿಸಿದೆ. ನಿಷೇಧಾಜ್ಞೆ ಅವಧಿಯಲ್ಲಿ 5 ಜನಕ್ಕಿಂತ ಹೆಚ್ಚು ಜನರು ಗುಂಪಾಗಿ ಸೇರುವುದನ್ನು ನಿಷೇಧಿಸಿದೆ. ನಿಷೇದಾಜ್ಞೆ ಅವಧಿಯಲ್ಲಿ ಆಯುಧ ಹಾಗೂ ಮಾರಕಾಸ್ತ್ರಗಳನ್ನು ಹಿಡಿದು ಓಡಾಡುವಂತಿಲ್ಲ. ನಿಷೇಧಾಜ್ಞೆ ಅವಧಿಯಲ್ಲಿ ಧ್ವನಿವರ್ಧಕ ಹಾಗೂ ಡಿ.ಜೆಗಳನ್ನು ಬಳಸುವುದಕ್ಕೆ ಅವಕಾಶವಿರುವುದಿಲ್ಲ ಹಾಗೂ ಪಟಾಕಿಗಳನ್ನು ಸಿಡಿಸುವುದು ನಿರ್ಬಂಧಿಸಿದೆ. ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲಿ ಘೋಷಣೆ ಕೂಗುವುದು, ಭಾಷಣ ಮಾಡುವುದು ಮತ್ತು ಅನುಚಿತವಾಗಿ ವರ್ತಿಸುವುದನ್ನು ನಿರ್ಬಂಧಿಸಿದೆ. ಈ ನಿಷೇಧಾಜ್ಞೆಯು ಖಾಸಗೀ ಕಾರ್ಯಕ್ರಮಗಳಾದ ಮದುವೆ, ಗೃಹಪ್ರವೇಶ ಹಾಗೂ ಇತರೆ ಕಾರ್ಯಕ್ರಮಗಳಿಗೆ ಅನ್ವಯಿಸುವುದಿಲ್ಲ. ಈ ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಅಥವಾ ಉಲ್ಲಂಘನೆಯಾದಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಆದೇಶದಲ್ಲಿ ತಿಳಿಸಿದ್ದಾರೆ.

## ಫೋಟೋಗ್ರಫಿ, ವಿಡಿಯೋಗ್ರಫಿ ತರಬೇತಿ

**ರಾಮನಗರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ಸ್ ಸಹಯೋಗದಲ್ಲಿ ನಡೆಸುತ್ತಿರುವ ರುಡ್ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ 30 ದಿನಗಳ ಫೋಟೋಗ್ರಫಿ ಹಾಗೂ ವಿಡಿಯೋಗ್ರಫಿ ಉಚಿತ ತರಬೇತಿಯು 25 ಜುಲೈ 2024 ರಿಂದ ಆಯೋಜಿಸಲಾಗಿದ್ದು, ಬೆಂಗಳೂರು ಗ್ರಾಮಾಂತರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತ 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಪ್ರದೇಶದ ಆಧಾರ್ ಕಾರ್ಡ್ ಹಾಗೂ ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು. ತರಬೇತಿ ಪಡೆಯಲು ಡಿಎಸ್ಎಲ್ಆರ್ ಕ್ಯಾಮರಾ ಕಡ್ಡಾಯವಾಗಿ ಹೊಂದಿರಬೇಕು. ತರಬೇತಿಯು ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಜುಲೈ 20 ಕೊನೆಯ ದಿನವಾಗಿದೆ. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ ರುಡ್ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9241482541, 8884554510, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ತಿಳಿಸಿದ್ದಾರೆ.



# ದಕ್ಷಿಣ ಶಿಕ್ಷಕರ ಕ್ಷೇತ್ರ: ಜಿಲ್ಲೆಯಲ್ಲಿ 5403 ಅರ್ಹ ಮತದಾರರು

**ಮಂಡ್ಯ:** ಕರ್ನಾಟಕ ವಿಧಾನ ಪರಿಷತ್ತಿಗೆ ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ನಡೆಯುವ ಚುನಾವಣೆ 2024 ಕ್ಕೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ 5403 ಅರ್ಹ ಮತದಾರರಿದ್ದಾರೆ. ಜೂನ್ 3 ರಂದು ಬೆಳಿಗ್ಗೆ 8 ರಿಂದ 4 ರವರೆಗೆ ಮತದಾನ ನಡೆಯಲಿದ್ದು, ಜೂನ್ 6 ರಂದು ಮತ ಎಣಿಕೆ ನಡೆಯಲಿದೆ.

ಮಂಡ್ಯ ತಾಲ್ಲೂಕು ಕಚೇರಿಯಲ್ಲಿ ನೊಂದಣಿಯಾಗಿರುವ ಮತದಾರರ ಸಂಖ್ಯೆ ಹೆಚ್ಚಿದ್ದು, ತಾಲ್ಲೂಕು ಕಚೇರಿಯಲ್ಲಿ ಎರಡು ಮತ ಕೇಂದ್ರ, ತೆರೆಯಲಾಗಿದೆ. ಮಂಡ್ಯ ತಾಲ್ಲೂಕು ಪಂಚಾಯತ್ ಸಾಮರ್ಥ್ಯ ಸೌಧದಲ್ಲಿ ಒಂದು ಮತ ಕೇಂದ್ರ, ಒಟ್ಟು 3 ಮತ ಕೇಂದ್ರಗಳು ಕಾರ್ಯನಿರ್ವಹಿಸಲಿದೆ. ಜಿಲ್ಲೆಯಲ್ಲಿ 9 ಮತಕೇಂದ್ರಗಳಿದ್ದು, ಅಂತಿಮ ಮತದಾರರ ಪಟ್ಟಿಯ ಪ್ರಕಾರ 5403 ಮತದಾರರು ಮತದಾರರ ಪಟ್ಟಿಯಲ್ಲಿ ಹೆಸರು ನೊಂದಣಿ ಮಾಡಿಕೊಂಡಿದ್ದಾರೆ. ಕೆ ಆರ್ ಪೇಟೆ ಮಿನಿ ವಿಧಾನಸೌಧ ಮತ ಕೇಂದ್ರದಲ್ಲಿ ಒಟ್ಟು 464 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ನಾಗಮಂಗಲ ಮಿನಿ ವಿಧಾನಸೌಧ ಮತ ಕೇಂದ್ರದಲ್ಲಿ ಒಟ್ಟು - 443 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಪಾಂಡವಪುರ ಮಿನಿ ವಿಧಾನಸೌಧ ಮತ ಕೇಂದ್ರದಲ್ಲಿ ಒಟ್ಟು - 446 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಮಂಡ್ಯ ತಾಲ್ಲೂಕು ಕಛೇರಿ (ಕೊಠಡಿ - 1)ರ ಮತ ಕೇಂದ್ರದಲ್ಲಿ ಒಟ್ಟು - 630 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಮಂಡ್ಯ ತಾಲ್ಲೂಕು ಕಛೇರಿ (ಕೊಠಡಿ - 2 )ರ ಮತ ಕೇಂದ್ರದಲ್ಲಿ ಒಟ್ಟು - 554 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ.

ಮಂಡ್ಯ ತಾಲ್ಲೂಕು ಪಂಚಾಯತ್ ಸಾಮರ್ಥ್ಯ ಸೌಧ ಮತಕೇಂದ್ರದಲ್ಲಿ ಒಟ್ಟು -801, ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಮದ್ದೂರು ಮಿನಿ ವಿಧಾನಸೌಧ ಮತ ಕೇಂದ್ರದಲ್ಲಿ ಒಟ್ಟು - 967 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಶ್ರೀರಂಗಪಟ್ಟಣ ಮಿನಿವಿಧಾನಸೌಧ ಮತ ಕೇಂದ್ರದಲ್ಲಿ ಒಟ್ಟು - 431 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ. ಮಳವಳ್ಳಿ ಮಿನಿವಿಧಾನಸೌಧ ಮತ ಕೇಂದ್ರದಲ್ಲಿ ಒಟ್ಟು - 667 ಮತದಾರರು ಹೆಸರು ನೊಂದಾಯಿಸಿಕೊಂಡಿದ್ದಾರೆ.

### ಮತದಾನ ವಿಧಾನ

**ಕರ್ನಾಟಕದ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಪ್ರಾಶಸ್ತ್ಯ ಮತದಾನದ ವಿಧಾನವಿದ್ದು, ಚುನಾವಣಾ ಅಧಿಕಾರಿಗಳು ಒದಗಿಸುವ ನೇರಳೆ ಬಣ್ಣದ ಪೆನ್ ನಿಂದಲೇ ಮತದಾರರು ಮತದಾನವನ್ನು ಚಲಾಯಿಸತಕ್ಕದ್ದು. ಚುನಾವಣೆಯಲ್ಲಿ ಇ. ವಿ. ಎಂ ಗಳನ್ನು ಬಳಸಲಾಗುವುದಿಲ್ಲ. ಬದಲಿಗೆ ಮತಪತ್ರವನ್ನು ಬಳಸಲಾಗುತ್ತಿದ್ದು ಮತಪೆಟ್ಟಿಗೆಗಳನ್ನು ಸಹ ಬಳಸಿಕೊಳ್ಳಲಾಗುತ್ತಿದೆ. ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿ ಎನ್. ಯತೀಶ್ ಅವರು ಮಾತನಾಡಿ ಈಗಾಗಲೇ ಜಿಲ್ಲೆಯಲ್ಲಿ ನಿಷೇಧಾಜ್ಞೆ ಜಾರಿಯಲ್ಲಿರುವುದರಿಂದ ಪೊಲೀಸ್ ಇಲಾಖೆಯು ಬಹಳ ಜಾಗರೂಕತೆಯಿಂದ ಕಾರ್ಯ ನಿರ್ವಹಿಸುತ್ತಿದೆ . ಜಿಲ್ಲೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಗಾಗಿ ಆರಕ್ಷಕ ಅಧೀಕ್ಷಕರ ನೇತೃತ್ವದಲ್ಲಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲು ಒಟ್ಟು 539 ಆರಕ್ಷಕ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದ್ದು, 2 - ಎಎಸ್ಪಿ, 3 - ಡಿವಎಸ್ ಪಿ, 13 - ಪಿಐ, 32 - ಪಿಎಸ್ಐ, 51 - ಎಎಸ್ಐ, 337 - ಹೆಚ್ ಸಿಪಿಸಿ, 30 - ಡಬ್ಲ್ಯೂ ಪಿಸಿ, 40 - ಆಂಖ ಕಚಿಡಿಣಟಥಿ, 30 - ಕೆಎಸ್ ಆರ್ ಪಿಗಳನ್ನು ನೇಮಕ ಮಾಡಲಾಗಿದೆ. ಭದ್ರತಾ ಕೇಂದ್ರದ ಒಳಾಂಗಣದಲ್ಲಿನ ಭದ್ರತಾ ಕೊಠಡಿಗಳನ್ನು ದಿನದ 24 ಗಂಟೆಯ ಪಹರೆಗಾಗಿ ಸರದಿವಾರು ಭದ್ರತಾ ಕರ್ತವ್ಯ ನಿರ್ವಹಿಸಲು 30 ಜನರನ್ನೊಳಗೊಂಡ 1 ತುಕಡಿಯ ಸಿ.ಎ.ಪಿ.ಎಫ್ ತಂಡವನ್ನು ಮಾನ್ಯ ಮುಖ್ಯ ಚುನಾವಣಾಧಿಕಾರಿಗಳು ನಿಯೋಜಿಸಿದ್ದಾರೆ.**

### ಮತದಾರರ ಚೀಟಿ ವಿತರಣೆ

**ಜಿಲ್ಲೆಯ 7 ತಾಲ್ಲೂಕುಗಳಲ್ಲಿ ಒಟ್ಟು 5403 ಮತದಾರಲ್ಲಿ, ಇದುವರೆಗೂ 3298 ಮತದಾರರ ಚೀಟಿ ವಿತರಿಸಿದ್ದು, 2105 ಮತದಾರರ ಚೀಟಿಗಳು ಬಾಕಿ ಇವೆ . ಒಟ್ಟು 65 ಮತಗಟ್ಟೆ ಸಿಬ್ಬಂದಿಗಳ ನೇಮಕ ಮಾಡಿದ್ದು, 18 -ಪಿಆರ್ ಒ, 9- ಎಪಿಆರ್ ಒ, 18- ಪಿಒ 1, 9 - ಪಿಒ 2ಗಳು, 11- ಎಂಒ ಗಳನ್ನು ನೇಮಕ ಮಾಡಲಾಗಿದೆ. ಮಸ್ಟರಿಂಗ್ ಮತ್ತು ಡಿ - ಮಸ್ಟರಿಂಗ್ ಕೇಂದ್ರಗಳ ವಿವರ ಕೆ ಆರ್ ಪೇಟೆ ತಾಲೂಕಿನ ತಾಲೂಕು ಕಚೇರಿ, ನಾಗಮಂಗಲದ ತಾಲೂಕು ಕಚೇರಿ, ಪಾಂಡವಪುರದ ತಾಲೂಕು ಕಚೇರಿ, ಮಂಡ್ಯ ತಾಲೂಕು ಕಚೇರಿ, ಮದ್ದೂರು ತಾಲೂಕು ಕಚೇರಿ, ಶ್ರೀರಂಗಪಟ್ಟಣದ ತಾಲೂಕು ಕಚೇರಿ, ಮಳವಳ್ಳಿ ತಾಲೂಕು ಕಚೇರಿಯಲ್ಲಿ ಮಸ್ಟರಿಂಗ್ ಸೆಂಟರ್ ಅನ್ನು ಹಾಗೂ ಮಂಡ್ಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಡಿ - ಮಸ್ಟರಿಂಗ್ ಕೇಂದ್ರವನ್ನು ಸ್ಥಾಪಿಸಲಾಗಿದೆ.**

# ಬಸ್ ಪಲ್ಟಿ : ಪ್ರಯಾಣಿಕರಿಗೆ ಗಾಯ

**ಚಾಮರಾಜನಗರ:** ಪೂಜೆ ಮುಗಿಸಿ ಹಿಂತಿರುಗುವಾಗ ಖಾಸಗಿ ಬಸ್ ಪಲ್ಟಿಯಾಗಿರುವ ಘಟನೆ ಪ್ರಸಿದ್ಧ ಯಾತ್ರಾ ಸ್ಥಳವಾದ ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲೂಕಿನ ಬಿಳಿಗಿರಿರಂಗನಬೆಟ್ಟದ ರಸ್ತೆಯಲ್ಲಿ ನಡೆದಿದೆ. ಶನಿವಾರ ಇರುವ ಹಿನ್ನೆಲೆ ಖಾಸಗಿ ಬಸ್ ಮಾಡಿಕೊಂಡು ಮೈಸೂರು ಜಿಲ್ಲೆಯ ನಂಜನಗೂಡು ಮೂಲದ ಕುಟುಂಬವೊಂದು ಬಿಳಿಗಿರಿರಂಗನಬೆಟ್ಟಕ್ಕೆ ಬಂದಿತ್ತು.



ಶನಿವಾರ ಬಿಳಿಗಿರಿರಂಗನ ದರ್ಶನ ಪಡೆಸು ಪೂಜೆ ಮುಗಿಸಿಕೊಂಡು ಹಿಂತಿರುಗುವಾಗ ಗವಿಬೋರೆ ಹತ್ತಿರ ಬಸ್ ನಿಯಂತ್ರಣ ತಪ್ಪಿ ರಸ್ತೆ ಬದಿಯ ಹಳ್ಳಕ್ಕೆ ಇಳಿದಿದೆ. ಘಟನೆಯಲ್ಲಿ 16ಕ್ಕೂ ಅಧಿಕ ಮಂದಿಗೆ ಗಾಯಗಳಾಗಿದ್ದು ಎಲ್ಲರನ್ನೂ ಯಳಂದೂರು ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಬಸ್ ಪಲ್ಟಿಯಾಗುತ್ತಿದ್ದಂತೆ ಖಾಸಗಿ ಬಸ್ ಚಾಲಕ ಪರಾರಿಯಾಗಿದ್ದಾನೆ. ಯಳಂದೂರು ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ಕೊಟ್ಟು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಹಳ್ಳಕ್ಕೆ ಇಳಿದ ಕಾರು: ಮತ್ತೊಂದೆಡೆ ನಿಯಂತ್ರಣ ತಪ್ಪಿದ ಕಾರೊಂದು ಹಳ್ಳಕ್ಕೆ ಇಳಿದ ಘಟನೆ ಗುಂಡ್ಲುಪೇಟೆ ತಾಲೂಕಿನ ತೊಂಡವಾಡಿ ಗೇಟ್ನಲ್ಲಿ ನಡೆದಿದ್ದು, ದಂಪತಿ ಸೇರಿ ಇಬ್ಬರು ಮಕ್ಕಳಿಗೆ ಗಂಭೀರ ಗಾಯಗಳಾಗಿದೆ. ಬೆಂಗಳೂರು ಮೂಲದ ಪೀಯುಶ್ ಸಿಂಘಲ್, ಪತ್ನಿ ರಾಧಿಕಾ ಹಾಗೂ ಮಕ್ಕಳಾದ ಅದಿಲ್ ಮತ್ತು ಮಾನ್ಯ ಎಂಬವರಿಗೆ ಗಾಯಗಳಾಗಿದೆ. ಊಟಿ ಪ್ರವಾಸ ಮುಗಿಸಿ ಬೆಂಗಳೂರಿಗೆ ವಾಪಸ್ ಆಗುವ ವೇಳೆ ರಸ್ತೆ ಬದಿಯ 10 ಅಡಿ ಆಳದ ಹಳ್ಳಕ್ಕೆ ಇಳಿದಿ ಪರಿಣಾಮ ನಾಲ್ವರಿಗೂ ಗಂಭೀರ ಪೆಟ್ಟುಗಳಾಗಿದೆ.

ಅಪಘಾತ ಮಾಹಿತಿ ತಿಳಿಯುತ್ತಿದ್ದಂತೆ ಹೈವೆ ಗಸ್ತು ಸಿಬ್ಬಂದಿ ನಾಗೇಂದ್ರ, ಹಾಗೂ ಖಾಸಗಿ ಆಂಬುಲೆನ್ಸ್ ಚಾಲಕ ರಾಜೀವ್ ಕೂಡಲೇ ಸ್ಥಳಕ್ಕೆ ಆಗಮಿಸಿ ಪ್ರಥಮ ಚಿಕಿತ್ಸೆ ಕೊಟ್ಟು ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿಗೆ ರವಾನೆ ಮಾಡಿದ್ದಾರೆ. ಬೇಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಕೃಷಿ ನಿರ್ದೇಶಕ ಶ್ರೀನಿವಾಸ್‌ಗೆ ಬೀಳ್ಕೊಡುಗೆ

**ಕೋಲಾರ:** ರಾಜ್ಯ ಕೃಷಿ ನಿರ್ದೇಶಕರಾಗಿ ಸೇವೆ ಸಲ್ಲಿಸಿ ಇಂದು ನಿವೃತ್ತರಾದ ಕೋಲಾರ ಜಿಲ್ಲೆಯವರಾದ ಬಿ.ವೈ.ಶ್ರೀನಿವಾಸ್ ಅವರನ್ನು ಜಿಲ್ಲೆಯ ಹಿಂದಿನ ಜಂಟಿ ಕೃಷಿ ನಿರ್ದೇಶಕರಾದ ರೂಪಾದೇವಿ, ಇಲಾಖೆಯ ಅಧಿಕಾರಿಗಳಾದ ಮಹೇಶ್ ಬಾಬು, ಕೆ.ಎನ್.ಮಂಜುನಾಥ್, ನಾಗೇಶ್ ಗೌಡ, ಶ್ರೀನಿವಾಸ ಗೌಡ ಮತ್ತಿತರರು ಸನ್ಮಾನಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಮೂಲತಃ ಕೋಲಾರ ತಾಲ್ಲೂಕಿನ ಬೆಳ್ಳೂರು ಗ್ರಾಮದ ಬಡ ರೈತಕುಟುಂಬದಲ್ಲಿ ಜನಿಸಿ ಕೃಷಿ ಇಲಾಖೆಯ ನಿರ್ದೇಶಕರಾದ ಬಿ.ವೈ.ಶ್ರೀನಿವಾಸ್ ಅವರು ರೈತ ಸಮುದಾಯಕ್ಕೆ ಹಾಗೂ ಕೃಷಿ ಕ್ಷೇತ್ರಕ್ಕೆ ಸಲ್ಲಿಸಿರುವ ಸೇವೆ ಸ್ಮರಣೆಯವಾಗಿದ್ದು, ಅವರ ಕಾರ್ಯವೈಖರಿ ಹೊಸ ಅಧಿಕಾರಿಗಳಿಗೆ ಆದರ್ಶವಾಗಲಿ ಎಂದು ಅಭಿಪ್ರಾಯಪಡಲಾಯಿತು. 33 ವರ್ಷಗಳ ಸೇವೆ ಸಲ್ಲಿಸಿರುವ ಅವರು, ಸಹಾಯಕ ನಿರ್ದೇಶಕರಾಗಿ ಸೇವೆಗೆ ಸೇರಿ ನಂತರ ಉಪನಿರ್ದೇಶಕರು, ಜಂಟಿ ಕೃಷಿ ನಿರ್ದೇಶಕರು, ಅಪರ ಕೃಷಿ ನಿರ್ದೇಶಕರಾಗಿ ಸೇವೆ ಸಲ್ಲಿಸಿ ಬಡ್ತಿ ಹೊಂದಿ ರಾಜ್ಯ ಕೃಷಿ ನಿರ್ದೇಶಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಅವರು ಇಲಾಖೆಯಲ್ಲಿ ಸಲ್ಲಿಸಿದ ಸೇವೆ, ರೈತರ ಪರ ಇದ್ದ ಕಾಳಜಿ ನಿಜಕ್ಕೂ ಶ್ಲಾಘನೀಯ ಎಂದರು. ಹಿಂದಿನ ಜಂಟಿ ಕೃಷಿ ನಿರ್ದೇಶಕರಾದ ರೂಪಾದೇವಿ, ಇಲಾಖೆಯ ಅಧಿಕಾರಿಗಳಾದ ಮಹೇಶ್ ಬಾಬು, ಕೆ.ಎನ್.ಮಂಜುನಾಥ್, ನಾಗೇಶ್ ಗೌಡ, ಶ್ರೀನಿವಾಸ ಗೌಡ ಹಾಜರಿದ್ದರು.



# ಚಟಕ್ಕೊಳಗಾದವರಿಗೆ ವೃದ್ಧಾಪ್ಯ ಬರುವುದಿಲ್ಲ

**ವಿಜಯಪುರ:** ಸರ್ವೇಸಾಮಾನ್ಯವಾಗಿ ಸಿಗರೇಟು, ಎಲೆ ಅಡಿಕೆ, ಕಡ್ಡಿಪುಡಿ, ತಂಬಾಕು ಮತ್ತಿತರ ಮಾದಕ ವಸ್ತುಗಳ ಚಟಕ್ಕೊಳಗಾದವರು ವೃದ್ಧಾಪ್ಯಕ್ಕೆ ಒಳಗಾಗುವುದಿಲ್ಲ, ಏಕೆಂದರೆ ಅವರು ವೃದ್ಧಾಪ್ಯ ಸಮೀಪಿಸುವ ಮೊದಲೇ ಸಾವಿಗೊಳಗಾಗುತ್ತಾರೆಂದು ನಿವೃತ್ತ ಮುಖ್ಯೋಪಾಧ್ಯಾಯ ಸಂಪನ್ಮೂಲ ವ್ಯಕ್ತಿ ಚಂದ್ರಶೇಖರ್ ಬಿ ಹಡಪದ್ ರವರು ತಿಳಿಸಿದರು.

ಇಲ್ಲಿನ ಬಲಿಜ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಅಖಿಲ ಕರ್ನಾಟಕ ಜಾಗೃತಿ ವೇದಿಕೆಯಲ್ಲಿ ವಿಶ್ವ ತಂಬಾಕು ವಿರೋಧಿ ದಿನಾಚರಣೆ ಮಾದಕ ವಸ್ತುಗಳ ಬಗ್ಗೆ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಮಾದಕ ವಸ್ತುಗಳ ಚಟಕ್ಕೊಳಗಾದವರು ಜೀವನದ ಎಲ್ಲಾ ಸುಖಗಳಿಂದ ವಂಚಿತರಾಗಿ ಬಹುಬೇಗ ಸಾವಿನಂಚಿಗೆ ತಲುಪುತ್ತಾರೆಂದು ಚಟಕ್ಕೊಳಗಾದವರು ಚಟ್ಟಕ್ಕೇರದೆ ವಿಧಿ ಇಲ್ಲವೆಂದು, ಈ ಚಟಗಳು ಮನುಷ್ಯನ ನರಗಳ ಮೇಲೆ ಪ್ರಭಾವ ಬೀರುವ ಮೂಲಕ ಅವನನ್ನು ಶಕ್ತಿಹೀನನನ್ನಾಗಿಸಿ ಸಾವಿನ ಕೂಪಕ್ಕೆ ತಳ್ಳುತ್ತದೆ ಎಂದು ತಿಳಿಸಿದರು.

ಬಹಳಷ್ಟು ಕಡೆ ಹಿರಿಯರ ನಾಡುನುಡಿಯಂತೆ ಯಾವುದಾದರೂ ಮನೆ ಹಾಳು ಮಾಡಬೇಕಾದಲ್ಲಿ ಕುಟುಂಬದ ಮುಖ್ಯಸ್ಥನ ಇಲ್ಲವೇ ಕುಟುಂಬದ ಮಕ್ಕಳಿಗೆ ಚಟಗಳನ್ನು ಕಲಿಸಿದರೆ ಸಾಕು ಆ ಕುಟುಂಬ ಖಂಡಿತ ಸರ್ವನಾಶವಾಗುತ್ತದೆ ಎಂದು ಇದು ಕೇವಲ ಕುಟುಂಬಗಳಿಗೆ ಮಾತ್ರವಲ್ಲ ದೇಶಗಳಿಗೂ ಸಂಬಂಧಿಸಿದ್ದು, ಯಾವುದೇ ದೇಶಗಳನ್ನು ಆರ್ಥಿಕವಾಗಿ ನಾಶ ಮಾಡಲು ಆದೇಶಗಳಿಗೆ ಗಾಂಜಾ, ಅಫೀಮು ಮುಂತಾದ ಮತ್ತು ಬರಿಸುವ ಪದಾರ್ಥಗಳನ್ನು ಹೆಚ್ಚು ದೊರೆಯುವಂತೆ ರಫ್ತು ಮಾಡಿದಲ್ಲಿ ಆ ದೇಶಗಳು ಸರ್ವನಾಶವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಾಜಿ ಪುರಸಭಾ ಸದಸ್ಯ ಬಲಮುರಿ ಶ್ರೀನಿವಾಸರವರು ಮಾತನಾಡಿ ಕುಟುಂಬದ ಕಣ್ಣಾಗಿರುವ, ಪರಿವರ್ತನೆಯ ಹರಿಕಾರಣಿಯಾದ ಮಹಿಳೆಯರು ತಮ್ಮ ಮಕ್ಕಳ ಚಲನವಲನದ ಬಗ್ಗೆ ಹೆಚ್ಚು ಗಮನ ಇರಿಸಬೇಕಾಗಿದ್ದು, ಮಕ್ಕಳು ಒಳ್ಳೆಯ ಸಹವಾಸದಲ್ಲಿರುವುದು ಯಾವುದೇ



ಕೆಟ್ಟ ಚಟಗಳಿಗೆ ಒಳಗಾಗದೆ ಇರುವುದರ ಬಗ್ಗೆ ಗಮನಹರಿಸಬೇಕೆಂದು ಗಂಡಂದಿರು ಕುಡುಕತನಕ್ಕೆ ಬಲಿಯಾಗದಿರುವಂತೆ ನೋಡಿಕೊಳ್ಳಬೇಕೆಂದು ಎಚ್ಚರಿಕೆ ಮಾತು ತಿಳಿಸಿದರು.

ಹಿರಿಯ ಪತ್ರಕರ್ತರಾದ ವಿಎಂ ಕಿಶೋರ್ ಕುಮಾರ್ ರವರು ಮಾತನಾಡಿ ಮಾದಕ ವಸ್ತುಗಳಿಂದ ಕುಟುಂಬಗಳು ದೇಶಗಳು ಒಂದೆಡೆ ಹಾಳಾಗುತ್ತಿದ್ದರೆ ಅವುಗಳನ್ನು ಬೆಳೆಯುತ್ತಿರುವ ಅಫ್ಘಾನಿಸ್ತಾನದಂತಹ ಕೆಲವು ದೇಶಗಳಿಗೆ ಮುಖ್ಯ ಆದಾಯದ ಮೂಲವೇ ಅಫೀಮು ಮತ್ತಿತರೆ ಮಾದಕ ವಸ್ತುಗಳಾಗಿದ್ದು ಇದನ್ನು ಬುದ್ಧಿವಂತಿಕೆಯಿಂದ ಔಷಧಗಳಿಗೆ ಮತ್ತಿತರೆ ಉಪಯೋಗಗಳಿಗೆ ಬಳಸುವ ಮೂಲಕ ದೇಶದ ಅಭಿವೃದ್ಧಿಗೂ ಕಾರಣವಾಗಬಹುದೆಂದು ತಿಳಿಸಿದರು.

ಮಹಂತಿನ ಮಠದ ಕಾರ್ಯದರ್ಶಿ ವಿ ವಿಶ್ವನಾಥ್, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೇಲ್ವಿಚಾರಕರಾದ ಹರೀಶ್, ಸಂಗಮ್ ಗ್ಯಾಸ್ ಏಜೆನ್ಸಿಯ ಎಸ್ ರಾಜಶೇಖರ್, ಸ್ತ್ರೀ ಸ್ವಸಹಾಯ ಸಂಘಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.



ವಿಜಯಪುರ ಬೇಕರಿ ಶಿವಣ್ಣರವರ ಮಗ ಎಸ್.ವೀರೇಶ್ ರವರು ಸುರಕ್ಷಾ ಟೂರ್ಸ್ ಮತ್ತು ಟ್ರಾವೆಲ್ಸ್‌ನೊಂದಿಗೆ ಚಾರ್ ಧಾಮ್ ಯಾತ್ರೆಯಲ್ಲಿ ಮೊದಲ ಹಂತವಾಗಿ ತೆರಳಿದ್ದು, ಉತ್ತರ ಖಂಡ್‌ನ ಯಮುನೋತ್ರಿಯಲ್ಲಿ ಯಮುನಾ ದೇವಾಲಯದ ಮುಂಭಾಗ ಪುನೀತ್ ರಾಜಕುಮಾರ್ ರವರ ಭಾವಚಿತ್ರದೊಂದಿಗೆ ಕರ್ನಾಟಕದ ಹಿರಿತನ ಮೆರೆದಿರುವುದು.

## ಶಾಲಾ ಮಕ್ಕಳಿಗೆ ಚಿತ್ರಕಲಾ ಮತ್ತು ಪ್ರಬಂಧ ಸ್ಪರ್ಧೆ

**ಬೆಂಗಳೂರು:** ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಶಾಲಾ ಮಕ್ಕಳಿಗಾಗಿ ಜೂನ್ 4 ರಂದು ಬೆಳಿಗ್ಗೆ 10.00 ಗಂಟೆಗೆ ಬೆಂಗಳೂರಿನ ಕಬ್ಬನ್ ಉದ್ಯಾನವನದ ಜವಹರ ಬಾಲಭವನದಲ್ಲಿ ಚಿತ್ರಕಲಾ ಮತ್ತು ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಿದೆ. ಪ್ರಾಥಮಿಕ, ಮಾಧ್ಯಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆಯನ್ನು ಬೆಳಿಗ್ಗೆ 10.30 ರಿಂದ 11.30 ರವರೆಗೆ ಹಾಗೂ ಪ್ರೌಢಶಾಲಾ ಮಕ್ಕಳಿಗೆ ಪ್ರಬಂಧ ಸ್ಪರ್ಧೆಯನ್ನು ಬೆಳಿಗ್ಗೆ 12.30 ರಿಂದ 01.30ರವರೆಗೆ ಆಯೋಜಿಸಲಾಗಿದೆ. ಚಿತ್ರಕಲಾ ಸ್ಪರ್ಧೆ ಮತ್ತು ಪ್ರಬಂಧ ಸ್ಪರ್ಧೆಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಛೇರಿ ಬೆಂಗಳೂರು ನಗರ ದಕ್ಷಿಣ, 1 ನೇ ಮಹಡಿ, ನಿಸರ್ಗ ಭವನ, 7 ನೇ 'ಡಿ' ಕ್ರಾಸ್, ಶಿವನಗರ, ಬೆಂಗಳೂರು ? 560010 ಅಥವಾ ಇ-ಮೇಲ್ bngcitysouth@kspcb.gov.in ಮುಖಾಂತರ ನೋಂದಣಿ ಮಾಡಿಸಿಕೊಳ್ಳುವುದು. ''ಭೂಮರುಸ್ಥಾಪನೆ, ಮರುಭೂಮಿಕರಣ ಹಾಗೂ ಬರತಡೆಯುವಿಕೆ''(Land restoration, desertification and drought resilience) ಸ್ಪರ್ಧೆಯ ವಿಷಯವಾಗಿದ್ದು, ಸ್ಪರ್ಧೆಗಳಲ್ಲಿ ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ. ಸ್ಪರ್ಧೆಯಲ್ಲಿ ಭಾಗವಹಿಸುವ ಶಾಲಾ ಮಕ್ಕಳು ತಮ್ಮ ಸ್ವಂತ ಖರ್ಚಿನಲ್ಲಿ ಸ್ಪರ್ಧೆಗೆ ಬರತಕ್ಕದ್ದು. ಭಾಗವಹಿಸುವ ಶಾಲಾ ಮಕ್ಕಳಿಗೆ ಚಿತ್ರ ಬಿಡಿಸುವ ಹಾಳೆಗಳು ಮತ್ತು ಪ್ರಬಂಧ ಬರೆಯುವ ಹಾಳೆಗಳನ್ನು ಮಂಡಳಿಯ ವತಿಯಿಂದ ನೀಡಲಾಗುವುದು. ಚಿತ್ರಕಲೆಗೆ ಬಳಸುವ ಪೆನ್ಸಿಲ್, ಬಣ್ಣಗಳು (ಪೇಂಟಿಂಗ್ ಸಾಮಗ್ರಿಗಳು) ಇತ್ಯಾದಿ ಸಾಮಗ್ರಿಗಳನ್ನು ಮಕ್ಕಳೇ ತರಬೇಕು. ಹಾಗೂ ಅರ್ಧಗಂಟೆ ಮುಂಚಿತವಾಗಿ ಬಾಲಭವನ ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ಹಾಜರಾಗಿರಬೇಕು. ಸ್ಪರ್ಧೆಗಳ ನಂತರ ಚಿತ್ರಕಲೆ ಮಾಡಿರುವ ಹಾಳೆಗಳು ಮತ್ತು ಪ್ರಬಂಧ ಬರೆದಿರುವ ಹಾಳೆಗಳು ಮಂಡಳಿಗೆ ನೀಡತಕ್ಕದ್ದು. ಬಹುಮಾನ ವಿಜೇತರನ್ನು ತೀರ್ಪುಗಾರರು ಆಯ್ಕೆ ಮಾಡಲಿದ್ದು, ತೀರ್ಪುಗಾರರ ತೀರ್ಮಾನವೇ ಅಂತಿಮವಾಗಿರುತ್ತದೆ. ಆಯ್ಕೆಯಾಗುವ ಚಿತ್ರಕಲೆ ಮತ್ತು ಪ್ರಬಂಧ ಸ್ಪರ್ದೆವಿಜೇತರಿಗೆ ಪ್ರಥಮ, ದ್ವಿತೀಯ, ತೃತೀಯ ಹಾಗೂ ಸಮಾದಾನಕರ ಬಹುಮಾನಗಳನ್ನು ವಿಶ್ವ ಪರಿಸರ ದಿನಾಚಾರಣೆ -2024 ರಂದು ಗಣ್ಯರಿಂದ ವಿತರಣೆ ಮಾಡಲಾಗುವುದು. ಸ್ಪರ್ಧೆಯಲ್ಲಿ ಭಾಗವಹಿಸುವ ಶಾಲಾ ಮಕ್ಕಳಿಗೆ ಸ್ಪರ್ಧೆಯ ನಂತರ ಲಘು ಉಪಹಾರವನ್ನು ನೀಡಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಂಬೇಡ್ಕರ್ ಅರ್ಥಶಾಸ್ತ್ರ ವಿದ್ಯಾಲಯ ವಿವಿ ಘಟಿಕೋತ್ಸವ

**ಬೆಂಗಳೂರು:** ಡಾ. ಬಿ. ಆರ್. ಅಂಬೇಡ್ಕರ್ ಅರ್ಥಶಾಸ್ತ್ರ ವಿದ್ಯಾಲಯ ವಿಶ್ವವಿದ್ಯಾಲಯದ ಪ್ರಥಮ ವಾರ್ಷಿಕ ಘಟಿಕೋತ್ಸವವು, ಜೂನ್ 19 ರಂದು ಬೆಳಗ್ಗೆ 11.30 ಕ್ಕೆ ಜ್ಞಾನಭಾರತಿ ರಸ್ತೆಯ ಡಾ. ಬಿ.ಆರ್. ಅಂಬೇಡ್ಕರ್ ಅರ್ಥಶಾಸ್ತ್ರ ವಿದ್ಯಾಲಯ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಜರುಗಲಿದೆ. ಘನತೆವೆತ್ತ ರಾಜ್ಯಪಾಲರಾದ ಥಾವರ್ಚಂದ್ ಗೆಹ್ಲೋಟ್ ಮತ್ತು ಡಾ. ಬಿ. ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ವಿಶ್ವವಿದ್ಯಾಲಯದ ಕುಲಾಧಿಪತಿಗಳು ಘಟಿಕೋತ್ಸವದ ಅಧ್ಯಕ್ಷತೆ ವಹಿಸಲಿದ್ದಾರೆ. ವಿಶ್ವವಿದ್ಯಾಲಯದ ಸಹಕುಲಾಧಿಪತಿಗಳು ಹಾಗೂ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಘಟಿಕೋತ್ಸವದಲ್ಲಿ ಉಪಸ್ಥಿತರಿರುವರು. ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾದ ಮಾಜಿ ಅಧ್ಯಕ್ಷರು ಹಾಗೂ ಮಾಜಿ ಪ್ರಧಾನ ಮಂತ್ರಿಗಳ ಆರ್ಥಿಕ ಸಲಹೆಗಾರರಾದ ಡಾ. ಸಿ. ರಂಗರಾಜನ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಘಟಿಕೋತ್ಸವವನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಚೆಲುವರಾಯಸ್ವಾಮಿ ಹುಟ್ಟು ಹಬ್ಬ

**ಮಂಡ್ಯ:** ವಿಕಸನ ಜೋಗುಳ ದತ್ತು ಸೇವಾಕೇಂದ್ರದಲ್ಲಿ ಕೃಷಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚೆಲುವರಾಯಸ್ವಾಮಿ ಹುಟ್ಟು ಹಬ್ಬದ ಅಂಗವಾಗಿ ಚೆಲುವರಾಯಸ್ವಾಮಿ ಅಭಿಮಾನಿ ಬಳಗದ ಮೇಲುಕೋಟೆ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಉಮೇಶ್ ನೇತೃತ್ವದಲ್ಲಿ ಮಕ್ಕಳಿಗೆ ಬೆಳಗಿನ ತಿಂಡಿ ಮತ್ತು ಹಾಲನ್ನು ವಿತರಿಸಿದರು, ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಬಿ ಹೊಸಳ್ಳಿ ರಘು,ಎಂ ಎನ್ ಕಟ್ಟೆ, ಮೋಹನ್ ,ಶಿವು ,ವಿಕ್ಕಿ ,ನಿತಿನ್,ಭಾಗವಹಿಸಿದ್ದರು.

### ಮಂಡ್ಯ ಲೋಕಸಭಾ ಸಾರ್ವತ್ರಿಕ ಚುನಾವಣೆ: ಜಿಲ್ಲಾಧಿಕಾರಿ ಡಾ. ಕುಮಾರ ಮಾಹಿತಿ

# ಲೋಕಸಭೆ ಮತ ಎಣಿಕೆಗೆ ಸಕಲ ಸಿದ್ಧತೆ

**ಮಂಡ್ಯ:** ಮಂಡ್ಯ ಲೋಕಸಭಾ ಸಾರ್ವತ್ರಿಕ ಚುನಾವಣೆ -2024 ರ ಚುನಾವಣೆಯಲ್ಲಿ ಶೇ. 81.67 ರಷ್ಟು ಮತದಾನ ನಡೆದಿದ್ದು. ಜೂನ್ 4 ರಂದು ನಡೆಯಲಿರುವ ಮತ ಎಣಿಕೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಮತ ಎಣಿಕೆ ಯ ಬಗ್ಗೆ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟು 1779075 ಮತದಾರರಲ್ಲಿ, 1453016 ಮತದಾರರು ಮತ ಚಲಾಯಿಸಿದ್ದಾರೆ. ಮಳವಳ್ಳಿಯಲ್ಲಿ ಗಂಡು - 98146, ಹೆಣ್ಣು - 97741, ಒಟ್ಟು - 195887 ಮತದಾರರು ಮತ ಚಲಾಯಿಸಿದ್ದು, ಶೇ. 77.23 ರಷ್ಟು ಮತದಾನವಾಗಿದೆ.

ಮದ್ದೂರಿನಲ್ಲಿ ಗಂಡು- 87323, ಹೆಣ್ಣು -91703, ಒಟ್ಟು 179026 ಮತದಾರರು ಮತ ಚಲಾಯಿಸಿದ್ದು, ಶೇ. 82.98 ರಷ್ಟು ಮತದಾನವಾಗಿದೆ. ಮೇಲುಕೋಟೆಯಲ್ಲಿ ಗಂಡು-88175, ಹೆಣ್ಣು-89189, ಒಟ್ಟು 177364 ಮತದಾರರು ಮತ ಚಲಾಯಿಸಿದ್ದು, ಶೇ. 87.20 ರಷ್ಟು ಮತದಾನವಾಗಿದೆ.

ಮಂಡ್ಯದಲ್ಲಿ ಗಂಡು-86970, ಹೆಣ್ಣು-89859, ಒಟ್ಟು 176829 ಮತದಾರರು ಮತ ಚಲಾಯಿಸಿದ್ದು, ಶೇ. 77.00 ರಷ್ಟು ಮತದಾನವಾಗಿದೆ. ಶ್ರೀರಂಗಪಟ್ಟಣ ಗಂಡು- 90507, ಹೆಣ್ಣು-93336, ಒಟ್ಟು 183843 ಮತದಾರರು ಮತ ಚಲಾಯಿಸಿದ್ದು, ಶೇ. 84.48 ರಷ್ಟು ಮತದಾನವಾಗಿದೆ.

ನಾಗಮಂಗಲದಲ್ಲಿ ಗಂಡು-92195, ಹೆಣ್ಣು-91281, ಒಟ್ಟು 183476 ಮತದಾರರು ಮತ ಚಲಾಯಿಸಿದ್ದು,ಶೇ 84.73 ರಷ್ಟು ಮತದಾನವಾಗಿದೆ.

ಕೃಷ್ಣರಾಜಪೇಟೆಯಲ್ಲಿ ಗಂಡು-89362, ಹೆಣ್ಣು-91112, ಒಟ್ಟು 180474 ಮತದಾರರು ಮತ ಚಲಾಯಿಸಿದ್ದು, ಶೇ. 80.63 ರಷ್ಟು ಮತದಾನವಾಗಿದೆ. ಕೆ. ಆರ್ ನಗರದಲ್ಲಿ ಗಂಡು-87834, ಹೆಣ್ಣು-88283, ಒಟ್ಟು 176117 ಮತದಾರರು ಮತ ಚಲಾಯಿಸಿದ್ದು, ಶೇ80.50 ಮತದಾನವಾಗಿದೆ.

ಮಂಡ್ಯ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಮತ ಎಣಿಕೆ ವೀಕ್ಷಕರಾಗಿ ನೀರಜ್ ಕುಮಾರ್ ಅವರನ್ನು ಭಾರತ ಚುನಾವಣಾ ಆಯೋಗವು ನೇಮಕ ಮಾಡಲಾಗಿದ್ದು, ಅವರು ನಾಳೆ ಮಂಡ್ಯ ಜಿಲ್ಲೆಗೆ ಆಗಮಿಸುತ್ತಿದ್ದಾರೆ ಎಂದರು.

ಲೋಕಸಭಾ ಚುನಾವಣೆಯ ಮತ ಎಣಿಕೆ ಪ್ರಕ್ರಿಯೆಯು ಮಂಡ್ಯ ವಿಶ್ವವಿದ್ಯಾನಿಲಯದ ಕಾಮರ್ಸ್ ಬ್ಲಾಕ್ ನಲ್ಲಿ . ಜೂನ್ 4 ರಂದು ಬೆಳಿಗ್ಗೆ 8 ಗಂಟೆಗೆ ಮತ ಎಣಿಕೆ ಕಾರ್ಯವು ಪ್ರಾರಂಭವಾಗಲಿದೆ. ಚುನಾವಣೆ ಏಜೆಂಟರುಗಳಿಗೆ ಮತದಾನ ಪ್ರಕ್ರಿಯೆ ಬಗ್ಗೆ ಮಾಹಿತಿ ನೀಡಲು ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ ಎಂದರು.



### 4 ರಿಂದ 5 ರವರೆಗೆ ನಿಷೇಧಾಜ್ಞೆ ಜಾರಿ

**ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ರ ಮತ ಎಣಿಕೆಯು ಜೂನ್ 4 ರಂದು ಮಂಡ್ಯ ನಗರದಲ್ಲಿ ನಡೆಯಲಿರುವುದರಿಂದ ಮತ ಎಣಿಕೆ ದಿನದಂದು ಮತ್ತು ಮತ ಎಣಿಕೆ ಕಾರ್ಯವು ಮುಗಿಯುತ್ತಿದ್ದಂತೆ ಗೆದ್ದ ಅಭ್ಯರ್ಥಿಗಳು ಅವರ ಬೆಂಬಲಿಗರೊಡನೆ ಪಟಾಕಿ ಸಿಡಿಸಿಕೊಂಡು ಮೆರವಣಿಗೆಯ ಮೂಲಕ ವಿಜಯೋತ್ಸವವನ್ನು ಆಚರಿಸುವುದರಿಂದ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ದೃಷ್ಟಿಯಿಂದ ಜೂನ್ 4 ರ ಬೆಳಿಗ್ಗೆ 6 ಗಂಟೆಯಿಂದ ಜೂನ್ 5 ರ ಬೆಳಿಗ್ಗೆ 6 ಗಂಟೆಯವರೆಗೆ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.ಮಂಡ್ಯ ನಗರ ವ್ಯಾಪ್ತಿ ಹಾಗೂ ನಗರ ವ್ಯಾಪ್ತಿಯಿಂದ ಐದು ಕಿಲೋಮೀಟರ್ ಸುತ್ತಳತೆ ವ್ಯಾಪ್ತಿಯಲ್ಲಿ ಜೂನ್ 3 ರಂದು ಸಂಜೆ 6 ಗಂಟೆಯಿಂದ ಜೂನ್ 5 ಬೆಳಿಗ್ಗೆ 6 ರವರೆಗೆ ಪ್ರಜಾ ಪ್ರಾತಿನಿಧ್ಯ ಕಾಯ್ದೆ 1951 ರ ಸೆಕ್ಷನ್ 135ಸಿ ಮತ್ತು ಅಬಕಾರಿ ಕಾಯ್ದೆ 1965 ರ ಕಲಂ 21 ರಂತೆ ಒಣ ದಿನವನ್ನು ಜಿಲ್ಲೆಯಲ್ಲಿ ಆಚರಿಸಲು ಮದ್ಯವನ್ನು ನಿಷೇಧಿಸಲಾಗಿದೆ.**

### ಜಪ್ತಿ ಮಾಡಲಾದ ಮದ್ಯ, ನಗದುಗಳ ವಿವರ

**ಮಾದರಿ ನೀತಿ ಜಾರಿಯಾದ ಮಾರ್ಚ್ 16 ರಿಂದ ಏಪ್ರಿಲ್ 26ರವರೆಗೆ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಎಂಟು ವಿಧಾನಸಭಾ ಕ್ಷೇತ್ರಗಳ 25 ಚೆಕ್ ಪೋಸ್ಟ್‌ಗಳಲ್ಲಿ ಸ್ಪಷ್ಟ ದಾಖಲೆಗಳಿಲ್ಲದೆ ಅಕ್ರಮವಾಗಿ ಸಾಗಿಸುತ್ತಿದ್ದ ರೂ. 1,06,08,990/- ನಗದು, ರೂ.1,50,27,871.39/- ಮೌಲ್ಯದ ಮದ್ಯ, ರೂ. 2,17,040/- ಮೌಲ್ಯದ ಡ್ರಗ್ಸ್ ಹಾಗೂ ರೂ. 40,000 ಮೌಲ್ಯದ 2000 ಸೀರೆಗಳನ್ನು ವಶಪಡಿಸಿಕೊಳ್ಳಲಾಗಿದೆ.**

### ಸಿಸಿ ಕ್ಯಾಮರಾ ಮತ್ತು ವೆಬ್ ಕ್ಯಾಸ್ಟಿಂಗ್

**ಚುನಾವಣೆಯ ಎಲ್ಲಾ ಮತ ಎಣಿಕೆ ಕೇಂದ್ರಗಳಲ್ಲಿ ಮತ ಎಣಿಕೆ ಪ್ರಕ್ರಿಯೆ ಮತ್ತು ಚುನಾವಣಾ ಏಜೆಂಟರ ಚಲನವಲನಗಳ ಬಗ್ಗೆ ನಿಗಾ ವಹಿಸಲಿಕ್ಕೆ ಪ್ರತಿ ಟೇಬಲ್ ಗೆ 1 ಸಿಸಿ ಕ್ಯಾಮರಾವಿದ್ದು, ಒಟ್ಟು 123 ಟೇಬಲ್ ಗಳಿಗೆ 123 ವೆಬ್ ಕಾಸ್ಟಿಂಗ್ ಕ್ಯಾಮರಾವನ್ನು ಅಳವಡಿಸಲಾಗುತ್ತದೆ. ಭದ್ರತಾ ಕೊಠಡಿಯ ಹೊರಾಂಗಣದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಹಿತದೃಷ್ಟಿಯಿಂದ ಸಿಸಿ ಕ್ಯಾಮೆರಾ ಗಳನ್ನು ಅಳವಡಿಸಲಾಗಿರುತ್ತದೆ.**

### ಮತ ಎಣಿಕೆ ಕೊಠಡಿ

**ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯ 8 ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ತಲಾ 2 ಕೊಠಡಿಗಳಂತೆ ಒಟ್ಟು 16 ಕೊಠಡಿಗಳಲ್ಲಿ ತಲಾ 7 ಟೇಬಲ್ ಗಳಂತೆ ಅಂದರೆ 112 ಟೇಬಲ್ ಗಳಲ್ಲಿ ಇವಿಎಂ ಮತ ಎಣಿಕೆ ಕಾರ್ಯ ನಡೆಯಲಿದೆ. ಅಂಚೆ ಮತ ಪತ್ರ ಹಾಗೂ ಇಖಿಕಿಃಖ ಮತಪತ್ರಗಳ ಎಣಿಕೆ 2 ಕೊಠಡಿಗಳಲ್ಲಿ ಒಟ್ಟು 11 ಟೇಬಲ್ ಗಳಲ್ಲಿ ಮತ ಎಣಿಕೆ ನಡೆಯಲಿದೆ ಎಂದರು. ಜಿಲ್ಲೆಯ 8 ವಿಧಾನಸಭಾ ಕ್ಷೇತ್ರದಲ್ಲಿ ಪ್ರತಿ ಕ್ಷೇತ್ರಕ್ಕೆ 14 ಟೇಬಲ್ ಗಳಂತೆ ಒಟ್ಟು 123 ಟೇಬಲ್ಗಳಲ್ಲಿ, ಒಟ್ಟು 151 ಸುತ್ತುಗಳ ಮತ ಎಣಿಕೆ ಪ್ರಕ್ರಿಯೆಯು ನಡೆಯಲಿದೆ. ಮಳವಳ್ಳಿಯಲ್ಲಿ 20 ಸುತ್ತು, ಮದ್ದೂರು - 19 ಸುತ್ತು, ಮೇಲುಕೋಟೆ -19 ಸುತ್ತು, ಮಂಡ್ಯ - 19 ಸುತ್ತು, ಶ್ರೀರಂಗಪಟ್ಟಣ - 18 ಸುತ್ತು, ನಾಗಮಂಗಲ - 19 ಸುತ್ತು, ಕೆ. ಆರ್. ಪೇಟೆ - 19 ಸುತ್ತು, ಕೆ. ಆರ್. ನಗರ - 18 ಸುತ್ತುಗಳಲ್ಲಿ ಮತ ಎಣಿಕೆ ನಡೆಯಲಿದೆ. ಮತ ಎಣಿಕೆ ಸಿಬ್ಬಂದಿಗಳ ನೇಮಕ ಇ. ವಿ. ಎಂ. ಮತ ಎಣಿಕೆಗಾಗಿ ಮತ್ತು ಅಂಚೆ ಮತಪತ್ರ, ಹಾಗೂ ಇಖಿಕಿಃಖ ಮತಪತ್ರಗಳ ಎಣಿಕೆಗಾಗಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ 44 ಸಿಬ್ಬಂದಿಗಳು ಹಾಗೂ ಮೀಸಲು 48 ಸಿಬ್ಬಂದಿಗಳು ಸೇರಿದಂತೆ ಒಟ್ಟು 400 ಅಧಿಕಾರಿ/ ನೌಕರರನ್ನು ನೇಮಿಸಲಾಗಿದೆ. ಇವರಲ್ಲಿ 16 ಎಆರ್ ಒಗಳು, 128 ಕೌಂಟಿಂಗ್ ಸೂಪರ್ ವೈಸರ್ ಗಳು, 128 ಕೌಂಟಿಂಗ್ ಅಸಿಸ್ಟೆಂಟ್ ಗಳು, 128 ಮೈಕ್ರೋ ವೀಕ್ಷಕರನ್ನು ನೇಮಕ ಮಾಡಲಾಗಿದೆ ಎಂದರು. ಅಂಚೆ ಮತಪತ್ರ ಮತ್ತು ಇವಿಎಂ ಮತಪತ್ರಗಳ ಮತ ಎಣಿಕೆ ಸಿಬ್ಬಂದಿಗಳ ನೇಮಕ ಅಂಚೆ ಮತಪತ್ರ ಮತ್ತು ಇಖಿಕಿಃಖ ಮತ ಪತ್ರಗಳ ಎಣಿಕೆ ಕಾರ್ಯದ ಸಂಪೂರ್ಣ ಮೇಲ್ವಿಚಾರಣೆಯನ್ನು ಸಹಾಯಕ ಚುನಾವಣಾ ಅಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಡಾ. ಹೆಚ್. ಎಲ್. ನಾಗರಾಜುರವರು ನಿರ್ವಹಿಸಲಿದ್ದಾರೆ. ಅಂಚೆ ಮತಪತ್ರ ಮತ್ತು ಇಖಿಕಿಃಖ ಮತಪತ್ರಗಳ ಮತ ಎಣಿಕೆಗೆ ಒಟ್ಟು 69 ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದ್ದು, 13 - ಎಆರ್ ಒ ಗಳು, 14- ಕೌಂಟಿಂಗ್ ಸೂಪರ್ ವೈಸರ್ ಗಳು, 28 - ಕೌಂಟಿಂಗ್ ಅಸಿಸ್ಟೆಂಟ್ಗಳು, 14 - ಮೈಕ್ರೋ ಅಬ್ಸರ್ವರ್ ಗಳಿಗೆ ಮತ ಎಣಿಕೆಗೆ ಸಂಬಂಧಿಸಿದಂತೆ ಇವರುಗಳಿಗೆ ಪ್ರತ್ಯೇಕವಾಗಿ ತರಬೇತಿ ನೀಡಲಾಗಿದೆ ಎಂದರು.**



# ಭವಿಷ್ಯಕ್ಕಾಗಿ ಭೂಮಿ ಉಳಿಸುವ ಕೆಲಸ ಮಾಡೋಣ

**ಮಂಡ್ಯ** : 200 ಕೋಟಿಗಳ ವರ್ಷದ ಇತಿಹಾಸ ಇರುವ ಭೂಮಿಯನ್ನು ಭವಿಷ್ಯದ ದೃಷ್ಟಿಯಿಂದ ಉಳಿಸುವ ಕೆಲಸವನ್ನು ಮಾಡುವ ಅವಶ್ಯಕತೆ ಇದೆ. ವಿದ್ಯಾರ್ಥಿಗಳಿಗೆ ಭೂಮಿಯ ಬಗ್ಗೆ ತಿಳಿಸಿಕೊಡುವ ಕೆಲಸ ಮಾಡುವ ಅಗತ್ಯತೆ ಇದೆ ಎಂದು ಪಿಇಟಿ ನಿರ್ದೇಶಕ ಡಾ.ರಾಮಲಿಂಗಯ್ಯ ತಿಳಿಸಿದರು.

ಜಿಲ್ಲಾಡಳಿತ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪರಿಸರ ರೂರಲ್ ಡೆವಲಪ್ಮೆಂಟ್ ಸೊಸೈಟಿ ವತಿಯಿಂದ 'ನಮ್ಮ ಭೂಮಿ ನಮ್ಮ ಭವಿಷ್ಯ' ಎಂಬ ಘೋಷವಾಕ್ಯ ದಡಿ ವಿಶ್ವ ಪರಿಸರ ದಿನ-2024 ನಿಮಿತ್ತ ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಛೇರಿಯ ಕಾವೇರಿ ಉದ್ಯಾನದಲ್ಲಿಮಾಧ್ಯಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಚಿತ್ರಕಲಾ ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಭಿವೃದ್ಧಿ ಹೆಸರಲ್ಲಿ ಮರಗಳನ್ನು ಕಡಿಯುತ್ತಿರುವುದರಿಂದ ಇತ್ತೀಚಿನ ವರುಷಗಳಲ್ಲಿ ಮಳೆಯ ಪ್ರಮಾಣ ಕಡಿಮೆಯಾಗುತ್ತಿದೆ.ಆದ್ದರಿಂದ ಪ್ರತಿಯೊಬ್ಬರು ತಮ್ಮ ಮನೆಯಲ್ಲಿ ಗಿಡಗಳನ್ನು ನೆಟ್ಟು ಪೋಷಿಸು ವುದರಿಂದ ಪರಿಸರ ಸಂರಕ್ಷಣೆ ಮಾಡಿದಂತಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಪರಿಸರ ಅಧಿಕಾರಿ ಬಿ.ಪಿ. ಗೀತಾ ಮಾತನಾಡಿ ಹಸಿರು ನಾಡು ಎನ್ನುವ ಮಂಡ್ಯ ಜಿಲ್ಲೆಯಲ್ಲಿ ಈ ಬಾರಿಯ ಬೇಸಿಗೆ ಬಿಸಿಲು ಜನರಿಗೆ ಎಷ್ಟೊಂದು ಕಷ್ಟ ಕೊಟ್ಟಿದೆ ಎಂಬುದನ್ನು ಅರಿತು ಪರಿಸರ ಉಳಿವಿಗಾಗಿ ಜನರು ಗಿಡಮರಗಳನ್ನು ಬೆಳೆಸಿ ಎಂದು ತಿಳಿಸಿದರು.

ಮಾನವನ ದುರಾಸೆಯಿಂದ ಪರಿಸರವನ್ನು ಹಾಳು ಮಾಡುತ್ತಿದ್ದಾನೆ.ಮುಂದಿನ ಪೀಳಿಗೆಗೆ ಪರಿಸರದ ಉಳಿಸಲು ಇಂತಹ ಚಿತ್ರಕಲಾ ಸ್ಪರ್ಧೆಗಳನ್ನು ವಿದ್ಯಾರ್ಥಿಗಳಿಗೆ ಏರ್ಪಡಿಸಿ ಅರಿವು ಮೂಡಿಸಲಾಗುತ್ತಿದೆ ಎಂದರು.

1972 ರಿಂದ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಿಕೊಂಡು ಬರಲಾಗುತ್ತಿದ್ದು ಈ ಭಾರಿ ನಮ್ಮ ಭೂಮಿ ನಮ್ಮ ಭವಿಷ್ಯ ಎಂಬ ಘೋಷವಾಕ್ಯದಡಿ ವಿಶ್ವ ಪರಿಸರ ದಿನ ಆಚರಿಸಲಾಗುತ್ತಿದೆ ಎಂದರು. ಪರಿಸರ ಸಂಸ್ಥೆಯ ಅಧ್ಯಕ್ಷ ಮಂಗಲ ಎಂ.ಯೋಗೀಶ್ ಮಾತನಾಡಿ ರಚನಾತ್ಮಕವಾಗಿ ಪರಿಸರಸ್ನೇಹಿ ಚಟುವಟಿಕೆಗಳನ್ನು ಯುವ ಜನತೆಯಲ್ಲಿ ಹಮ್ಮಿಕೊಳ್ಳುವ ಮೂಲಕ ಕಾರ್ಯಕ್ರಮ ರೂಪಿಸಲಾಗುತ್ತಿದೆ ಎಂದರು. ವಿದ್ಯಾರ್ಥಿಗಳಿಗೆ ಪರಿಸರ ಸಂರಕ್ಷಣ ಕುರಿತು ಚಿತ್ರಕಲಾ ಸ್ಪರ್ಧೆ ಏರ್ಪಡಿಸಿರುವುದರಿಂದ ಮಕ್ಕಳಲ್ಲಿ ಪರಿಸರದ ಬಗ್ಗೆ ಅರಿವು ಮೂಡುತ್ತದೆ ಎಂದರು. ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಮಂಡ್ಯದಲ್ಲಿ ಸೈಕಲ್ ಜಾಥ ಹಮ್ಮಿಕೊಳ್ಳುವ ಮೂಲಕ ಮಿಮ್ಸ್ ಆಸ್ಪತ್ರೆಯ ರೋಗಿಗಳಿಗೆ ಪರಿಸರಸ್ನೇಹಿ ಬಟ್ಟೆ ಬ್ಯಾಗುಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು. ಉಪ ಪರಿಸರ ಅಧಿಕಾರಿಗಳಾದ ಅಶ್ವಿನಿ, ಭವ್ಯ, ಗಾಯಕ ಸಂತೆಕಸಲಗೆರೆ ಬಸವರಾಜ್ ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಪೋಸ್ಟಲ್ ಐಪಿಪಿಬಿ ಖಾತೆ ತೆರೆಯುವ ಮೂಲಕ ಪರಿಹಾರ

**ವಿಜಯಪುರ:** ಪಟ್ಟಣದಲ್ಲಿನ ಸಾಕಷ್ಟು ಮಹಿಳೆಯರು ಗೃಹಲಕ್ಷ್ಮಿ ಯೋಜನೆ, ಪಡಿತರ ಅಕ್ಕಿಯ ಹಣದ ಜಮಾ, ವೃದ್ಧಾಪ್ಯ ವೇತನ, ವಿಧವಾ ವೇತನ ಮುಂತಾದವುಗಳು ಬ್ಯಾಂಕುಗಳಲ್ಲಿ ಸರಿಯಾಗಿ ಬಾರದೇ ಇದ್ದವರು ಪೋಸ್ಟ್ ಆಫೀಸಿನಲ್ಲಿ ಇಂಡಿಯನ್ ಪೋಸ್ಟ್ ಪೇಮೆಂಟ್ ಬ್ಯಾಂಕ್ (ಐಪಿಪಿಬಿ) ಖಾತೆಗಳನ್ನು ತೆರೆಯುವ ಮೂಲಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡಿರುವರು.

ಆನಂದ ನಗರದ ಮಂಜುಳಾ ರವರಿಗೆ ಈ ಹಿಂದೆ ಬ್ಯಾಂಕ್ ನಲ್ಲಿ ಗೃಹಲಕ್ಷ್ಮಿ ಯೋಜನೆಯ ಹಣ ಜಮಾ ಆಗುತ್ತಿದ್ದದು ನಂತರ ಮೂರು ತಿಂಗಳಿಂದ ಹಣ ಬಾರದೆ ತೊಂದರೆಗೊಳಗಾಗಿದ್ದರು. ಅವರು ಮೂರು ತಿಂಗಳ ಹಿಂದೆ ಪಟ್ಟಣದ ಪೋಸ್ಟ್ ಆಫೀಸ್ನಲ್ಲಿ ಬ್ಯಾಂಕ್ ಖಾತೆ ತೆಗೆದು ಬಾರದೇ ಇದ್ದ ಮೂರು ತಿಂಗಳ ಹಣವನ್ನು ಸೇರಿ ಇದೀಗ ಪ್ರತಿ ತಿಂಗಳು ತಮ್ಮ ಪೋಸ್ಟಲ್ ಖಾತೆಗೆ ಗೃಹಲಕ್ಷ್ಮಿ ಹಾಗೂ ಪಡಿತರ ಚೀಟಿ ಅಕ್ಕಿಯ ಹಣ ಜಮಾ ಆಗುತ್ತಿರುವ ಬಗ್ಗೆ ಸಂತಸ ವ್ಯಕ್ತಪಡಿಸಿದರು.

ಶ್ರೀರಂಗ ನಗರದಲ್ಲಿ ವಾಸವಾಗಿರುವ ಲಲಿತಮ್ಮ ರವರು ಬ್ಯಾಂಕ್ ನಲ್ಲಿ ನಾಲ್ಕು ವರ್ಷಗಳಿಂದ ವಿಧವಾ ವೇತನ ಪಡೆಯುತ್ತಿದ್ದವರು ಗೃಹಲಕ್ಷ್ಮಿ ಖಾತೆಯ ಹಣ ಪಡೆಯಲು ಬ್ಯಾಂಕಿಗೆ ಲಿಂಕ್ ಮಾಡಿದ ಕೂಡಲೇ ಬರುತ್ತಿದ್ದ ವಿಧವಾ ವೇತನ ಸಹ ಬಾರದಂತಾಗಿದ್ದು ಪರದಾಡುತ್ತ ಇದೀಗ ಪೋಸ್ಟ್ ಆಫೀಸ್ನಲ್ಲಿ ಬ್ಯಾಂಕ್ ಖಾತೆ ತೆರೆಯಲು ಬಂದಿದ್ದು ಕಂಡುಬಂದಿತು. ರಾಜೀವ್ ನಗರದ ನಿವಾಸಿ ಸುಜಾತಾ ರವರ ಪಾಡು ಸಹ ಇದೇ ಆಗಿದ್ದು ಎರಡು ತಿಂಗಳು ಗೃಹಲಕ್ಷ್ಮಿ ಹಣ ಬಂದ ನಂತರ ಇದೀಗ ಮತ್ತೆ ಬ್ಯಾಂಕ್ ನಲ್ಲಿ ಹಣ ಬಾರದಿರುವ ಕಾರಣ ಪೋಸ್ಟ್ ಆಫೀಸ್ನಲ್ಲಿ ಖಾತೆ ತೆರೆಯಲು ಬಂದಿದ್ದರು. ಪೋಸ್ಟ್ ಆಫೀಸಿನಲ್ಲಿ ಖಾತೆ ತೆರೆಯಲು ಆಗಮಿಸಿದ್ದ 80 ವರ್ಷದ ವೃದ್ದೆಯೊಬ್ಬರ ಹೆಬ್ಬೆರಳ ಗೆರೆಗಳು ಅಳಿಸಿರುವ ಕಾರಣ ಖಾತೆ ತೆರೆಯಲು ಸಾಧ್ಯವಾಗದೆ, ಥಂಬ್ ಪಡೆಯಲು ಸಾಧ್ಯವಾಗದೆ ಪರದಾಡುತ್ತಿದ್ದು ಕಂಡುಬಂದಿತು.



### ಸುಳ್ಳು ಸುದ್ದಿಗೆ ಮೋಸ ಹೋಗಬೇಡಿ

**ಪೋಸ್ಟ್ ಮಾಸ್ಟರ್ ಹರೀಶ್ ರವರು ವರದಿಗಾರರೊಂದಿಗೆ ಮಾತನಾಡಿ ಪೋಸ್ಟ್ ಆಫೀಸಲ್ಲಿ 8000 ಹಣ ಮತ್ತಿತರೆ ಹಣ ಹೆಣ್ಣು ಮಕ್ಕಳಿಗೆ ಜಮಾ ಮಾಡಲಾಗುತ್ತದೆ ಎಂಬ ಸುಳ್ಳು ಸುದ್ದಿಗಳಿಗೆ ಒಳಗಾಗಿ ಖಾತೆ ತೆರೆಯಲು ಒತ್ತಾಯಪೂರ್ವಕವಾಗಿ ಬರಬಾರದೆಂದು ಈ ತರಹ ಯಾವುದೇ ಹಣ ಪೋಸ್ಟಲ್ ಖಾತೆಗಳಿಗೆ ಬರುವುದಿಲ್ಲವೆಂದು ಅವಶ್ಯಕತೆ ಇರುವವರು ಗೃಹಲಕ್ಷ್ಮಿ, ವೃದ್ಧಾಪ್ಯವೇತನ ಮುಂತಾಗಿ ಇನ್ನಿತರೆ ಹಣ ಈಗಾಗಲೇ ಬರುತ್ತಿದ್ದು ತೊಂದರೆಗೊಳಗಾದವರು ಮಾತ್ರ ಪೋಸ್ಟ್ ಆಫೀಸಿನಲ್ಲಿ ಖಾತೆ ತೆರೆದು ಸಮಸ್ಯೆ ಬಗೆಹರಿಸಿಕೊಳ್ಳಬಹುದೆಂದು ತಿಳಿಸಿದರು.**

ಇಂತಹ ಸಮಸ್ಯೆಗಳಿಗೂ ಸರಕಾರದಿಂದ ಯಾವುದಾದರೂ ಪರಿಹಾರ ದೊರಕಿಸಿಕೊಡಬೇಕಾಗಿದೆ. ಪೋಸ್ಟ್ ಆಫೀಸಿನಲ್ಲಿಯೂ ಸಹ ಪದೇಪದೇ ಸರ್ವರ್ ಸಮಸ್ಯೆ ನೀಡುವುದರೊಂದಿಗೆ ಪ್ರತಿದಿನ ಇಂತಹ ತೊಂದರೆಗೊಳಗಾದಂತಹ 25ರಿಂದ 30 ಖಾತೆಗಳನ್ನು ತೆರೆಯುತ್ತಿರುವುದಾಗಿ ಸಿಬ್ಬಂದಿ ವರ್ಗ ತಿಳಿಸಿದರು.

# ಶಿಕ್ಷಕರು ಸಮಾಜ ನಿರ್ಮಾಣದ ರುವಾರಿಗಳು

**ವಿಜಯಪುರ:** ಸಮಾಜದಲ್ಲಿ ಯಾವುದೇ ಒಂದು ಮಗುವನ್ನು ಸಂಸ್ಕಾರವಂತ ನಾಗರಿಕನನ್ನಾಗಿಸುವಲ್ಲಿ ಶಿಕ್ಷಕರ ಪಾತ್ರ ಹಿರಿದಾಗಿದ್ದು, ಒಟ್ಟಾರೆ ಶಿಕ್ಷಕರು ಸಮಾಜ ನಿರ್ಮಾಣದ ಪ್ರಮುಖ ರೂವಾರಿಗಳಾಗಿರುವರೆಂದು ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಸುಮಾ ಅವರು ತಿಳಿಸಿದರು.

ಅವರು ಹೋಬಳಿಯ ನಾರಾಯಣಪುರದ ಹಿರಿಯ ಪ್ರಾಥಮಿಕ ಪಾಠ ಶಾಲೆಯ ಆವರಣದಲ್ಲಿ ಏರ್ಪಡಿಸಿದ್ದ ಮುಖ್ಯೋಪಾಧ್ಯಾಯರಾಗಿ ನಿವೃತ್ತರಾದ ಚಂದ್ರಶೇಖರ್ ಹಡಪದ್‌ರವರ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಗೊಡ್ಲು ಮುದ್ದೇನ ಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯರಾದ ಮುರಳಿಧರ್ ರವರು ಮಾತನಾಡಿ ಮುಖ್ಯೋಪಾಧ್ಯಾಯರಾದ ಚಂದ್ರಶೇಖರ್ ಹಡಪದ್ ರವರು ಕಳೆದ 39 ವರ್ಷಗಳಿಂದ ಶಿಕ್ಷಣ ಕ್ಷೇತ್ರದ ಹಲವು ರಂಗಗಳಲ್ಲಿ ಸೇವೆ ಸಲ್ಲಿಸಿದ್ದು, ಶಿಕ್ಷಕರಾಗಿ, ಸಂಪನ್ಮೂಲ ವ್ಯಕ್ತಿಯಾಗಿ, ಮುಖ್ಯೋಪಾಧ್ಯಾಯರಾಗಿ, ಅಷ್ಟೇ ಅಲ್ಲದೆ ಪ್ರವೃತ್ತಿಯಲ್ಲಿ ಸಾಹಿತ್ಯ ಪರಿಚಾರಕರಾಗಿ, ದೇವನಹಳ್ಳಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಹಾಗೂ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾಗಿ ಸೇವೆಗಳನ್ನು ಸಲ್ಲಿಸಿದ್ದು, ಹಡಪದ್‌ರವರು ಮುಖ್ಯೋಪಾಧ್ಯಾಯರಾಗಿ ಆಧುನಿಕ ಹೊಸ ಸವಾಲುಗಳಿಗೆ ಹೊಂದಿಕೊಳ್ಳುವಂತಹ ವೈಚಾರಿಕ ಮನೋಭಾವ ವ್ಯಕ್ತಿತ್ವ ಇಟ್ಟುಕೊಂಡಿದ್ದು, ಅವರ ಬಹುಮುಖ ಪ್ರತಿಭೆಗೆ ಉದಾಹರಣೆಯಾಗಿದೆ ಎಂದು ತಿಳಿಸಿದರು.

ಶಾಲಾ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಸುಧಾಕರ್ ರವರು ಮಾತನಾಡುತ್ತಾ ಚಂದ್ರಶೇಖರ್ ಹಡಪದ್‌ರವರು



ನಮ್ಮ ಶಾಲೆಗೆ ಬಂದು ಸಾಕಷ್ಟು ಬದಲಾವಣೆ ತರುವ ಪ್ರಯತ್ನ ಮಾಡುವುದರೊಂದಿಗೆ ಯಶಸ್ಸನ್ನು ಸಾಧಿಸಿದರೆಂದು ತಿಳಿಸಿದರು. ಅಭಿನಂದನೆ ಸ್ವೀಕರಿಸಿ ಮಾತನಾಡಿದ ಮುಖ್ಯೋಪಾಧ್ಯಾಯ ಚಂದ್ರಶೇಖರ ಹಡಪದ್‌ರವರು ಶಾಲೆಗಳು ನಿತ್ಯ ಕಲಿಕೆಯ ಕಾಯಕವಾಗಬೇಕು, ಪ್ರತಿ ಮಗುವಿನ ಆಸಕ್ತಿ ಮನೋಭಾವ ಶಿಕ್ಷಕರುಗಳು ಅರಿಯಬೇಕು, ಸರ್ಕಾರದ ಯೋಜನೆಯೊಂದಿಗೆ ಸಮುದಾಯದ ಅಗತ್ಯ ಅರಿತು, ಸಹಶಿಕ್ಷಕರುಗಳೊಂದಿಗೆ ಹಾಗೂ ಸಹಕಾರ ಸಂಸ್ಥೆಗಳಿಂದ ಅನುಕೂಲ ಪಡುವಂತಹ ಕ್ರಿಯಾಶೀಲ ಗುಣ ಪ್ರತಿಯೊಬ್ಬ ಶಿಕ್ಷಕರಿಗೂ ಇರಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಹ ಶಿಕ್ಷಕರುಗಳಾದ ಎಬಿ ಪರಮೇಶಯ, ಪ್ರೌಢಶಾಲೆಯ ಮುಖ್ಯ ಶಿಕ್ಷಕ ಪಿಎಮ್ ಕೊಟ್ರೇಶ್, ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಆದರ್ಶ್, ಮಾಜಿ ಕಾರ್ಯದರ್ಶಿ ಮಂಜುನಾಥ್, ನಾರಾಯಣಪುರ ಗ್ರಾಮದ ಡೇರಿ ಅಧ್ಯಕ್ಷ ಚಂದ್ರೇಗೌಡ, ಸಿ ಆರ್ ಪಿ ಮುನಿಯಪ್ಪ, ಇಸಿಓ ನಾಗಪ್ಪ, ಮಂಜುನಾಥ್, ರವೀಂದ್ರ, ಬಿ ಆರ್ ಸಿ ಸಂಪನ್ಮೂಲ ವ್ಯಕ್ತಿಗಳು ಹಾಗೂ ಇನ್ನಿತರೆ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಸಂಜೆ ಟಿಪ್ಸ್

# ಯೊಕೊಗಾವಾದಿಂದ ಭಾರತದ ಫ್ಲೋಮೀಟರ್ ಉತ್ಪಾದಕ ಅಡೆಪ್ ಫ್ಲೂಯಿಡೈನ್ ಸ್ವಾಧೀನ

ಯೊಕೊಗಾವಾ ಇಂಡಿಯಾ ಲಿಮಿಟೆಡ್ ತನ್ನ ಪೋಷಕ ಕಂಪನಿ ಜಪಾನಿನ ಯೊಕೊಗಾವಾ ಎಲೆಕ್ಟ್ರಿಕ್ ಕಾರ್ಪೊರೇಷನ್ ಭಾರತದಲ್ಲಿ ಅತ್ಯಂತ ದೊಡ್ಡ ಮ್ಯಾಗ್ನೆಟಿಕ್ ಫ್ಲೋಮೀಟರ್ ಗಳ ಉತ್ಪಾದಕರಲ್ಲಿ ಒಂದಾದ ಅಡೆಪ್ಟ್ ಫ್ಲೂಯಿಡೈನ್ ಪ್ರೈ.ಲಿ.ಯ ಸ್ವಾಧೀನ ಪೂರ್ಣಗೊಳಿಸಿರುವುದನ್ನು ಪ್ರಕಟಿಸಿದೆ. ಈ ಸಂದರ್ಭದಲ್ಲಿ ಭಾರತ ಮತ್ತು ದಕ್ಷಿಣ ಏಷ್ಯಾ ಪ್ರದೇಶದ ಚೀಫ್ ಎಕ್ಸಿಕ್ಯೂಟಿವ್, ರೀಜನಲ್ ಮ್ಯಾನೇಜಿಂಗ್ ಡೈರೆಕ್ಟರ್ ಸಜೀವ್ ನಾಥ್, ಅಡೆಪ್ಟ್ ಫ್ಲೂಯಿಡೈನ್ ಪ್ರೈ.ಲಿ.ಯ ವ್ಯವಸ್ಥಾಪಕ ನಿರ್ದೇಶಕ ವಿನಾಯಕ್ ಗದ್ರೆ ಉಪಸ್ಥಿತರಿದ್ದರು. ಯೊಕೊಗಾವಾ ನೀರು ಮತ್ತು ತ್ಯಾಜ್ಯ ನೀರಿನ ಸಂಸ್ಕರಣೆಯ ಕಂಪನಿಗಳು, ತೈಲ ಮತ್ತು ಅನಿಲ ಕಂಪನಿಗಳು ಮತ್ತು ರಾಸಾಯನಿಕಗಳು ಮತ್ತು ಪೆಟ್ರೋ ಕೆಮಿಕಲ್ ಗಳು, ರಸಗೊಬ್ಬರಗಳು, ಔಷಧಗಳು ಮತ್ತು ಜೀವ ವಿಜ್ಞಾನಗಳು, ಲೋಹಗಳು ಮತ್ತು ಗಣಿಗಾರಿಕೆ, ವಿದ್ಯುತ್, ಆಹಾರ ಮತ್ತು ಪಾನೀಯ ಮತ್ತಿತರೆ ವಲಯಗಳ ಕಂಪನಿಗಳ ಕಾರ್ಯಾಚರಣೆಗಳಿಗೆ ಬೆಂಬಲಿಸುತ್ತದೆ. ಯೊಕೊಗಾವಾ 1987ರಲ್ಲಿ ಸ್ಥಳೀಯ ಅಧೀನ ಸಂಸ್ಥೆಯನ್ನು ಪ್ರಾರಂಭಿಸಿದೆ ಮತ್ತು ಅಂದಿನಿಂದಲೂ ಸಸ್ಯಗಳು ಮತ್ತು ಶಕ್ತಿ ಉದ್ಯಮಕ್ಕೆ ನಿಯಂತ್ರಣ ವ್ಯವಸ್ಥೆಗಳು ಮತ್ತು ಫೀಲ್ಡ್ ಇನ್ಸ್ಟ್ರುಮೆಂಟ್ಸ್ ಪೂರೈಸುತ್ತಿದೆ. ಫ್ಲೋಮೀಟರ್ ಗಳು ಹರಿವಿನ ಪ್ರಮಾಣ ಅಳೆಯುವ ಕೈಗಾರಿಕಾ ಸಾಧನಗಳಾಗಿದ್ದು ಅವು ದ್ರವ, ಅನಿಲ ಮತ್ತು ಹಬೆಯ ಸಾಂದ್ರತೆ ಮತ್ತು ಉಷ್ಣತೆ ಅಳೆಯಬಹುದು. ಅಳತೆಯ ಉದ್ದೇಶ ಆಧರಿಸಿ ಹಲವಾರು ಅಳತೆಯ ತಂತ್ರಜ್ಞಾನಗಳು ಲಭ್ಯವಿವೆ. ಭಾರತದ ಕೈಗಾರಿಕಾ ವಲಯವು ಭಾರತ ಸರ್ಕಾರದ 'ಮೇಕ್ ಇನ್ ಇಂಡಿಯಾ' ಉಪಕ್ರಮದಿಂದ ತೀವ್ರ ವಿಸ್ತರಣೆ ಕಾಣುತ್ತಿದ್ದು ಬಹುರಾಷ್ಟ್ರೀಯ ಮತ್ತು ಸ್ಥಳೀಯ ಕಂಪನಿಗಳಿಗೆ ಅವರ ಉತ್ಪನ್ನಗಳನ್ನು ದೇಶದ ಒಳಗಡೆ ಉತ್ಪಾದಿಸಲು ಉತ್ತೇಜಿಸುತ್ತಿರುವುದು ಫ್ಲೋಮೀಟರ್ ಗಳ ಬೇಡಿಕೆ ಹೆಚ್ಚಲು ಕಾರಣವಾಗಿದೆ. ಜಪಾನಿನ ಯೊಕೊಗಾವಾ ಎಲೆಕ್ಟ್ರಿಕ್ ಉಪಾಧ್ಯಕ್ಷ, ದಕ್ಷಿಣ ಏಷ್ಯಾದ ಚೀಫ್ ಎಕ್ಸಿಕ್ಯೂಟಿವ್, ಯೊಕೊಗಾವಾ ಇಂಡಿಯಾ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕ ಸಜೀವ್ ನಾಥ್, ''ನಾವು ಭಾರತೀಯ ಮಾರುಕಟ್ಟೆಗೆ ಬದ್ಧರಾಗಿದ್ದು ನಾವು ಅತ್ಯಂತ ದೃಢವಾಗಿ 'ಮೇಕ್ ಇನ್ ಇಂಡಿಯಾ'ದಲ್ಲಿ ನಂಬಿಕೆ ಇರಿಸಿದ್ದೇವೆ. ಭಾರತದ ಸುಸ್ಥಿರ ಪರಿವರ್ತನೀಯ ಪ್ರಗತಿಯ ಭಾಗವಾಗುವುದು ನಿಜಕ್ಕೂ ಉತ್ಸಾಹಕರವಾಗಿದೆ ಎಂದರು.

# 'ಬೋಂಡಾ' ರೆಸಿಪಿ

## ಪಾಕ ಶಾಲೆ



## ಮಾಡುವ ವಿಧಾನ

ಮೊದಲು ಅಕ್ಕಿ ಹಾಗೂ ಉದ್ದಿನ ಬೇಳೆಯನ್ನು 5 ಗಂಟೆಗಳ ಕಾಲ ನೀರಿನಲ್ಲಿ ನೆನೆಸಿಟ್ಟುಕೊಳ್ಳಬೇಕು ನಂತರ ನೆನೆಸಿದ ಅಕ್ಕಿ ಹಾಗೂ ಉದ್ದಿನ ಬೇಳೆಯನ್ನು ನುಣ್ಣಗೆ ರುಬ್ಬಿಕೊಂಡು ಸ್ವಲ್ಪ ಸಕ್ಕರೆ ಹಾಕಿ 8 ಗಂಟೆಗಳ ಕಾಲ ನೆನೆಯಲು ಬಿಡಬೇಕು, ಕಡಲೆಬೇಳೆಯನ್ನು ಚೆನ್ನಾಗಿ ತೊಳೆದು ಕುಕ್ಕರ್ ಗೆ ನೀರು ಹಾಕಿ ಚೆನ್ನಾಗಿ ಬೇಯಿಸಿಕೊಳ್ಳಬೇಕು. ಬೆಂದ ಕಡಲೆಬೇಳೆಗೆ ಬೆಲ್ಲ, ಏಲಕ್ಕಿ ಪುಡಿ ಹಾಗೂ ತುಪ್ಪವನ್ನು ಹಾಕಿ ಊರ್ಣವನ್ನು ಸಿದ್ಧಪಡಿಸಿಕೊಳ್ಳಬೇಕು. ನಂತರ ಬಾಣಲೆಗೆ ಎಣ್ಣೆಯನ್ನು ಹಾಕಿ ಕಾದ ನಂತರ ಊರ್ಣವನ್ನು ಉಂಡೆಗಳನ್ನು ಮಾಡಿಟ್ಟುಕೊಂಡು ಈ ಹಿಂದೆಯೇ ರುಬ್ಬಿಕೊಂಡಿದ್ದ ಹಿಟ್ಟಿನಲ್ಲಿ ಅದ್ದಿ, ಅದನ್ನು ಎಣ್ಣೆಗೆ ಹಾಕಿ ಚಿನ್ನದ ಬಣ್ಣ ಬರುವವರೆಗೆ ಕರಿದರೆ ರುಚಿಕರವಾದ ಸ್ವೀಟ್ ಬೋಂಡಾ ಸವಿಯಲು ಸಿದ್ಧ.

## ಬೇಕಾಗಿರುವ ಪದಾರ್ಥ

**ಕೊಬ್ಬರಿ ತುರಿ, ಏಲಕ್ಕಿ ಪುಡಿ, ತುಪ್ಪ- ಸ್ವಲ್ಪ, ಅಕ್ಕಿ- ಅರ್ಧ ಬಟ್ಟಲು, ಉದ್ದಿನ ಬೇಳೆ 1/4 ಬಟ್ಟಲು, ಬೆಲ್ಲ- 1 ಬಟ್ಟಲು, ಕಡಲೆಬೇಳೆ -1 ಬಟ್ಟಲು, ಎಣ್ಣೆ ಕರಿಯಲು**

# ಏಲಕ್ಕಿ ಪ್ರಯೋಜನಗಳು




## ಹೆಲ್ತ್ ಟಿಪ್ಸ್

ಏಲಕ್ಕಿಯಲ್ಲಿ ಜೀರ್ಣಕಾರಿ ಗುಣಗಳಿವೆ. ಏಲಕ್ಕಿಯಲ್ಲಿರುವ ಮೆಂಥೋನ್ ಎಂಬ ಎಣ್ಣೆಯಂಶಕ್ಕೆ ಜೀರ್ಣಕ್ರಿಯೆಗೆ ಸಹಾಯ ಮಾಡುವ ಗುಣವಿದೆ. ಇದು ಅಸಿಡಿಟಿ, ಅಜೀರ್ಣ ಹಾಗೂ ಹೊಟ್ಟೆ ನೋವಿನಂಥ ಸಮಸ್ಯೆಗಳಿಗೆ ಪರಿಹಾರ ಒದಗಿಸುತ್ತದೆ. ಇದಕ್ಕೆ ಜೀರ್ಣಕ್ರಿಯೆಯನ್ನು ಪ್ರಚೋದಿಸುವ ಗುಣವಿದೆ.

ಏಲಕ್ಕಿಯಲ್ಲಿ ವಾಂತಿ ಹಾಗೂ ತಲೆಸುತ್ತಿನಂಥ ಸಮಸ್ಯೆಗೆ ಪರಿಹಾರವಿದೆ. ವಾಂತಿಯಾದ ಮೇಲೆ ಆಗುವ ಗಂಟಲಿನ ಹುಳಿ ರುಚಿಯಂಥ ಕಿರಿಕಿರಿ ಗಂಟಲು ಕೆರೆತದ ಭಾವಕ್ಕೆ ಏಲಕ್ಕಿ ಒಳ್ಳೆಯ ಪರಿಹಾರ. ಅಷ್ಟೇ ಅಲ್ಲ, ಪ್ರಯಾಣದಲ್ಲಿ ಆಗುವ ವಾಂತಿಯಂಥ ಸಮಸ್ಯೆಗೂ ಏಲಕ್ಕಿಯನ್ನು ಬಾಯಲ್ಲಿ ಇಟ್ಟುಕೊಳ್ಳುವುದರಿಂದ ಈ ಸಮಸ್ಯೆಗೆ ಪರಿಹಾರ ಸಿಗುತ್ತದೆ.

ಏಲಕ್ಕಿಯಲ್ಲಿ ಆಂಟಿ ಸೆಪ್ಟಿಕ್ ಹಾಗೂ ಆಂಟಿ ಮೈಕ್ರೋಬಿಯಲ್ ಗುಣಗಳಿವೆ. ಇದರಿಂದಾಗಿ ಇದು ಹಲ್ಲಿನ ಸಮಸ್ಯೆಗಳಿಗೆ ಒಳ್ಳೆಯದು. ಏಲಕ್ಕಿಯಲ್ಲಿರುವ ಎಣ್ಣೆಯ ಅಂಶ ಹಲ್ಲು ನೋವಿಗೆ ಒಳ್ಳೆಯ ಔಷಧಿ. ಯಾಕೆಂದರೆ ಇದರಲ್ಲಿರುವ ಆಂಟಿ ಸೆಪ್ಟಿಕ್ ಗುಣವು ಕ್ಯಾವಿಟಿಗೆ ಬಹಳ ಒಳ್ಳೆಯದು. ಅಷ್ಟೇ ಅಲ್ಲ, ಹಲ್ಲು ಹುಳುಕಾಗುವುದನ್ನೂ ಇದು ತಡೆಯುತ್ತದೆ.

ಶೀತ ಹಾಗೂ ನೆಗಡಿಗೂ ಏಲಕ್ಕಿ ಒಳ್ಳೆಯದು ಎಂದರೆ ನಂಬುತ್ತೀರಾ? ಹೌದು, ನಂಬಲೇಬೇಕು. ಏಲಕ್ಕಿಯಲ್ಲಿರುವ ವಿಶೇಷ ಗುಣವು ಕಫ ಕಟ್ಟುವುದನ್ನು ತಡೆಯುತ್ತದೆ. ಇದು ಶ್ವಾಸಕೋಶದಲ್ಲಿ ರಕ್ತ ಪರಿಚಲನೆಯನ್ನು ಚುರುಕಾಗಿಸುತ್ತದೆ. ಇದರಿಂದ ಉಸಿರಾಟದ ಗತಿಯೂ ಚುರುಕಾಗುತ್ತದೆ. ಏಲಕ್ಕಿ ಅತ್ಯುತ್ತಮ ಡಿಟಾಕ್ಸ್ ಕೂಡಾ ಹೌದು. ಇದು ರಕ್ತದಲ್ಲಿರುವ ವಿಷಕಾರಿ ಅಂಶವನ್ನು ದೇಹದಿಂದ ಹೊರಕ್ಕೆ ಕಳುಹಿಸುತ್ತದೆ. ಏಲಕ್ಕಿಯಲ್ಲಿರುವ ಏಸೆನ್ಶಿಯಲ್ ಆಯಿಲ್ ಹಾಗೂ ಫೈಟೋಕೆಮಿಕಲ್ಗಳಲ್ಲಿ ಡಿಟಾಕ್ಸ್ ಗುಣವಿದೆ. ನಿಕೋಟಿನ್ ಚಟಕ್ಕೆ ಬಿದ್ದ ಮಂದಿ, ಇದರಿಂದ ಹೊರಬರುವ ಇಚ್ಛೆಯಿದ್ದರೆ ನೈಸರ್ಗಿಕ ಉಪಾಯ ಎಂದರೆ ಅದು ಏಲಕ್ಕಿ. ಏಲಕ್ಕಿಯನ್ನು ದಿನಕ್ಕೆ ನಾಲ್ಕೈದು ಬಾರಿ ಜಗಿಯುವ ಮೂಲಕ ನಿಕೋಟಿನ್ ಬಯಕೆಯನ್ನು ನಿಧಾನವಾಗಿ ಹತ್ತಿಕ್ಕಬಹುದು. ಖಿನ್ನತೆಯಂತ ಸಮಸ್ಯೆ ಇರುವ ಮಂದಿಯ ನಿದ್ದೆಗೂ ಇದು ಒಳ್ಳೆಯದು. ಏಲಕ್ಕಿಯಲ್ಲಿ ಕ್ಯಾನ್ಸರ್ ವಿರೋಧಿ ಗುಣಗಳೂ ಇವೆ. ದೇಹದಲ್ಲಿರುವ ಕ್ಯಾನ್ಸರ್ ವಿರೋಧಿ ಕಿಣ್ವಗಳನ್ನು ಮತ್ತಷ್ಟು ಚುರುಕಾಗಿಸುವ ಮೂಲಕ ಏಲಕ್ಕಿ ಕ್ಯಾನ್ಸರ್ನಂತಹ ಕಾಯಿಲೆಯ ವಿರುದ್ಧವೂ ಹೋರಾಡುವ ಗುಣ ಹೊಂದಿದೆ. ಇತ್ತೀಚೆಗೆ ನಡೆದ ಅಧ್ಯಯನವೊಂದು ಇದನ್ನು ಪುಷ್ಟೀಕರಿಸುತ್ತದೆ. ಕ್ಯಾನ್ಸರ್ ಗಡ್ಡೆಯ ಅಂಗಾಂಶಗಳನ್ನು ಕೊಲ್ಲಲು ಏಲಕ್ಕಿಯಲ್ಲಿರುವ ವಿಶೇಷ ಗುಣವು ಸಹಾಯ ಮಾಡುತ್ತದೆ.

# ಹೊಳೆಯುವ ತ್ವಚೆಗೆ ಫೇಸ್ ಪ್ಯಾಕ್

## ಬ್ಯೂಟಿ ಟಿಪ್ಸ್



ಬಿಸಿಲು, ಮಾಲಿನ್ಯ, ಧೂಳಿನಿಂದ ತ್ವಚೆ ಮಂದವಾಗಿ ಕಾಣುತ್ತದೆ. ಎಷ್ಟೇ ಮೇಕಪ್ ಹಚ್ಚಿದರೂ ಕೂಡ ಅದರಿಂದ ಹೊಳೆಯುವ ಮೈಕಾಂತಿ ಸಿಗುವುದಿಲ್ಲ. ಹಾಗಾಗಿ ನಿಮಗೆ ಹೊಳೆಯುವ ಮೈಕಾಂತಿ ಬೇಕಾದಲ್ಲಿ ಈ ಫೇಸ್ ಪ್ಯಾಕ್ ಹಚ್ಚಿ.ಹೊಳೆಯುವ ತ್ವಚೆಯನ್ನು ಪಡೆಯಲು ಜೇನುತುಪ್ಪ, ಹಾಲನ್ನು ಮಿಶ್ರಣ ಮಾಡಿ ಮುಖ ಮತ್ತು ಕುತ್ತಿಗೆಗೆ ಹಚ್ಚಿ 20 ನಿಮಿಷ ಬಿಟ್ಟು ಮುಖವನ್ನು ತೊಳೆಯಿರಿ. ಇದು ಚರ್ಮವನ್ನು ಸ್ವಚ್ಛಗೊಳಿಸುತ್ತದೆ. ಹಾಗೇ ಮೊಸರು ಮತ್ತು ರೋಸ್ ವಾಟರ್ ಅನ್ನು ಬೆರೆಸಿದ ಫೇಸ್ ಪ್ಯಾಕ್ ಅನ್ನು ಮುಖಕ್ಕೆ ಹಚ್ಚಿ. ಇದು ಚರ್ಮದ ಕಾಂತಿಯನ್ನು ಹೆಚ್ಚಿಸುತ್ತದೆ. ಇದು ಚರ್ಮವನ್ನು ಮೃದುವಾಗಿಸುತ್ತದೆ. ಅಗಸೆ ಬೀಜವನ್ನು ಕೂದಲಿನ ಆರೈಕೆಯಲ್ಲಿ ಬಳಸುತ್ತಾರೆ. ಆದರೆ ಹೊಳೆಯುವ ತ್ವಚೆಗಾಗಿ ಅಗಸೆ ಬೀಜವನ್ನು ಬಳಸಬಹುದು. ಅಗಸೆ ಬೀಜದ ಪುಡಿಗೆ ಅಲೋವೆರಾ ಜೆಲ್ ಅನ್ನು ಬೆರೆಸಿ ಮುಖಕ್ಕೆ ಹಚ್ಚಿ ಒಣಗಿದ ಬಳಿಕ ತೊಳೆಯಿರಿ. ಇದು ಚರ್ಮವನ್ನು ಹೈಡ್ರೇಟ್ ಆಗಿಡುತ್ತದೆ.

# ಟೀಕೆ ಹೇಗೆ ಪೇಸ್ ಮಾಡಬೇಕು ಅಂತ ಪಾಠ ಹೇಳಿಕೊಟ್ಟ ಊರ್ವಶಿ ರೌಟೇಲಾ



ಕೇನ್ಸ್ ಫೆಸ್ಟಿವಲ್ ನಲ್ಲಿ ನಟಿ ಎಲ್ಲರ ಗಮನ ಸೆಳೆದಿದ್ದು. ತನ್ನ ಡ್ಯಾನ್ಸ್ ಮೂಲಕವೇ ಮನಗೆದ್ದ ಊರ್ವಶಿ ಸೌತ್ ಸಿನಿಮಾಗಳಲ್ಲಿ ಸದ್ದು ಮಾಡ್ತಿದ್ದಾರೆ. ಈಗ ಶೀಘ್ರದಲ್ಲೇ 'ಜೆಎನ್ಯು' ಚಿತ್ರದಲ್ಲಿ ಕಾಣಿಸಿಕೊಳ್ಳಲಿರುವ ನಟಿ ಊರ್ವಶಿ ರೌಟೇಲಾ ಅವರು ಆಗಾಗ್ಗೆ ಟ್ರೋಲ್ಗಳಿಗೆ ಗುರಿಯಾಗುತ್ತಿರುವಾಗ ಈ ಎಲ್ಲಾ ವಿಷಯಗಳನ್ನು ಹೇಗೆ ಎದುರಿಸುತ್ತಾರೆ ಎಂದು ಹೇಳಿದರು.

ನಟಿ ಊರ್ವಶಿ ರೌಟೇಲಾ ಅವರು ತಮ್ಮ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಗಳಿಂದ ಪ್ರತಿದಿನ ಟ್ರೋಲ್ಗಳಿಗೆ ಗುರಿಯಾಗುತ್ತಾರೆ. ತನ್ನ ಇತ್ತೀಚಿನ ಸಂದರ್ಶನದಲ್ಲಿ, ನಟಿ ಅಂತಿಮವಾಗಿ ಈ ಎಲ್ಲಾ ವಿಷಯಗಳನ್ನು ಹೇಗೆ ಎದುರಿಸುತ್ತಾರೆ ಎಂದು ಹೇಳಿದರು. ಟ್ರೋಲಿಂಗ್ ಅನ್ನು ಎದುರಿಸಲು ಉತ್ತಮ ಮಾರ್ಗವೆಂದರೆ ಅದನ್ನು ನಿಭಾಯಿಸದಿರುವುದು ಎಂದು ನಟಿ ಹೇಳಿದ್ರು, 'ಅಲ್ಲದೆ, ನನ್ನ ಬಿಡುವಿಲ್ಲದ ಶೆಡ್ಯೂಲ್ ನಲ್ಲಿ ಇದರ ಬಗ್ಗೆ ಯೋಚನೆ ಕೂಡ ಮಾಡಲ್ಲ. ಆ ವಿಷಯಗಳ ಬಗ್ಗೆ ಯೋಚಿಸಲು ಮತ್ತು ವ್ಯರ್ಥ ಮಾಡಲು ನನಗೆ ನಿಜವಾಗಿಯೂ ಸಮಯವಿಲ್ಲ' ಎಂದು ಊರ್ವಶಿ ಹೇಳಿದ್ರು.

ನಟಿಯ ಪ್ರಕಾರ, ನೀವು ಯಾವುದರ ಬಗ್ಗೆಯೂ ಗಮನ ಹರಿಸದಿದ್ದಾಗ, ಟ್ರೋಲ್ ಆಗುವ ಪ್ರಶ್ನೆಯೇ ಇಲ್ಲ ಎಂದ್ರು. ಈ ಮೂಲಕ ಟ್ರೋಲ್ ಬಗ್ಗೆ ಚಿಂತೆ ಮಾಡುವ ಅವಶ್ಯಕತೆ ಇಲ್ಲವೇ ಇಲ್ಲ ಎಂದು ನಟಿ ಹೇಳಿದ್ದಾರೆ. ಊರ್ವಶಿ ಫ್ಯಾಶನ್ ಶೋಗಾಗಿ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಕಾಣಿಸಿಕೊಂಡಿದ್ರು. ಈ ಶೋನಲ್ಲಿ ಅವರು ಶೋಸ್ಟಾಪರ್ ಆಗಿ ನಡೆದ್ರು. ಈಗ ಅವರು ಶೀಘ್ರದಲ್ಲೇ ಮುಂಬರುವ ಚಿತ್ರ 'ಜೆಎನ್ ಯು: ಜಹಾಂಗೀರ್ ನ್ಯಾಷನಲ್ ಯೂನಿವರ್ಸಿಟಿ'ಯಲ್ಲಿ ಕಾಣಿಸಿಕೊಳ್ಳಲಿದ್ದಾರೆ. ತಮ್ಮ ಮುಂಬರುವ ಚಿತ್ರದ ಕುರಿತು ಮಾತನಾಡಿದ ಊರ್ವಶಿ, 'ನಾನು ಚಿತ್ರದಲ್ಲಿ ಜೆಎನ್ ಯು ವಿದ್ಯಾರ್ಥಿನಿ ಪಾತ್ರದಲ್ಲಿ ನಟಿಸುತ್ತಿದ್ದೇನೆ. ನಿಜ ಜೀವನದಲ್ಲಿ, ನನ್ನ ಶಾಲಾ ದಿನಗಳಿಂದಲೂ ನಾನು ಜೆಎನ್ ಯುಗೆ ಹೋಗಬೇಕೆಂದು ನನ್ನ ತಂದೆ ಬಯಸಿದ್ದರು. ಹಾಗಾಗಿ ತೆರೆಯ ಮೇಲೆ ಅವರ ಕನಸನ್ನು ನನಸಾಗಿಸುತ್ತಿದ್ದೇನೆ ಎಂದ್ರು.

ಇತ್ತೀಚೆಗೆ, 'ಜೆಎನ್ಯು: ಜಹಾಂಗೀರ್ ನ್ಯಾಷನಲ್ ಯೂನಿವರ್ಸಿಟಿ'ಯ ಟೀಸರ್ ಅನ್ನು ಬಿಡುಗಡೆ ಮಾಡಲಾಗಿದ್ದು, ಇದರಲ್ಲಿ ಕ್ರಿಮಿನಲ್ ಪಿತೂರಿ ಮತ್ತು ಭಯೋತ್ಪಾದನೆ ಪರ ಭಾವನೆಗಳನ್ನು ಪ್ರತಿಭಟನೆಗಳ ಜೊತೆಗೆ ತೋರಿಸಲಾಗಿದೆ. ಈ ಚಿತ್ರವು ಜೆಎನ್ ಯು ಒಳಗಿನ ಕಥೆಯನ್ನು ತೆರೆಯ ಮೇಲೆ ತೋರಿಸುವುದು ಎಂದು ಚಿತ್ರತಂಡ ಹೇಳಿದೆ. 'ಸಿಂಗ್ ಸಾಹೇಬ್ ದಿ ಗ್ರೇಟ್' ಚಿತ್ರದ ಮೂಲಕ ನಟಿ ತಮ್ಮ ಸಿನಿ ಕೆರಿಯರ್ನಲ್ಲಿ ಪ್ರಾರಂಭಿಸಿದರು. ಈ ಚಿತ್ರದಲ್ಲಿ ಊರ್ವಶಿ ಜೊತೆ ಸನ್ನಿ ಡಿಯೋಲ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಇದರ ನಂತರ, ನಟಿ ಪ್ರಸಿದ್ಧ ರಾಪರ್ ಹನಿ ಸಿಂಗ್ ಅವರ ಅಂತರರಾಷ್ಟ್ರೀಯ ವೀಡಿಯೊ ಆಲ್ಬಂ 'ಲವ್ ಡೋಸ್' ನಲ್ಲಿ ಕಾಣಿಸಿಕೊಂಡರು. ಊರ್ವಶಿ ಇದುವರೆಗೂ ಕೆಲವೇ ಕೆಲವು ಸಿನಿಮಾಗಳನ್ನು ಮಾಡಿದ್ದಾರೆ. ಆದರೆ ನಟಿಯ ಆಸ್ತಿ ಮಾತ್ರ ಭರ್ಜರಿಯಾಗಿದೆ. ಮಾಧ್ಯಮ ವರದಿಗಳ ಪ್ರಕಾರ ಊರ್ವಶಿ ಅವರ ಒಟ್ಟು ಸಂಪತ್ತು 30 ಮಿಲಿಯನ್ ಡಾಲರ್ ಅಂದರೆ 250 ಕೋಟಿಗೂ ಹೆಚ್ಚು.ಊರ್ವಶಿ ರೌಟೇಲಾ ಅವರ ಮಾಸಿಕ ಗಳಿಕೆ ಸುಮಾರು 45 ಲಕ್ಷ ಎನ್ನಲಾಗ್ತಿದೆ. ಅವರು ಜಾಹೀರಾತುಗಳಿಂದಲೂ ಹಣ ಸಂಪಾದಿಸುತ್ತಾರೆ. ಇದಲ್ಲದೇ ಊರ್ವಶಿ ಮುಂಬೈನಲ್ಲಿ ಕೋಟ್ಯಂತರ ರೂಪಾಯಿ ಮೌಲ್ಯದ ಐಷಾರಾಮಿ ಬಂಗಲೆ ಹೊಂದಿದ್ದಾರೆ. ಜೊತೆಗೆ ನಟಿಯ ಬಳಿ ಐಷಾರಾಮಿ ಕಾರುಗಳು ಸಹ ಇದೆ.

# ವಿಬ್‌ಗಯಾರ್ ಗ್ರೂಪ್ ಆಫ್ ಸ್ಕೂಲ್ಸ್: ಬೋರ್ಡ್ ಪರೀಕ್ಷೆಗಳಲ್ಲಿ ದಾಖಲೆಯ ಫಲಿತಾಂಶ



VIBGYOR GROUP OF SCHOOLS

ಸಿಐಎಸ್‌ಸಿಇ (ಕೌನ್ಸಿಲ್ ಫಾರ್ ದಿ ಇಂಡಿಯನ್ ಸ್ಕೂಲ್ ಸರ್ಟಿಫಿಕೇಟ್ ಎಕ್ಸಾಮಿನೇಷನ್ಸ್), ಐಎಸ್‌ಸಿ (ಇಂಡಿಯನ್ ಸ್ಕೂಲ್ ಸರ್ಟಿಫಿಕೇಟ್), ಮತ್ತು ಸಿಬಿಎಸ್‌ಇ (ಸೆಂಟ್ರಲ್ ಬೋರ್ಡ್ ಆಫ್ ಸೆಕೆಂಡರಿ ಎಜುಕೇಶನ್)ನಲ್ಲಿ ವಿಬ್‌ಗಯಾರ್ ಗ್ರೂಪ್ ಆಫ್ ಸ್ಕೂಲ್ಸ್ ನ ವಿದ್ಯಾರ್ಥಿಗಳು ಅಸಾಧಾರಣ ಸಾಧನೆ ಮಾಡಿರುವುದಾಗಿ ಶಾಲೆ ಘೋಷಣೆ ಮಾಡಿದೆ. ವಿದ್ಯಾರ್ಥಿಗಳು ಬೋರ್ಡ್ ಪರೀಕ್ಷೆಗಳಲ್ಲಿ ತೋರಿದ ಸಾಧನೆಯು ವಿಬ್‌ಗಯಾರ್ ಶಾಲೆಯ ಶೈಕ್ಷಣಿಕ ಬದ್ಧತೆಗೆ ಹಿಡಿದ ಕನ್ನಡಿಯಾಗಿದೆ.ಈ ವರ್ಷ, ವಿಬ್‌ಗಯಾರ್ ಗ್ರೂಪ್ ಆಫ್ ಸ್ಕೂಲ್ಸ್ ವಿದ್ಯಾರ್ಥಿಗಳು ಬೋರ್ಡ್ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾರೆ. ಆ ಮೂಲಕ ಗುಣಮಟ್ಟದ ಶಿಕ್ಷಣ ಮತ್ತು ಸಮಗ್ರ ಅಭಿವೃದ್ಧಿ ಅವಕಾಶಗಳ ವಿಚಾರದಲ್ಲಿ ಸಂಸ್ಥೆಯು ಹೊಂದಿರುವ ಬದ್ಧತೆಯನ್ನು ಸಾರಿದ್ದಾರೆ. ವಿಬ್‌ಗಯಾರ್ ವಿದ್ಯಾರ್ಥಿಗಳಲ್ಲಿ ಹಲವರು ಉನ್ನತ ಶ್ರೇಣಿಗಳನ್ನು ಮತ್ತು ಎಲ್ಲಾ ವಿಷಯಗಳಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸುವ ಮೂಲಕ ಉತ್ತಮ ಮಾನದಂಡವನ್ನು ಸ್ಥಾಪಿಸಿದ್ದಾರೆ. ಸಮಗ್ರ ಶೈಕ್ಷಣಿಕ ವಾತಾವರಣವನ್ನು ರೂಪಿಸುವ ನಿಟ್ಟಿನಲ್ಲಿ ಶಾಲೆಯು ಗಮನ ಕೇಂದ್ರೀಕರಿಸಿರುವುದರಿಂದ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ವಿವಿಧ ವಿಷಯಗಳಲ್ಲಿ ಡಿಸ್ಟಿಂಕ್ಷನ್ ಗಳಿಸಲು ಸಾಧ್ಯವಾಗಿದೆ.

**ವಿಬ್‌ಗಯಾರ್ ಗ್ರೂಪ್ ಆಫ್ ಸ್ಕೂಲ್‌ಗಳ ಸಿಐಎಸ್‌ಸಿಇ ಗ್ರೇಡ್ 10 ಟಾಪರ್‌ಗಳು:** ಯಶ್ವಿ ಬಗ್ರೇಚಾ – 99.00%, ವಿಬ್‌ಗಯಾರ್ ಪ್ರೌಢಶಾಲೆ – ಗೋರೆಗಾಂವ್, ಮುಂಬೈ, ಅವಿಶಿ ತಪರಿಯಾ – 99.33%, ವಿಬ್‌ಗಯಾರ್ ಹೈಸ್ಕೂಲ್ – ಮಲಾಡ್ ಈಸ್ಟ್, ಮುಂಬೈ, ಚೈತನ್ಯ ಸೋನಿ – 99.00%, ವಿಬ್‌ಗಯಾರ್ ಪ್ರೌಢಶಾಲೆ – ಮಲಾಡ್ ಈಸ್ಟ್, ಮುಂಬೈ, ಆಯುಷ್ ಚೌಧರಿ – 99.00%, ವಿಬ್‌ಗಯಾರ್ ಪ್ರೌಢಶಾಲೆ – ಮಲಾಡ್ ಈಸ್ಟ್, ಮುಂಬೈ, ಆರ್ಯನ್ ಗಾಂಧಿ – 98.17%, ವಿಬ್‌ಗಯಾರ್ ಹೈಸ್ಕೂಲ್ – ಗೋರೆಗಾಂವ್, ಮುಂಬೈ,

**ವಿಬ್‌ಗಯಾರ್ ಗ್ರೂಪ್ ಆಫ್ ಸ್ಕೂಲ್‌ಗಳ ಐಎಸ್‌ಸಿ ಗ್ರೇಡ್ 12 ಟಾಪರ್‌ಗಳು:** ಅವಿನೀರ್ ರಕ್ಷಿತ್ – 97.50% (ವಿಜ್ಞಾನ) – ವಿಬ್‌ಗಯಾರ್ ಪ್ರೌಢಶಾಲೆ – ಎನ್‌ಐಬಿಎಂ, ಪುಣೆ, ಸೌಜಸ್ ಜೈನ್ – 95.75% (ವಿಜ್ಞಾನ) – ವಿಬ್‌ಗಯಾರ್ ಪ್ರೌಢಶಾಲೆ – ಎನ್‌ಐಬಿಎಂ, ಪುಣೆ, ಸಹಸ್ರ ವುಸ್ಥೆಲಾ (ವಾಣಿಜ್ಯ) – 95% – ವಿಬ್‌ಗಯಾರ್ ಹೈ – ಮಾರತಹಳ್ಳಿ, ಬೆಂಗಳೂರು, ಅವಿಕ್ಷಿತ್ ಕುಮಾರ್ – 95.50% (ವಿಜ್ಞಾನ) – ವಿಬ್‌ಗಯಾರ್ ಪ್ರೌಢಶಾಲೆ – ಎನ್‌ಐಬಿಎಂ, ಪುಣೆ

**ಸಿಬಿಎಸ್‌ಇ ಗ್ರೇಡ್ 10 ಟಾಪರ್ ಗಳು:** ಪ್ರಾಂಶು ಗುಪ್ತಾ – 99.20% ವಿಬ್‌ಗಯಾರ್ ಪ್ರೌಢಶಾಲೆ – ವಡೋದರಾ, ಗುಜರಾತ್, ಆರ್ಯ ಸೈಬಣ್ಣವರ್ – 99.00% ವಿಬ್‌ಗಯಾರ್ ಪ್ರೌಢಶಾಲೆ – ಕೊಲ್ಹಾಪುರ, ಚಿನ್ಮಯ್ ಸೂರ್ಯವಂಶಿ – 98.80% ವಿಬ್‌ಗಯಾರ್ ಪ್ರೌಢಶಾಲೆ – ಕೊಲ್ಹಾಪುರ

**ಸಿಬಿಎಸ್‌ಇ ಗ್ರೇಡ್ 12 ಟಾಪರ್‌ಗಳು:** ಕುನಾಲ್ ಅಯ್ಯರ್ – 97.20% (ವಾಣಿಜ್ಯ) –ಹೈ ಸ್ಕೂಲ್ – ವಡೋದರಾ, ಗುಜರಾತ್, ಗಾರ್ಗಿ ದಿನೇಶ್ ಚಮೋಲಿ – 96.40% (ವಾಣಿಜ್ಯ) –ಹೈ ಸ್ಕೂಲ್ – ವಡೋದರಾ, ಗುಜರಾತ್, ಟಿಕ್ಯಾನಿ ಯಶಿತಾ – 96.20% (ವಾಣಿಜ್ಯ) –ಹೈಸ್ಕೂಲ್ – ವಡೋದರಾ, ಗುಜರಾತ್ ಅಸಾಧಾರಣ ಫಲಿತಾಂಶಗಳು ವಿದ್ಯಾರ್ಥಿಗಳ ಕಠಿಣ ಪರಿಶ್ರಮ ಮತ್ತು ಬದ್ಧತೆ, ಅವರ ಪೋಷಕರ ಅಚಲ ಬೆಂಬಲ ಮತ್ತು ವಿಬ್‌ಗಯಾರ್ ಗ್ರೂಪ್ ಆಫ್ ಸ್ಕೂಲ್ಸ್ ನ ಶಿಕ್ಷಕರು ಮತ್ತು ಸಿಬ್ಬಂದಿಗಳ ಅವಿರತ ಪ್ರಯತ್ನಗಳಿಗೆ ಸಾಕ್ಷಿಯಾಗಿದೆ.ಈ ಕುರಿತು ಮಾತನಾಡಿದ ವಿಬ್‌ಗಯಾರ್ ಗ್ರೂಪ್ ಆಫ್ ಸ್ಕೂಲ್ಸ್ ನ ಉಪಾಧ್ಯಕ್ಷರಾದ ಕವಿತಾ ಕೇರವಾಲ, ಸಿಐಎಸ್‌ಸಿಇ, ಎಸ್‌ಸಿ ಮತ್ತು ಬಿಸಿಎಸ್‌ಇ ಬೋರ್ಡ್ ಪರೀಕ್ಷೆಗಳಲ್ಲಿ ನಮ್ಮ ವಿದ್ಯಾರ್ಥಿಗಳ ಸಾಧನೆಗಳ ಬಗ್ಗೆ ನಮಗೆ ಅಪಾರ ಹೆಮ್ಮೆ ಇದೆ. ಅವರ ಈ ಅದ್ಭುತ ಯಶಸ್ಸು ಅವರ ಕಠಿಣ ಪರಿಶ್ರಮ ಮತ್ತು ವಿಬ್‌ಗಯಾರ್ ಗ್ರೂಪ್ ಆಫ್ ಸ್ಕೂಲ್ಸ್ ನಲ್ಲಿ ಒದಗಿಸಲಾದ ಉತ್ತಮ ಗುಣಮಟ್ಟದ ಶಿಕ್ಷಣದ ಪುರಾವೆಯಾಗಿದೆ. ಕಠಿಣ ಶೈಕ್ಷಣಿಕ ತರಬೇತಿಯ ಜೊತೆಗೆ ನಮ್ಮ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಮಾತ್ರವಲ್ಲದೆ ವಿವಿಧ ಪಠ್ಯೇತರ ಚಟುವಟಿಕೆಗಳಲ್ಲಿಯೂ ಉತ್ತಮ ಸಾಧನೆ ಮಾಡಲು ಅನುವು ಮಾಡಿಕೊಡುವ ಸಮಗ್ರ ಅಭಿವೃದ್ಧಿಯತ್ತ ನಾವು ಗಮನ ಕೇಂದ್ರೀಕರಿಸುತ್ತೇವೆ.

# ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಹೊಸ ವ್ಯವಹಾರಗಳಿಂದ ಲಾಭ, ವಿಧೇಯತೆ ಯಶಸ್ಸಿನ ಮೆಟ್ಟಿಲು, ದುಂದು ವೆಚ್ಚ, ತಿರುಗಾಟ.

**ವೃಷಭ:** ಉದ್ಯಮಿಗಳಿಗೆ ಅಧಿಕ ಲಾಭ, ಅಪರಿಚಿತರ ವಿಷಯದಲ್ಲಿ ಜಾಗ್ರತೆ, ಸ್ವತಂತ್ರವಾಗಿ ಹಣ ಸಂಪಾದನೆ.

**ಮಿಥುನ:** ಅತಿಯಾದ ಆತ್ಮವಿಶ್ವಾಸ, ಮಿತ್ರರ ಬೆಂಬಲ, ಕಾರ್ಯ ವಿಕಲ್ಪ, ಶತ್ರು ನಾಶ, ವಾದ ವಿವಾದಗಳಿಂದ ದೂರವಿರಿ.

**ಕಟಕ:** ಮಾನಸಿಕ ಒತ್ತಡ, ದಂಡ ಕಟ್ಟುವಿರಿ, ನಿಮ್ಮ ಮಾತುಗಳಿಂದ ಕಲಹ ಸಾಧ್ಯತೆ, ಸೌಜನ್ಯದಿಂದ ವರ್ತಿಸಿ, ವಿದ್ಯಾರ್ಥಿಗಳಲ್ಲಿ ಪ್ರಗತಿ.

**ಸಿಂಹ:** ಗುರಿಯನ್ನು ಸಾಧಿಸುವಿರಿ, ಪರರಿಗೆ ಸಹಾನುಭೂತಿ ತೋರುವಿರಿ, ಸುಖ ಭೋಜನ, ವಿಪರೀತ ಖರ್ಚು.

**ಕನ್ಯಾ:** ರಾಜಕೀಯ ಕ್ಷೇತ್ರದವರಿಗೆ ಶುಭ, ದೈವಿಕ ಚಿಂತನೆ, ಮೂಗಿನ ಮೇಲೆ ಕೋಪ, ಸ್ನೇಹಿತರಿಂದ ಹಿತನುಡಿ.

**ತುಲಾ:** ಅಲ್ಪ ಕಾರ್ಯ, ಋಣವಿಮೋಚನೆ, ಸುಳ್ಳು ಮಾತನಾಡುವಿರಿ, ಕೃಷಿಕರಿಗೆ ಅಲ್ಪ ಲಾಭ.

**ವೃಶ್ಚಿಕ:** ಆದಾಯಕ್ಕಿಂತ ಖರ್ಚು ಜಾಸ್ತಿ, ಆರೋಗ್ಯದ ಸಮಸ್ಯೆ, ಉದ್ಯೋಗದಲ್ಲಿ ಕಿರಿಕಿರಿ, ಕುಟುಂಬ ಸೌಖ್ಯ.

**ಧನಸ್ಸು:** ವಿವಿಧ ರೀತಿ ಧನ ಲಾಭ, ಸ್ಥಗಿತ ಕಾರ್ಯಗಳಲ್ಲಿ ಮುನ್ನಡೆ, ಪರಸ್ಥಳವಾಸ, ಎಷ್ಟೇ ಹಣ ಬಂದರೂ ಉಳಿಯುವುದಿಲ್ಲ.

**ಮಕರ:** ಮಾರಾಟದಿಂದ ಲಾಭ, ಮಾತಿಗೆ ಮರುಳಾಗದಿರಿ, ಬಹು ಸೌಖ್ಯ, ಉದ್ಯೋಗದಲ್ಲಿ ಬಡ್ತಿ.

**ಕುಂಭ:** ಮಾನಸಿಕ ಒತ್ತಡ, ಹಿತ ಶತ್ರು ಭಾದೆ, ಮನೆಯವರ ಭಾವನೆಗಳಿಗೆ ಸ್ಪಂದಿಸುವಿರಿ, ತೀರ್ಥ ಯಾತ್ರಾ, ದರ್ಶನ.

**ಮೀನ:** ನೀಚ ಜನರಿಂದ ದೂರವಿರಿ, ಪಾಪ ಬುದ್ಧಿ, ಸಾಧಾರಣ ಪ್ರಗತಿ, ಮನಕ್ಲೇಶ, ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು.

# ಇಂದು ವಿಶ್ವ ಬೈಸಿಕಲ್ ದಿನ




ನಿಮ್ಮ ಮೊದಲ ಬೈಸಿಕಲ್ ಅನ್ನು ಪಡೆಯುವುದು ಮತ್ತು ಅದನ್ನು ಹೇಗೆ ಓಡಿಸಬೇಕೆಂದು ಕಲಿಯುವುದು ನಮಗೆಲ್ಲರಿಗೂ ಒಂದು ಸಂಸ್ಕಾರವಾಗಿದೆ. ಕಲಿಯುವಾಗ ನಮ್ಮ ಸೈಕಲ್ಗಳಿಂದ ಬೀಳುವ ಗುರುತುಗಳು ಮತ್ತು ತಿಗಣೆಗಳ ಹೊರತಾಗಿಯೂ, ಇದು ನಾವು ಯಾವಾಗಲೂ ಪಾಲಿಸುವ ಸ್ಮರಣೆಯಾಗಿದೆ. ಬೈಸಿಕಲ್ ಸಾಕಷ್ಟು ಉಪಯುಕ್ತ ಚಟುವಟಿಕೆಯಾಗಿದೆ – ಇಂದಿನ ಪ್ರಪಂಚದ ಗಡಿಬಿಡಿಯಲ್ಲಿ, ಬೈಸಿಕ್ಲಿಂಗ್ ನಮ್ಮ ಸ್ನಾಯುಗಳನ್ನು ವ್ಯಾಯಾಮ ಮಾಡಲು ಅನುಮತಿಸುತ್ತದೆ, ಇಂಧನ ಬಳಕೆಯನ್ನು ಕಡಿತಗೊಳಿಸುತ್ತದೆ ಏಕೆಂದರೆ ಇದು ಕಾರು ಚಾಲನೆಗೆ ಸಾಕಷ್ಟು ಜನಪ್ರಿಯ ಪರ್ಯಾಯವಾಗಿದೆ ಮತ್ತು ನಮ್ಮ ಕೂದಲಿನ ಗಾಳಿಯನ್ನು ಅನುಭವಿಸುತ್ತದೆ. ನಿಜವಾಗಿ ಹೇಳುವುದಾದರೆ, ಸೈಕಲ್ ಸವಾರಿ ಮಾಡುವಷ್ಟು ಉಲ್ಲಾಸವಿಲ್ಲ. ವಿಶ್ವ ಬೈಸಿಕಲ್ ದಿನವು ಇದನ್ನು ಮತ್ತು ಬೈಸಿಕಲ್ನ ಬಾಳಿಕೆ ಮತ್ತು ಬಾಳಿಕೆಯನ್ನು ಅಂಗೀಕರಿಸುತ್ತದೆ. ಸರಳ ಮತ್ತು ಸುಸ್ಥಿರ ಸಾರಿಗೆ ಸಾಧನವನ್ನು ಒದಗಿಸುವುದು, ಬೈಸಿಕಲ್ ನಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಪುನರ್ಯೌವನಗೊಳಿಸುವುದು ಮತ್ತು ಆರ್ಥಿಕತೆ ಮತ್ತು ಪರಿಸರಕ್ಕೆ ಒಳ್ಳೆಯದು. U.S. ಮೂಲದ ಪ್ರೊಫೆಸರ್ ಲೆಸ್ಜೆಕ್ ಸಿಬಿಲ್ಸ್ಕಿ ಅವರು ತಮ್ಮ ಸಮಾಜಶಾಸ್ತ್ರದ ವರ್ಗದೊಂದಿಗೆ ಯುಎನ್ ನಿರ್ಣಯವನ್ನು ಉತ್ತೇಜಿಸಲು ತಳಮಟ್ಟದ ಅಭಿಯಾನವನ್ನು ಪ್ರಾರಂಭಿಸಿದಾಗ ಇದು ಪ್ರಾರಂಭವಾಯಿತು, ಅದು ಪ್ರಪಂಚದಾದ್ಯಂತ ವಿನಮ್ರ ಬೈಸಿಕಲ್ನ ವಕಾಲತ್ತು ಮತ್ತು ಆಚರಣೆಗಾಗಿ ಒಂದು ದಿನವನ್ನು ಗೊತ್ತುಪಡಿಸುತ್ತದೆ. 2015 ರಲ್ಲಿ, ಸಿಬಿಲ್ಸ್ಕಿ ತನ್ನನ್ನು ಶೈಕ್ಷಣಿಕ ಯೋಜನೆಗೆ ಸಮರ್ಪಿಸಿಕೊಂಡರು, ಬೈಸಿಕಲ್ಗಳು ಮತ್ತು ಅಭಿವೃದ್ಧಿಯಲ್ಲಿ ಅವರ ಪಾತ್ರವನ್ನು ಅನ್ವೇಷಿಸಿದರು. ಅವರ ಯೋಜನೆಯು 'ಎಲ್ಲರಿಗೂ ಸುಸ್ಥಿರ ಚಲನಶೀಲತೆ'ಯಿಂದ ಬೆಂಬಲಿತವಾದ ಬೃಹತ್ ಆಂದೋಲನಕ್ಕೆ ಕಾರಣವಾಯಿತು ಮತ್ತು ಅಂತಿಮವಾಗಿ ವಿಶ್ವಸಂಸ್ಥೆಯು ಬೈಸಿಕಲ್ನ ಪ್ರಚಾರಕ್ಕಾಗಿ ಮೀಸಲಾದ ಅಂತರರಾಷ್ಟ್ರೀಯ ದಿನವನ್ನು ನಿಗದಿಪಡಿಸಿತು. ಏಪ್ರಿಲ್ 12, 2018 ರಂದು, ಜೂನ್ 3 ಅನ್ನು ವಿಶ್ವ ಬೈಸಿಕಲ್ ದಿನವೆಂದು ಘೋಷಿಸುವ ನಿರ್ಣಯವನ್ನು ಯುಎನ್ ಜನರಲ್ ಅಸೆಂಬ್ಲಿಯ ಎಲ್ಲಾ 193 ಸದಸ್ಯ ರಾಷ್ಟ್ರಗಳು ಸರ್ವಾನುಮತದಿಂದ ಅಂಗೀಕರಿಸಿದವು. ನಿರ್ಣಯವನ್ನು ತುರ್ಕಮೆನಿಸ್ತಾನ್ ಹೆಚ್ಚು ಬೆಂಬಲಿಸಿತು ಮತ್ತು ಸುಮಾರು 56 ದೇಶಗಳಿಂದ ಸಹ ಪ್ರಾಯೋಜಕತ್ವವನ್ನು ನೀಡಿತು. ಐಸಾಕ್ ಫೆಲ್ಡ್ ಅವರು ಲೋಗೋವನ್ನು ಸಹ ವಿನ್ಯಾಸಗೊಳಿಸಿದ್ದಾರೆ, ಜೊತೆಗೆ ಪ್ರೊಫೆಸರ್ ಜಾನ್ ಇ. ಸ್ವಾನ್ಸನ್ ರಚಿಸಿದ ಅನಿಮೇಷನ್ನೊಂದಿಗೆ, ಬೈಸಿಕಲ್ ಸವಾರರು ಪ್ರಪಂಚದಾದ್ಯಂತ ವಿವಿಧ ರೀತಿಯ ಬೈಸಿಕಲ್ಗಳಲ್ಲಿ ಸವಾರಿ ಮಾಡುತ್ತಿದ್ದಾರೆ. ಇಲ್ಲಿ ಸಂದೇಶವೆಂದರೆ ಸರಳವಾದ ವಿರೋಧಾಭಾಸವು ಎಲ್ಲಾ ಮಾನವೀಯತೆಗೆ ಸೇವೆ ಸಲ್ಲಿಸುತ್ತದೆ ಮತ್ತು ಜೀವನದ ವಿವಿಧ ಹಂತಗಳ ಜನರ ನಡುವಿನ ಅಂತರವನ್ನು ಸೇತುವೆ ಮಾಡುತ್ತದೆ. ಇಬ್ಬರು ವಿನ್ಯಾಸಕರು ಈ ಕಾರಣಕ್ಕಾಗಿ ಪ್ರಸ್ತುತ ನೀಲಿ ಮತ್ತು ಬಿಳಿ ಲೋಗೋವನ್ನು ಸಹ ರಚಿಸಿದ್ದಾರೆ.

ಸಂಜೆ ಮುಗಿಲು
ಸೋಮವಾರ
3.6.2024





## 3 ನೇ ಬಾರಿ ಬಾಹ್ಯಾಕಾಶಕ್ಕೆ ಹಾರಿದ ಸುನಿತಾ ವಿಲಿಯಮ್ಸ್

**ದೆಹಲಿ:** ಭಾರತೀಯ ಮೂಲದ ಗಗನಯಾತ್ರಿ ಸುನಿತಾ ವಿಲಿಯಮ್ಸ್ ಮೂರನೇ ಬಾರಿಗೆ ಬಾಹ್ಯಾಕಾಶಕ್ಕೆ ಪ್ರಯಾಣಿಸಿದ್ದಾರೆ. ಅಮೆರಿಕದ ಬಾಹ್ಯಾಕಾಶ ಸಂಸ್ಥೆ ನಾಸಾದ ಬೋಯಿಂಗ್ ಸ್ಟಾರ್ಲೈನರ್ ಬಾಹ್ಯಾಕಾಶ ನೌಕೆಯಲ್ಲಿ ಶನಿವಾರ ಭಾರತೀಯ ಕಾಲಮಾನ ಪ್ರಕಾರ ರಾತ್ರಿ 10 ಗಂಟೆಗೆ ಬಾಹ್ಯಾಕಾಶಕ್ಕೆ ಯಶಸ್ವಿಯಾಗಿ ಪ್ರಯಾಣ ಬೆಳೆಸಿದ್ದಾರೆ.

ಕಳೆದ ತಿಂಗಳ 7 ರಂದೇ ಸುನೀತಾ ಅಂತರಿಕ್ಷ ಪ್ರಯಾಣ ಕೈಗೊಳ್ಳಬೇಕಿತ್ತು. ಆದರೆ ತಾಂತ್ರಿಕ ದೋಷದ ಕಾರಣದಿಂದ ಮುಂದೂಡಲಾಗಿತ್ತು. ವಿಲಿಯಮ್ಸ್ ಹೊರತಾಗಿ ಬುಚ್ ವಿಲ್ಮೋರ್ ಕೂಡ ಅಂತರಿಕ್ಷಕ್ಕೆ ಪ್ರಯಾಣ ಕೈಗೊಳ್ಳಲಿದ್ದಾರೆ. ಸುನಿತಾ ಮತ್ತು ವಿಲ್ಮೋರ್ ಒಂದು ವಾರ ಬಾಹ್ಯಾಕಾಶದಲ್ಲಿಯೇ ಇರಲಿದ್ದಾರೆ.

ಸುನೀತಾ ವಿಲಿಯಮ್ಸ್, ಮಹಿಳೆಯೊಬ್ಬರು ಅತಿ ಹೆಚ್ಚು ಬಾಹ್ಯಾಕಾಶ ನಡಿಗೆ ಮಾಡಿದ ದಾಖಲೆಯನ್ನು ಹೊಂದಿದ್ದಾರೆ. ಅವರು ಯುನೈಟೆಡ್ ಸ್ಟೇಟ್ಸ್ ನೌಕಾಪಡೆಯ ಅಧಿಕಾರಿಯೂ ಆಗಿದ್ದಾರೆ ಮತ್ತು ಬಾಹ್ಯಾಕಾಶ ಯಾತ್ರೆ 14 ಮತ್ತು 15 ರ ಭಾಗವಾಗಿದ್ದರು. ಸುನೀತಾ ವಿಲಿಯಮ್ಸ್ ಸಾಧನೆಗಾಗಿ ಪದ್ಮಭೂಷಣ ಪ್ರಶಸ್ತಿಯನ್ನೂ ಪಡೆದಿದ್ದಾರೆ.

# ಅಮೆರಿಕಾದಲ್ಲಿ ಹುಟ್ಟುಹಬ್ಬದ ಪಾರ್ಟಿ ಮೇಲೆ ಗುಂಡಿನ ದಾಳಿ



**ಓಹಿಯೋ:** ಓಹಿಯೋದ ಅಕ್ರಾನ್ ನಲ್ಲಿ ಭಾನುವಾರ ಮುಂಜಾನೆ ಹುಟ್ಟುಹಬ್ಬದ ಪಾರ್ಟಿಯ ಮೇಲೆ ಗುಂಡಿನ ದಾಳಿ ನಡೆಸಲಾಗಿದೆ. ಈ ದಾಳಿಯಲ್ಲಿ ಓರ್ವ ಸಾವನ್ನಪ್ಪಿದ್ದು, 27 ಜನರನ್ನು ಗಾಯಗೊಂಡಿರೋದಾಗಿ ತಿಳಿದು ಬಂದಿದೆ. ಶಂಕಿತ ಇನ್ನೂ ತಲೆಮರೆಸಿಕೊಂಡಿದ್ದಾನೆ. ಸ್ಥಳೀಯ ವರದಿಗಳ ಪ್ರಕಾರ, ಶೂಟಿಂಗ್ ಘಟನೆಯ ನಂತರ ಅನೇಕ ಆಸ್ಪತ್ರೆಗಳನ್ನು ಲಾಕ್ ಡೌನ್ ಮಾಡಲಾಗಿದೆ. ಗಾಯಾಳುಗಳಿಗೆ ಸ್ಥಳೀಯ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಸುರಕ್ಷತಾ ಕಾರಣಗಳಿಗಾಗಿ ಶೂಟಿಂಗ್ ಸ್ಥಳದಿಂದ ದೂರವಿರಲು ಅಧಿಕಾರಿಗಳು ಸ್ಥಳೀಯರಿಗೆ ಸೂಚಿಸಿದ್ದಾರೆ. ಇದರಿಂದ ಅವರು ಯಾವುದೇ ಅಡೆತಡೆಯಿಲ್ಲದೆ ತಮ್ಮ ತನಿಖೆಯನ್ನು ಮುಂದುವರಿಸಬಹುದು. ಕೆಲ್ಲಿ ಅವೆನ್ಯೂದಲ್ಲಿನ ಶೂಟಿಂಗ್ ಸ್ಥಳದಲ್ಲಿ ಗೊಂದಲದ ದೃಶ್ಯಗಳು ಉಂಟಾಗಿದ್ದು, ಹಲವಾರು ಗುಂಡುಗಳು ಕೇಳಿ ಜನರು ತಮ್ಮ ಪ್ರಾಣಕ್ಕಾಗಿ ಓಡುತ್ತಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ.

## ಐಸ್ಲ್ಯಾಂಡ್‌ನ ನೂತನ ಅಧ್ಯಕ್ಷೆಯಾಗಿ ಹಲ್ಲಾ ತೋಮಸ್ಡೊಟ್ಟಿರ್ ಆಯ್ಕೆ



**ರೆಕ್ಜಾವಿಕ್:** ಐಸ್ಲ್ಯಾಂಡ್‌ನ ಅಧ್ಯಕ್ಷೀಯ ಚುನಾವಣೆಯಲ್ಲಿ ಉದ್ಯಮಿ ಹಲ್ಲಾ ತೋಮಸ್ಡೊಟ್ಟಿರ್ ಗೆಲುವು ಸಾಧಿಸಿರುವುದಾಗಿ ರವಿವಾರ ಘೋಷಿಸಲಾಗಿದೆ. ನಿಕಟ ಪ್ರತಿಸ್ಪರ್ಧಿಯಾಗಿದ್ದ ಮಾಜಿ ಪ್ರಧಾನಿ ಕ್ಯಾಥ್ರಿನ್ ಜಾಕೊಬ್ಸ್ಡೊಟಿರ್ ಸೋಲೊಪ್ಪಿಕೊಂಡಿದ್ದಾರೆ. 55 ವರ್ಷದ ಹಲ್ಲಾ ತೋಮಸ್ಡೊಟ್ಟಿರ್ 34.3% ಮತ ಗಳಿಸಿದರೆ, ಕ್ಯಾಥ್ರಿನ್ ಜಾಕೊಬ್ಸ್ಡೊಟಿರ್ 25.5% ಮತ ಪಡೆದಿದ್ದಾರೆ ಎಂದು ವರದಿಯಾಗಿದೆ.

## ಪಿಒಕೆ ವಿದೇಶಿ ಪ್ರದೇಶ : ಒಪ್ಪಿಕೊಂಡ ಪಾಕ್



**ಇಸ್ಲಾಮಾಬಾದ್:** ಪಾಕಿಸ್ತಾನ್ ಆಕ್ರಮಿತ ಕಾಶ್ಮೀರ(ಪಿಒಕೆ) ವಿದೇಶಿ ಪ್ರದೇಶವಾಗಿದ್ದು ಪಾಕಿಸ್ತಾನದ ನ್ಯಾಯಾಂಗ ವ್ಯಾಪ್ತಿಯಡಿ ಬರುವುದಿಲ್ಲ ಎಂದು ಪಾಕಿಸ್ತಾನ ಸರಕಾರ ಇಸ್ಲಾಮಾಬಾದ್ ಹೈಕೋರ್ಟ್ನಲ್ಲಿ ಹೇಳಿಕೆ ನೀಡಿದೆ. ರಾವಲ್ಪಿಂಡಿಯಲ್ಲಿ ಪಾಕಿಸ್ತಾನದ ಗುಪ್ತಚರ ಏಜೆನ್ಸಿಯ ಅಧಿಕಾರಿಗಳು ವಿಚಾರಣೆಗೆಂದು ಕರೆದೊಯ್ದ ಕಾಶ್ಮೀರಿ ಕವಿ ಮತ್ತು ಪತ್ರಕರ್ತ ಅಹ್ಮದ್ ಫರ್ಹಾದ್ ಶಾ ನಾಪತ್ತೆಯಾಗಿದ್ದಾರೆ ಎಂದು ಶಾ ಅವರ ಪತ್ನಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ಸಂದರ್ಭ ವಾದ ಮಂಡಿಸಿದ ಪಾಕ್ ಸರಕಾರದ ಪರ ವಕೀಲರು 'ಶಾ ಪಿಒಕೆಯಲ್ಲಿ ಪೊಲೀಸ್ ಕಸ್ಟಡಿಯಲ್ಲಿ ಇದ್ದಾರೆ. ಅದು ವಿದೇಶಿ ಪ್ರದೇಶವಾಗಿದ್ದು ತನ್ನದೇ ಆದ ಸಂವಿಧಾನ ಮತ್ತು ನ್ಯಾಯಾಲಯವನ್ನು ಹೊಂದಿದೆ' ಎಂದು ಹೇಳಿದರು.ಈ ಹೇಳಿಕೆಗೆ ಪ್ರತಿಕ್ರಿಯಿಸಿದ ನ್ಯಾಯಾಧೀಶರು 'ಪಿಒಕೆ ವಿದೇಶಿ ಪ್ರದೇಶವಾಗಿದ್ದರೆ ಪಾಕಿಸ್ತಾನದ ಮಿಲಿಟರಿ ಮತ್ತು ಗಡಿಭದ್ರತಾ ಪಡೆ ಅದನ್ನು ಹೇಗೆ ಪ್ರವೇಶಿಸುತ್ತಿದೆ ಎಂದು ಪ್ರಶ್ನಿಸಿರುವುದಾಗಿ ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

# ಮಹತ್ವದ ಸಭೆ ಕರೆದ ಪ್ರಧಾನಿ ಮೋದಿ



**ದೆಹಲಿ:** ಲೋಕಸಭಾ ಚುನಾವಣೆ ಅಂತ್ಯಗೊಂಡ ಬೆನ್ನಲ್ಲೆ ವಿವಿಧ ವಿಷಯಗಳ ಕುರಿತು ಚರ್ಚಿಸಲು ಪ್ರಧಾನಿ ಮೋದಿ ಅವರು ಸಚಿವರ ಸಭೆಯನ್ನು ಕರೆದಿದ್ದಾರೆ. ರಮಲ್ ಚಂಡಮಾರುತದ ನಂತರ ಪರಿಸ್ಥಿತಿ ಮತ್ತು ಈಶಾನ್ಯ ರಾಜ್ಯಗಳಲ್ಲಿನ ಪ್ರವಾಹ ಕುರಿತು ಮೋದಿ ಅವರು ಸಚಿವರೊಂದಿಗೆ ಚರ್ಚಿಸಲಿದ್ದಾರೆ.

ಕೆಲವು ದಿನಗಳ ಹಿಂದೆ ಅಪ್ಪಳಿದ ರಮನ್ ಚಂಡಮಾರುತದಿಂದಾಗಿ ಪಶ್ಚಿಮ ಬಂಗಾಳ, ಅಸ್ಸಾಂ, ಮಣಿಪುರ ಸೇರಿದಂತೆ ಈಶಾನ್ಯಗಳಲ್ಲಿ ಭಾರೀ ಹಾನಿ ಉಂಟುಮಾಡಿತ್ತು. ರಾಜಸ್ಥಾನ, ಮಧ್ಯಪ್ರದೇಶ, ಗುಜರಾತ್ ಸೇರಿದಂತೆ ಉತ್ತರ ಭಾರತದ ಹಲವು ರಾಜ್ಯಗಳಲ್ಲಿ ತೀವ್ರ ಬಿಸಿ ಗಾಳಿಯಿಂದ ಜನರು ಸಾವನ್ನಪ್ಪುತ್ತಿದ್ದಾರೆ. ಬಿಸಿಗಾಳಿಯನ್ನು ಎದುರಿಸಲು ಕೇಂದ್ರ ಮಟ್ಟದಲ್ಲಿ ಯಾವ ಯೋಜನೆ ರೂಪಿಸಬೇಕು ಎಂಬ ಬಗ್ಗೆ ಮೋದಿ ಅವರು ಚರ್ಚೆ ನಡೆಸಲಿದ್ದಾರೆ. ಜೂ.5ರಂದು ವಿಶ್ವ ಪರಿಸರ ದಿನವನ್ನು ದೊಡ್ಡ ಮಟ್ಟದಲ್ಲಿ ಆಚರಿಸಲು ಸಿದ್ಧತೆಗಳನ್ನು ಪರಿಶೀಲಿಸಲು ಮೋದಿ ಸಭೆ ಕರೆದಿದ್ದಾರೆ. ಹಾಗೆಯೇ, ಮೋದಿ ಅವರು 100 ದಿನಗಳ ಕಾರ್ಯಸೂಚಿಯನ್ನು ಪರಿಶೀಲಿಸಲಿದ್ದಾರೆ. ಹೊಸ ಸರ್ಕಾರ ರಚನೆಯ ನಂತರ ಮೂರು ತಿಂಗಳಲ್ಲಿ ಮಾಡಬೇಕಾದ ಕೆಲಸಗಳ ಬಗ್ಗೆ ಚರ್ಚಿಸಲಾಗುತ್ತದೆ ಎಂದು ವರದಿಯಾಗಿದೆ.

# ಅರುಣಾಚಲ ಪ್ರದೇಶ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ ಜಯಭೇರಿ



**ಇಟಾ ನಗರ:** ಭಾರತದ ತುತ್ತ ತುದಿಯ ರಾಜ್ಯ, ಈಶಾನ್ಯ ಸಪ್ತ ರಾಜ್ಯಗಳಲ್ಲಿ ಒಂದಾದ ಅರುಣಾಚಲ ಪ್ರದೇಶದಲ್ಲಿ ಬಿಜೆಪಿ ಮೂರನೇ ಬಾರಿಗೆ ಜಯಭೇರಿ ಬಾರಿಸಿದೆ. ಅರುಣಾಚಲ ವಿಧಾನಸಭಾ ಚುನಾವಣೆಗೆ ನಡೆದಿದ್ದ ಚುನಾವಣೆಯಲ್ಲಿ ಬಿಜೆಪಿ ಸತತ ಮೂರನೇ ಬಾರಿಗೆ ಗೆಲ್ಲುವ ಮೂಲಕ ಹ್ಯಾಟ್ರಿಕ್ ಸಾಧನೆ ಮಾಡಿದೆ.

ಭಾನುವಾರ ವಿಧಾನಸಭೆ ಚುನಾವಣೆ ತಮ ಎಣಿಕೆ ಕಾರ್ಯ ನಡೆಯಿತು. 60 ವಿಧಾನಸಭಾ ಕ್ಷೇತ್ರಗಳ ಪೈಕಿ ಬಿಜೆಪಿ-46, ಎನ್ಪಿಇಪಿ-05, ಎನ್ಸಿಪಿ-03, ಪಿಪಿಎ-02 ಮತ್ತು ಪಕ್ಷೇತರರು ಮೂರು ಸ್ಥಾನಗಳಲ್ಲಿ ಗೆದ್ದಿರುವುದು ವಿಶೇಷ. ಇದರೊಂದಿಗೆ ಹಾಲಿ ಮುಖ್ಯಮಂತ್ರಿ ಪೇಮಖಂಡು ಮುಖ್ಯಮಂತ್ರಿ ಗಾದಿಗೆ ಏರಲಿದ್ದಾರೆ. ಅರುಣಾಚಲ ವಿಧಾನಸಭೆಗೆ ಏಪ್ರಿಲ್ 19 ರಂದು ಮತದಾನ ನಡೆದಿತ್ತು. ಅದೇ ದಿನ ಲೋಕಸಭಾ ಚುನಾವಣೆಗೂ ಮತದಾನವಿತ್ತು. ಆದರೆ ಮತ ಎಣಿಕೆ ಭಾನುವಾರದಂದು ಬರೀ ವಿಧಾನಸಭೆ ಚುನಾವಣೆಗೆ ಮಾತ್ರ ನಡೆಸಲಾಯಿತು. ಲೋಕಸಭೆ ಚುನಾವಣೆ ಮತ ಎಣಿಕೆ ಮಂಗಳವಾರ ನಡೆಯಲಿದೆ.

ಒಟ್ಟು 60 ವಿಧಾನಸಭಾ ಕ್ಷೇತ್ರಗಳ ಪೈಕಿ 10 ಸ್ಥಾನಗಳಿಗೆ ಬಿಜೆಪಿಯವರು ಅವಿರೋಧವಾಗಿ ಆಯ್ಕೆಯಾಗಿದ್ದರು. ಉಳಿದ 50 ಸ್ಥಾನಗಳಿಗೆ ಮಾತ್ರ ಮತದಾನ ನಡೆದಿತ್ತು.ಭಾನುವಾರ ಬೆಳಿಗ್ಗೆಯಿಂದಲೇ ಮತ ಎಣಿಕೆ ನಡೆದರೂ ಮಧ್ಯಾಹ್ನದ ಹೊತ್ತಿಗೆ ಅಧಿಕೃತ ಫಲಿತಾಂಶ ಪ್ರಕಟವಾದವು.

# ಎಕ್ಸಿಟ್ ಪೋಲ್ ಅಲ್ಲ, ಮೋದಿ ಪೋಲ್: ರಾಹುಲ್ ಕಿಡಿ



**ನವದೆಹಲಿ:** ಲೋಕಸಭಾ ಚುನಾವಣೆಯ ಏಳು ಹಂತದ ಮತದಾನ ಮುಗಿದು, ಶನಿವಾರ ಸಂಜೆ ಚುನಾವಣೋತ್ತರ ಸಮೀಕ್ಷೆಗಳು ಹೊರಬಿದ್ದಿದೆ. ಎಲ್ಲಾ ಸಮೀಕ್ಷೆಗಳು ಬಿಜೆಪಿ ನೇತೃತ್ವದ ಎನ್ ಡಿಎ ಗೆ ಬಹುಮತ ಬರಲಿದೆ ಎನ್ನುವುದನ್ನು ಸೂಚಿಸುತ್ತಿದ್ದು, ಸದ್ಯ ರಾಹುಲ್ ಗಾಂಧಿ ಮಾತ್ರ ಈ ಬಗ್ಗೆ ಕಿಡಿಕಾರಿದ್ದಾರೆ.

ದೆಹಲಿಯಲ್ಲಿ ಮಾತನಾಡಿದ ಅವರು, ಎಕ್ಸಿಟ್ ಪೋಲ್ ಹೆಸರಿನಲ್ಲಿ ನಡೆಸಿದ ಸಮೀಕ್ಷೆ ಮೋದಿ ಮಾಧ್ಯಮ ಸಮೀಕ್ಷೆ ಅಂತ ಕರೆಯಬೇಕು. ದೇಶದ ಜನರನ್ನು ದಿಕ್ಕು ತಪ್ಪಿಸಲು ಈ ರೀತಿ ಎಕ್ಸಿಟ್ ಪೋಲ್ ಹೆಸರಿನಲ್ಲಿ ಮೋಸ ಮಾಡಿದ್ದಾರೆ. ಇದು ಫ್ಯಾಂಟಸಿ ಸಮೀಕ್ಷೆ ಎಂದು ಗುಡುಗಿದ್ದಾರೆ.

ಭಾರತದಲ್ಲಿ ಐ ಎನ್ ಡಿಎ ಬರೋಬ್ಬರಿ 295 ಸ್ಥಾನವನ್ನು ಗೆಲ್ಲುವುದು ಖಚಿತ. ನೀವು ಎಕ್ಸಿಟ್ ಪೋಲ್ ಹೆಸರಿನಲ್ಲಿ ಸುಳ್ಳು ಸಮೀಕ್ಷೆ ಮಾಡುವುದು ಬಿಡಿ ಎಂದರು.

# ಕೋವಿಡ್ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಹೊಸ ಕ್ರಮ: WHO




**ಜಿನೀವಾ:** ಕೋವಿಡ್ -19 ಮತ್ತು ಎಂಪಿಒಎಕ್ಸ್ ನಂತಹ ಜಾಗತಿಕ ಸಾಂಕ್ರಾಮಿಕ ರೋಗಗಳನ್ನು ಎದುರಿಸಲು ಜಾಗತಿಕ ಸನ್ನದ್ಧತೆಯನ್ನು ಸುಧಾರಿಸಲು ಹೊಸ ಕ್ರಮಗಳನ್ನು ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯುಎಚ್ ಒ) ಸದಸ್ಯ ರಾಷ್ಟ್ರಗಳು ಶನಿವಾರ ಅನುಮೋದಿಸಿವೆ ಮತ್ತು ಸಮಗ್ರ ಒಪ್ಪಂದಕ್ಕೆ ಬರಲು ಹೊಸ ಗಡುವನ್ನು ನಿಗದಿಪಡಿಸಿವೆ.

ಡಬ್ಲ್ಯುಎಚ್ಒ ಈ ಮಾಹಿತಿಯನ್ನು ನೀಡಿದೆ. ಸಾಂಕ್ರಾಮಿಕ ತುರ್ತುಸ್ಥಿತಿ ಎಂಬ ಪದವನ್ನು ವ್ಯಾಖ್ಯಾನಿಸುವುದು ಮತ್ತು ಅಭಿವೃದ್ಧಿಶೀಲ ದೇಶಗಳಿಗೆ ಹಣಕಾಸು ಮತ್ತು ವೈದ್ಯಕೀಯ ಉತ್ಪನ್ನಗಳಿಗೆ ಉತ್ತಮ ಪ್ರವೇಶವನ್ನು ಪಡೆಯಲು ಸಹಾಯ ಮಾಡುವಂತಹ ಅಂತರರಾಷ್ಟ್ರೀಯ ಆರೋಗ್ಯ ನಿಯಮಗಳನ್ನು (ಐಎಚ್ಆರ್) ತಿದ್ದುಪಡಿ ಮಾಡಲು ದೇಶಗಳು ಒಪ್ಪಿಕೊಂಡಿವೆ ಎಂದು ಡಬ್ಲ್ಯುಎಚ್ಒ ಹೇಳಿದೆ.

ಈ ನಿಯಮಗಳನ್ನು ಕೊನೆಯದಾಗಿ 2005 ರಲ್ಲಿ ತಿದ್ದುಪಡಿ ಮಾಡಲಾಯಿತು. ಜಾಗತಿಕ ಸಾಂಕ್ರಾಮಿಕ ರೋಗಗಳನ್ನು ಎದುರಿಸಲು ಹೆಚ್ಚು ಸಮಗ್ರ ಒಪ್ಪಂದ ದ ಯೋಜನೆಗಳನ್ನು ಒಪ್ಪಿಕೊಳ್ಳಲು ವಿಫಲವಾದ ಕಾರಣ ಯುಎನ್ ಏಜೆನ್ಸಿ ಈ ವರ್ಷ ತನ್ನ ಆರು ದಿನಗಳ ವಿಶ್ವ ಆರೋಗ್ಯ ಅಸೆಂಬ್ಲಿಯನ್ನು ಕೊನೆಗೊಳಿಸಿದ ನಂತರ ಈ ಕ್ರಮ ಕೈಗೊಳ್ಳಲಾಗಿದೆ.

ತಂತ್ರಜ್ಞಾನದ ಉತ್ತಮ ವಿನಿಮಯ ಮತ್ತು ಸಾಂಕ್ರಾಮಿಕ ರೋಗಕ್ಕೆ ಕಾರಣವಾದ ರೋಗಕಾರಕಗಳ ಬಗ್ಗೆ ಭಿನ್ನಾಭಿಪ್ರಾಯಗಳಿಂದಾಗಿ ಯೋಜನೆಗಳನ್ನು ಒಪ್ಪಲಾಗಲಿಲ್ಲ. ಈ ವರ್ಷದ ಅಂತ್ಯದ ವೇಳೆಗೆ ಸಾಂಕ್ರಾಮಿಕ ರೋಗವನ್ನು ಎದುರಿಸುವ ಒಪ್ಪಂದದ ಬಗ್ಗೆ ಮಾತುಕತೆಗಳನ್ನು ಮುಕ್ತಾಯಗೊಳಿಸಲು ದೇಶಗಳು ಒಪ್ಪಿಕೊಂಡಿವೆ ಎಂದು ಡಬ್ಲ್ಯುಎಚ್ಒ ತಿಳಿಸಿದೆ.

## ಟಾಟಾ ಸ್ಟೀಲ್'ನಿಂದ '2,500 ಉದ್ಯೋಗ' ಕಡಿತ




**ನವದೆಹಲಿ:** ಟಾಟಾ ಸ್ಟೀಲ್ ಸಿಇಒ ಯುಕೆಯಲ್ಲಿ 2500 ಉದ್ಯೋಗ ಕಡಿತದ ಸುಳಿವು ನೀಡಿದ್ದಾರೆ. ಕಡಿಮೆ-ಹೊರಸೂಸುವಿಕೆಯ ಎಲೆಕ್ಟ್ರಿಕ್ ಆರ್ಕ್ ಕುಲುಮೆ (ಇಎಎಫ್) ಪ್ರಕ್ರಿಯೆಗೆ ಬದಲಾಗಲು ಸ್ಟೀಲ್ ಮೇಜರ್ ಯೋಜಿಸುತ್ತಿದ್ದಂತೆ, ಸಿಇಒ ಟಿ ವಿ ನರೇಂದ್ರನ್ ಅನಿವಾರ್ಯ ಉದ್ಯೋಗ ನಷ್ಟವನ್ನು ಘೋಷಿಸಿದರು. ಟಾಟಾ ಸ್ಟೀಲ್ ಯುಕೆಯ ಅತಿದೊಡ್ಡ ಉಕ್ಕಿನ ಕಾರ್ಖಾನೆಗಳನ್ನು ಹೊಂದಿದೆ. ವರ್ಷಕ್ಕೆ 3 ಮಿಲಿಯನ್ ಟನ್ (ಎಂಟಿಪಿಎ) ಉತ್ಪಾದಿಸುತ್ತದೆ, ಇದು ಸೌತ್ ವೇಲ್ಸ್‌ನ ಪೋರ್ಟ್ ಟಾಲ್ಬೋಟ್ನಲ್ಲಿದೆ. ಪಿಟಿಐ ವರದಿಯ ಪ್ರಕಾರ, ಇದು ದೇಶದಲ್ಲಿ ತನ್ನ ಎಲ್ಲಾ ಕಾರ್ಯಾಚರಣೆಗಳಲ್ಲಿ ಸುಮಾರು 8,000 ವ್ಯಕ್ತಿಗಳನ್ನು ನೇಮಿಸಿಕೊಂಡಿದೆ.

**ಟಾಟಾ ಸ್ಟೀಲ್ ಕಾರ್ಯನಿರ್ವಹಣೆಯಲ್ಲಿ ಬದಲಾವಣೆಗಳು:** ತನ್ನ ಡಿಕಾರ್ಬನೈಸೇಶನ್ ಕಾರ್ಯತಂತ್ರಕ್ಕೆ ಅನುಗುಣವಾಗಿ, ಕಂಪನಿಯು ತನ್ನ ಜೀವನ ಚಕ್ರದ ಅಂತ್ಯವನ್ನು ಸಮೀಪಿಸುತ್ತಿರುವ ಬ್ಲಾಸ್ಟ್ ಕುಲುಮೆ (ಬಿಎಫ್) ಮಾರ್ಗದಿಂದ ಕಡಿಮೆ-ಹೊರಸೂಸುವ ಎಲೆಕ್ಟ್ರಿಕ್ ಆರ್ಕ್ ಕುಲುಮೆ (ಇಎಎಫ್) ಪ್ರಕ್ರಿಯೆಗೆ ಪರಿವರ್ತನೆಗೊಳ್ಳುತ್ತಿದೆ. ಪಿಟಿಐ ಜೊತೆ ಮಾತನಾಡಿದ ನರೇಂದ್ರನ್, ಯುಕೆ ಸರ್ಕಾರದ ನೆರವಿನೊಂದಿಗೆ ಎಲೆಕ್ಟ್ರಿಕ್ ಆರ್ಕ್ ಫರ್ನೇಸ್ (ಇಎಎಫ್) ಗೆ ಪರಿವರ್ತನೆಯಾಗುವುದರಿಂದ ಉತ್ಪಾದನಾ ವೆಚ್ಚವನ್ನು ಕಡಿಮೆ ಮಾಡುವ ಮೂಲಕ ಮತ್ತು ವಾರ್ಷಿಕವಾಗಿ 5 ಮಿಲಿಯನ್ ಟನ್ ಇಂಗಾಲದ ಡೈಆಕ್ಸೈಡ್ ಹೊರಸೂಸುವಿಕೆಯನ್ನು ಕಡಿತಗೊಳಿಸುವ ಮೂಲಕ ಕಂಪನಿಯ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುತ್ತದೆ ಎಂದು ಹೇಳಿದರು.

# ಪಂಜಾಬ್‌ನಲ್ಲಿ 2 ಗೂಡ್ಸ್ ರೈಲುಗಳ ನಡುವೆ ಭೀಕರ ಅಪಘಾತ



**ಫತೇಘರ್ ಸಾಹಿಬ್ (ಪಂಜಾಬ್):** ದೇಶದಲ್ಲಿ ಮತ್ತೊಂದು ರೈಲು ಭೀಕರ ರೈಲು ದುರಂತ ಸಂಭವಿಸಿದೆ. ಭಾನುವಾರ ಮುಂಜಾನೆ ಸಿರ್ಹಿಂದ್ನ ಮಾಧೋಪುರ್ ಬಳಿ ಎರಡು ಗೂಡ್ಸ್ ರೈಲುಗಳ ನಡುವೆ ಭೀಕರ ಅಪಘಾತ ಸಂಭವಿಸಿದ್ದು, ಘಟನೆದಲ್ಲಿ ಇಬ್ಬರು ಲೋಕೋ ಪೈಲಟ್ಗಳು ಗಾಯಗೊಂಡಿದ್ದಾರೆ.

ಗಾಯಾಳುಗಳನ್ನು ಶ್ರೀ ಫತೇಘರ್ ಸಾಹಿಬ್ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಪಘಾತದ ರಭಸಕ್ಕೆ ಗೋಡ್ಸ್ ರೈಲಿನ ಬೋಗಿಗಳು ನಜ್ಜುಗುಜ್ಜಾಗಿವೆ. ಬೆಳಗ್ಗೆ 3.45 ರ ಸುಮಾರಿಗೆ ಅಪಘಾತ ಸಂಭವಿರುವ ಬಗ್ಗೆ ನಮಗೆ ಮಾಹಿತಿ ಬಂತು. ಕೂಡಲೇ ಸ್ಥಳಕ್ಕೆ ಆಗಮಿಸಿದ್ದೇವೆ. ಇಬ್ಬರು ಲೋಕೋ ಪೈಲಟ್ಗಳು ಗಾಯಗೊಂಡಿದ್ದಾರೆ. ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಈವರೆಗೆ ಯಾವುದೇ ಪ್ರಾಣಹಾನಿಯಾಗಿಲ್ಲ ಎಂದು ಸಿರ್ಹಿಂದ್ ರೈಲ್ವೆ ಪೊಲೀಸ್ ಠಾಣೆಯ ಅಧಿಕಾರಿ ರತನ್ ಲಾಲ್ ಮಾಹಿತಿ ನೀಡಿದ್ದಾರೆ. ಉತ್ತರ ಪ್ರದೇಶ ಮೂಲದ ಇಬ್ಬರು ಲೋಕೋ ಪೈಲಟ್ಗಳನ್ನು ಪಟಿಯಾಲಾದ ರಾಜೇಂದ್ರ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಶ್ರೀ ಫತೇಘರ್ ಸಾಹಿಬ್ ಸಿವಿಲ್ ಆಸ್ಪತ್ರೆ ಡಾ ಇವಾನ್ ಪ್ರೀತ್ ಕೌರ್ ವಿವರಿಸಿದ್ದಾರೆ.

# ಜೈಲಿಗೆ ಮರಳಿದ ಅರವಿಂದ್ ಕೇಜ್ರಿವಾಲ್



**ನವದೆಹಲಿ:** ರಾಷ್ಟ್ರ ರಾಜಧಾನಿ ದಿಲ್ಲಿಯಲ್ಲಿ ಅಬಕಾರಿ ನೀತಿ ಜಾರಿ ವೇಳೆ ನಡೆದಿದೆ ಎನ್ನಲಾದ ನೂರಾರು ಕೋಟಿ ರೂ. ಹಗರಣದ ಆರೋಪ ಎದುರಿಸುತ್ತಿರುವ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಮಧ್ಯಂತರ ಜಾಮೀನು ಅವಧಿ ಪೂರ್ಣಗೊಂಡಿದ್ದು, ಜೂ.

2 ರಂದು ಅವರು ತಿಹಾರ್ ಜೈಲಿಗೆ ಮರಳಿದ್ದಾರೆ. ಈ ಹಿಂದೆ ದೆಹಲಿಯ ರೋಸ್ ಅವನ್ಯೂ ಕೋರ್ಟ್ ಜೂನ್ 5ರ ತನಕ ದೆಹಲಿ ಮುಖ್ಯಮಂತ್ರಿಗೆ ಜೈಲು ಶಿಕ್ಷೆ ವಿಧಿಸಿತ್ತು. ಲೋಕಸಭಾ ಚುನಾವಣೆ ಪ್ರಚಾರ ಕಾರ್ಯದಲ್ಲಿ ಭಾಗಿಯಾಗಲು ಅವಕಾಶ ಮಾಡಿಕೊಡುವ ನಿಟ್ಟಿನಲ್ಲಿ ಕೋರ್ಟ್ ಮೇ 10ರಂದು ಮಧ್ಯಂತರ ಜಾಮೀನು ಮಂಜೂರು ಮಾಡಿತ್ತು.

21 ದಿನಗಳ ಮಧ್ಯಂತರ ಜಾಮೀನು ಅವಧಿ ಮುಗಿದ ಹಿನ್ನೆಲೆಯಲ್ಲಿ ಕೇಜ್ರಿವಾಲ್ ಶರಣಾದರು. ಶರಣಾದ ಕೇಜ್ರಿವಾಲ್ ಅವರನ್ನು ವರ್ಚುವಲ್ ಕಾನ್ಫರೆನ್ಸ್ ಮೂಲಕ ಮ್ಯಾಜಿಸ್ಟ್ರೇಟ್ ಸಂಜೀವ್ ಅಗರ್ವಾಲ್ ಅವರ ಮುಂದೆ ಹಾಜರುಪಡಿಸಲಾಯಿತು.

ಮೇ 20ರಂದು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಕೋರ್ಟ್ ಮೆಟ್ಟಿಲೇರಿ ವಿಚಾರಣೆಗಾಗಿ ಕೇಜ್ರಿವಾಲ್ ಅವರನ್ನು ಇನ್ನೂ 14 ದಿನ ತಮ್ಮ ವಶಕ್ಕೆ ನೀಡಬೇಕೆಂದು ಅರ್ಜಿ ಸಲ್ಲಿಸಿದ್ದರು. ಇದಕ್ಕೆ ಅರವಿಂದ್ ಕೇಜ್ರಿವಾಲ್ ಅವರ ವಕೀಲರಾದ ರಿಷಿಕೇಶ್ ಕುಮಾರ್ ಮತ್ತು ವಿವೇಕ್ ಜೈನ್ ವಿರೋಧ ವ್ಯಕ್ತಪಡಿಸಿದ್ದರು. ಮಧ್ಯಂತರ ಜಾಮೀನಿಗೆ ಅರ್ಜಿ ಸಲ್ಲಿಸುವ ಮೊದಲು ಕೇಜ್ರಿವಾಲ್ ಶರಣಾಗಬೇಕಾಗುತ್ತದೆ ಎಂದು ಇ.ಡಿ. ಹೇಳಿತ್ತು. ಅದರಂತೆ ಅವರು ಇದೀಗ ಜೈಲಿಗೆ ಮರಳಿದ್ದು, ರೂಸ್ ಅವೆನ್ಯೂ ಕೋರ್ಟ್ ಜಾಮೀನು ಅರ್ಜಿಯ ವಿಚಾರಣೆ ನಡೆಸಿ ಜೂನ್ 5ರಂದು ತೀರ್ಪು ಪ್ರಕಟಿಸುವುದಾಗಿ ಹೇಳಿದೆ.

# ದಕ್ಷಿಣ ಕೊರಿಯಾಕ್ಕೆ ಮತ್ತೆ ತ್ಯಾಜ್ಯ ತುಂಬಿದ ಬಲೂನು ಕಳಿಸಿದ ಉತ್ತರ ಕೊರಿಯಾ



**ಸಿಯೋಲ್:** ಉತ್ತರ ಕೊರಿಯಾವು ತ್ಯಾಜ್ಯ ತುಂಬಿದ 600 ಬಲೂನುಗಳನ್ನು ದಕ್ಷಿಣ ಕೊರಿಯಾಕ್ಕೆ ತೇಲಿಬಿಟ್ಟಿದೆ ಎಂದು ದಕ್ಷಿಣ ಕೊರಿಯಾ ಅಧಿಕಾರಿಗಳು ಆರೋಪಿಸಿದ್ದಾರೆ.

ಕಳೆದ ಮಂಗಳವಾರದಿಂದ ಉತ್ತರಕೊರಿಯಾ ತ್ಯಾಜ್ಯ ತುಂಬಿದ ಸುಮಾರು 900ರಷ್ಟು ಬಲೂನುಗಳನ್ನು ದಕ್ಷಿಣದತ್ತ ಹಾರಿಬಿಟ್ಟಿದೆ.

ಈ ಬಲೂನುಗಳಲ್ಲಿ ಸಿಗರೇಟು ತುಂಡಿನಿಂದ ಹಿಡಿದು ಪ್ಲಾಸ್ಟಿಕ್ ಮತ್ತು ರಟ್ಟಿನ ತುಂಡುಗಳನ್ನು, ತ್ಯಾಜ್ಯಗಳನ್ನು ತುಂಬಿಸಲಾಗಿದೆ. ಇದು ನಮ್ಮ ಪರಮಾಣುಶಕ್ತ ನೆರೆರಾಷ್ಟ್ರದ ತರ್ಕಬದ್ಧವಲ್ಲದ ಮತ್ತು ಕೀಳುಮಟ್ಟದ ಮನಸ್ಥಿತಿಯನ್ನು ತೋರಿಸುತ್ತದೆ ಎಂದು ದಕ್ಷಿಣ ಕೊರಿಯಾ ಟೀಕಿಸಿದೆ.

ಇತ್ತೀಚಿನ ಬ್ಯಾಲಿಸ್ಟಿಕ್ ಕ್ಷಿಪಣಿ ಪ್ರಯೋಗಕ್ಕೆ ಹೋಲಿಸಿದರೆ, ಕಸದ ಅಭಿಯಾನವು ಉತ್ತರ ಕೊರಿಯಾದ ವಿರುದ್ಧದ ವಿಶ್ವಸಂಸ್ಥೆಯ ನಿರ್ಬಂಧಗಳ ಉಲ್ಲಂಘನೆಯಾಗುವುದಿಲ್ಲ. 'ತ್ಯಾಜ್ಯ ಬಲೂನುಗಳ ದಾಳಿ'ಯನ್ನು ನಿಲ್ಲಿಸದಿದ್ದರೆ ಕಠಿಣ ಪ್ರತಿಕ್ರಮ ಕೈಗೊಳ್ಳುವುದಾಗಿ ದಕ್ಷಿಣ ಕೊರಿಯಾ ಎಚ್ಚರಿಕೆ ನೀಡಿದೆ.

ಬಲೂನುಗಳಲ್ಲಿ ಯಾವುದೇ ಅಪಾಯಕಾರಿ ವಸ್ತುಗಳು ಪತ್ತೆಯಾಗದಿದ್ದರೂ ಅದರಿಂದ ದೂರ ಇರುವಂತೆ ದಕ್ಷಿಣ ಕೊರಿಯಾದ ಸೇನಾ ಮುಖ್ಯಸ್ಥರು ಸಾರ್ವಜನಿಕರಿಗೆ ಸಲಹೆ ನೀಡಿದ್ದಾರೆ. ಶನಿವಾರ ಸಂಜೆಯಿಂದ ಗಂಟೆಗೆ ಸುಮಾರು 30 ಬಲೂನುಗಳು ಗಾಳಿಯಲ್ಲಿ ಹಾರಿಬರುತ್ತಿದ್ದು ರಾಜಧಾನಿ ಸಿಯೋಲ್ ಸೇರಿದಂತೆ ಉತ್ತರದ ಪ್ರಾಂತಗಳಲ್ಲಿ ಭೂಸ್ಪರ್ಶ ಮಾಡಿವೆ.

# ಶ್ರೀಲಂಕಾದಲ್ಲಿ ಮುಂಗಾರು ಅಬ್ಬರ



**ಕೊಲಂಬೋ:** ಶ್ರೀಲಂಕಾದಲ್ಲಿ ರವಿವಾರ ಮುಂಗಾರು ಮಳೆ ಮತ್ತು ಪ್ರವಾಹದ ಅಬ್ಬರದಿಂದ ಹಲವೆಡೆ ಭೂಕುಸಿತದ ಜತೆಗೆ ಮರಗಳು ಉರುಳಿ ಬಿದ್ದಿದ್ದು ಕನಿಷ್ಠ 14 ಮಂದಿ ಸಾವನ್ನಪ್ಪಿದ್ದಾರೆ ಎಂದು ವಿಪತ್ತು ನಿರ್ವಹಣಾ ಕೇಂದ್ರ ವರದಿ ಮಾಡಿದೆ. ದ್ವೀಪರಾಷ್ಟ್ರದ 25 ಜಿಲ್ಲೆಗಳ ಪೈಕಿ 20 ಜಿಲ್ಲೆಗಳಲ್ಲಿ ಭಾರೀ ಮಳೆ ಸುರಿಯುತ್ತಿದ್ದು ತಗ್ಗು ಪ್ರದೇಶಗಳ ನಿವಾಸಿಗಳಿಗೆ ಮತ್ತು ನದಿ ತೀರದ ಜನರು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಗೊಳ್ಳಲು ತಿಳಿಸಲಾಗಿದೆ. ಕೊಲಂಬೋದ ಮುಖ್ಯ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸುವ ವಿಮಾನಗಳನ್ನು ಸಣ್ಣ ವಿಮಾನನಿಲ್ದಾಣದಲ್ಲಿ ಲ್ಯಾಂಡ್ ಆಗಲು ಸೂಚಿಸಲಾಗಿದೆ. ಕೊಲಂಬೊ ವಿಮಾನ ನಿಲ್ದಾಣವನ್ನು ಸಂಪರ್ಕಿಸುವ ರಸ್ತೆ ಜಲಾವೃತಗೊಂಡಿದ್ದು ವಾಹನ ಸಂಚಾರಕ್ಕೆ ತೊಡಕಾಗಿದೆ. ನದಿಗಳು ಉಕ್ಕೇರಿ ಹರಿಯುತ್ತಿದ್ದು ದೋಣಿಯೊಂದು ಪ್ರವಾಹದಲ್ಲಿ ಸಿಲುಕಿ ಮುಳುಗಿದಾಗ ಒಂದೇ ಕುಟುಂಬದ ಮೂವರು ನೀರಿನಲ್ಲಿ ಕೊಚ್ಚಿಕೊಂಡು ಹೋಗಿದ್ದಾರೆ. ಮಳೆ ಮುಂದುವರಿಯುವ ಸೂಚನೆ ಇರುವುದರಿಂದ ಸೋಮವಾರ ಎಲ್ಲಾ ಶಾಲೆಗಳಿಗೆ ರಜೆ ಘೋಷಿಸಿರುವುದಾಗಿ ಉನ್ನತ ಮೂಲಗಳನ್ನು ಉಲ್ಲೇಖಿಸಿ ಮಾಧ್ಯಮಗಳು ವರದಿ ಮಾಡಿವೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಒಟಿಟಿಯಲ್ಲಿ ರಿಲೀಸ್ ಆಗುತ್ತಿದೆ ಚೈತ್ರಾ ಆಚಾರ್ ನಟನೆಯ ಸಿನಿಮಾ



'ಟೋಬಿ', 'ಸಪ್ತಸಾಗರದಾಚೆ ಎಲ್ಲೋ' ಸಿನಿಮಾ ಮೂಲಕ ಮನಗೆದ್ದ ನಟಿ ಚೈತ್ರಾ ಆಚಾರ್ ನಟನೆಯ ಹೊಸ ಸಿನಿಮಾವೊಂದು ನೇರವಾಗಿ ಒಟಿಟಿ ಫ್ಲಾರ್ಟ್ ಫಾರಂನಲ್ಲಿ ರಿಲೀಸ್ ಆಗುತ್ತಿದೆ. ಡಿಫರೆಂಟ್ ಅವತಾರದಲ್ಲಿ ಬೋಲ್ಡ್ ಬೆಡಗಿ ಚೈತ್ರಾ ಕಾಣಿಸಿಕೊಳ್ತಿದ್ದಾರೆ. ಒಟಿಟಿಯಲ್ಲಿ ಡೇಟ್ ಕೂಡ ಫಿಕ್ಸ್ ಆಗಿದೆ.

'ಹ್ಯಾಪಿ ಬರ್ತ್‌ಡೇ ಟು ಮಿ' ಎಂಬ ಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ಟೋಬಿ ನಟಿ ಕಾಣಿಸಿಕೊಂಡಿದ್ದಾರೆ. ಈ ಚಿತ್ರದಲ್ಲಿ ಸ್ಕೂಲ್ ಹುಡುಗಿಯಂತೆ ಕಾಣಿಸಿಕೊಂಡಿದ್ದಾರೆ. ಚೈತ್ರಾ ಪಾತ್ರದ ಸುತ್ತ ಹಲವು ಪಾತ್ರಗಳಿವೆ. ಅದು ಪೋಸ್ಟರ್‌ನಲ್ಲಿ ಹೈಲೆಟ್ ಆಗಿದೆ. ಇದೇ ಜೂನ್ 28ರಂದು ಒಟಿಟಿಯಲ್ಲಿ ಸಿನಿಮಾ ಬಿಡುಗಡೆಯಾಗಲಿದೆ.

ಅಂದಹಾಗೆ, ಈ ಸಿನಿಮಾದಲ್ಲಿ ಸಿದ್ದು ಮೂಲಿಮನಿ, ಅರ್ಚನಾ ಕೊಟ್ಟಿಗೆ, ರಚನಾ ರೈ, ಗೋಪಾಲ ದೇಶಪಾಂಡೆ ಸೇರಿದಂತೆ ಹಲವರು ನಟಿಸಿದ್ದಾರೆ.

ಇನ್ನೂ ಕನ್ನಡದ ಸಿನಿಮಾ ಜೊತೆಗೆ ತಮಿಳಿನಲ್ಲಿ ಹೊಸ ಸಿನಿಮಾ ಒಪ್ಪಿಕೊಂಡಿದ್ದಾರೆ. ನಿರ್ಮಾಣ ಸಂಸ್ಥೆಯ ಅಧಿಕೃತ ಘೋಷಣೆಗೆ ನಟಿ ಕಾಯ್ತಿದ್ದಾರೆ.

# ಮದುವೆಯಾದ್ರೂ, ಮಕ್ಕಳಾಗಲ್ಲ



ಸೌತ್ ನಟಿ ಶ್ರುತಿ ಹಾಸನ್ ಇತ್ತೀಚೆಗೆ ಬಹುಕಾಲದ ಗೆಳೆಯ ಶಾಂತನು ಜೊತೆಗಿನ ಸಂಬಂಧಕ್ಕೆ ಅಂತ್ಯ ಹಾಡಿದರು. ತಮ್ಮ ಖಾಸಗಿ ಬದುಕಿನ ವಿಚಾರವಾಗಿ ಸಿಕ್ಕಾಪಟ್ಟೆ ಸುದ್ದಿಯಾದ ಬೆನ್ನಲ್ಲೇ ಈಗ ತಮಗಿರುವ ಆರೋಗ್ಯ ಸಮಸ್ಯೆ ಬಗ್ಗೆ ನಟಿ ಸಂದರ್ಶನವೊಂದರಲ್ಲಿ ವಿವರಿಸಿದ್ದಾರೆ.

ತನಗೆ ಪಿಸಿಓಎಸ್ ಸಮಸ್ಯೆ ಇದೆ ಎಂಬ ಆಘಾತಕಾರಿ ಸಂಗತಿಯನ್ನು ಬಹಿರಂಗಪಡಿಸಿದ್ದಾರೆ. ಮೊದಲ ಪಿರಿಯಡ್ ಆದಾಗಲೇ ದೊಡ್ಡ ಹೆಣಗಾಟವಾಗಿತ್ತು. ಈಗಲೂ ಆ ನೋವನ್ನು ಭರಿಸುತ್ತಿದ್ದೇನೆ ಎಂದಿದ್ದಾರೆ. ಈ ಪಿರಿಯಡ್ ಸಮಯದಲ್ಲಿ ಯಾವುದೇ ಕೆಲಸವನ್ನು ಸರಿಯಾಗಿ ಮಾಡಲಾಗುವುದಿಲ್ಲ. ಇದರಿಂದಾಗಿ ನಾನು ಸಾಕಷ್ಟು ದೊಡ್ಡ ದೊಡ್ಡ ಆಫರ್‌ಗಳನ್ನು ಕಳೆದುಕೊಂಡಿದ್ದೇನೆ. ಆದರೆ ಕೆಲವು ನಿರ್ಮಾಪಕರು ಕೋಟಿಗಟ್ಟಲೆ ಖರ್ಚು ಮಾಡಿ ಶೂಟಿಂಗ್ ಮಾಡುತ್ತಿರುವಾಗ ನಿಮ್ಮ ಆರೋಗ್ಯ ಸಮಸ್ಯೆಯಿಂದ ಮುಂದೂಡಲು ಸಾಧ್ಯವಿಲ್ಲ ಎಂದು ಹೇಳುತ್ತಿದ್ದರು. -

ಪಾಲಿಸಿಸ್ಟಿಕ್ ಓವರಿ ಸಿಂಡ್ರೋಮ್ (ಪಿಸಿಓಎಸ್) ಮಹಿಳೆಯರಲ್ಲಿ ಭಾರೀ ರಕ್ತಸ್ರಾವವನ್ನು ಉಂಟುಮಾಡುತ್ತದೆ. ಅಲ್ಲದೇ ಈ ಕಾಯಿಲೆ ಇರುವವರಲ್ಲಿ ಅನೇಕರಿಗೆ ಮಕ್ಕಳೂ ಸಹ ಆಗುವುದಿಲ್ಲ ಎಂದು ತಮ್ಮ ಆರೋಗ್ಯ ಸಮಸ್ಯೆಯ ಬಗ್ಗೆ ನಟಿ ಹೇಳಿಕೊಂಡಿದ್ದಾರೆ. ಅಂದಹಾಗೆ, ಚೆನ್ನೈ ಸ್ಟೋರಿಸ್, ಸಲಾರ್ 2 ಸೇರಿದಂತೆ ಹಲವು ಸಿನಿಮಾಗಳು ಶ್ರುತಿ ಹಾಸನ್ ಕೈಯಲ್ಲಿವೆ.



# ತೆಲುಗಿನಲ್ಲಿ ಮತ್ತೆ ಶ್ರೀಲೀಲಾ ಧಮಾಕ



ಬೆಂಗಳೂರಿನ ಬೆಡಗಿ ಶ್ರೀಲೀಲಾ ಈಗ ಸೆಕೆಂಡ್ ಇನ್ನಿಂಗ್ಸ್ ಶುರು ಮಾಡಿದ್ದಾರೆ. ಸಾಲು ಸಾಲು ಸಿನಿಮಾಗಳು ಮಕಾಡೆ ಮಲಗಿದ ಬೆನ್ನಲ್ಲೇ ನಟಿ ಸೈಲೆಂಟ್ ಆಗಿದ್ದರು. ಈಗ ಮತ್ತೆ ನಟಿ ಸ್ಟಾರ್ ನಟನಿಗೆ ನಾಯಕಿಯಾಗುವ ಮೂಲಕ ಫ್ಯಾನ್ಸ್‌ಗೆ ಶ್ರೀಲೀಲಾ ಗುಡ್ ನ್ಯೂಸ್ ಕೊಟ್ಟಿದ್ದಾರೆ.



'ಪೆಳ್ಳಿ ಸಂದಡಿ' ಚಿತ್ರದಿಂದ ತೆಲುಗಿನಲ್ಲಿ ಸಿನಿಮಾ ಕೆರಿಯರ್ ಶುರು ಮಾಡಿದ ಶ್ರೀಲೀಲಾ. 'ಧಮಾಕ' ಚಿತ್ರದ ಮೂಲಕ ಸಕ್ಸಸ್ ಕಂಡರು. ರವಿತೇಜ ಮತ್ತು ಕಿಸ್ ನಟಿಯ ಜೋಡಿ ಅಭಿಮಾನಿಗಳಿಗೆ ಹಿಡಿಸಿತ್ತು. ಈಗ ಇದೇ ಜೋಡಿ 2ನೇ ಬಾರಿ ಒಂದಾಗುತ್ತಿದ್ದಾರೆ.

ಹೊಸ ಸಿನಿಮಾಗಾಗಿ ರವಿತೇಜ ಜೊತೆ ನಟಿ ಕೈಜೋಡಿಸಿದ್ದಾರೆ. ಗೋಪಿಚಂದ್ ಮಲಿನೇನಿ ಸಿನಿಮಾವನ್ನು ನಿರ್ದೇಶನ ಮಾಡಿದ್ದಾರೆ. ಶ್ರೀಲೀಲಾ ಕೂಡ ಕಥೆ ಕೇಳಿ ಓಕೆ ಎಂದಿದ್ದಾರೆ ಎನ್ನಲಾಗಿದೆ. ಸದ್ಯದಲ್ಲೇ ಶೂಟಿಂಗ್ ಶುರುವಾಗಲಿದೆ.

'ಗುಂಟೂರು ಖಾರಂ' ಸಿನಿಮಾ ಬಳಿಕ ನಟಿ ಓದಿನತ್ತ ಗಮನ ನೀಡಿದ್ದರು. ಈಗ ಗ್ಯಾಪ್ ನ ನಂತರ ಮತ್ತೆ ಬಣ್ಣ ಹಚ್ಚಲು ರೆಡಿಯಾಗಿದ್ದಾರೆ. ಮತ್ತೆ ಯಶಸ್ಸು ನಟಿ ಪಾಲಾಗುತ್ತಾ ಕಾದುನೋಡಬೇಕಿದೆ.

## ಟಿ20 ವಿಶ್ವಕಪ್‌ನಲ್ಲಿ ಆರಂಭಿಕ ಪಂದ್ಯದಲ್ಲೇ ಐತಿಹಾಸಿಕ ಗೆಲುವು

# ಯುಎಸ್‌ಎ ಶುಭಾರಂಭ!

ಟಿ20 ವಿಶ್ವಕಪ್ ಟೂರ್ನಿಯ ಆರಂಭಿಕ ಪಂದ್ಯದಲ್ಲೇ ಅಮೆರಿಕ ಕ್ರಿಕೆಟ್ ತಂಡ ಗೆಲುವಿನ ಶುಭಾರಂಭ ಕಂಡಿದೆ. ಆರನ್ ಜೋನ್ಸ್ ಅವರ ಸ್ಫೋಟಕ ಬ್ಯಾಟಿಂಗ್ ನೆರವಿನೊಂದಿಗೆ ಅಮೆರಿಕ ತಂಡವು ಕೆನಡಾ ವಿರುದ್ಧ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

ಅಮೆರಿಕ ತಂಡದ ಅಂತಾರಾಷ್ಟ್ರೀಯ ಟಿ20 ಕ್ರಿಕೆಟ್ ಇತಿಹಾಸದಲ್ಲೇ ಇದು ಐತಿಹಾಸಿಕ ಗೆಲುವು ಸಹ ಆಗಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಕೆನಡಾ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 194 ರನ್ ಸಿಡಿಸಿತ್ತು. ಬೃಹತ್ ಮೊತ್ತದ ಗುರಿ ಪಡೆದ ಯುಎಸ್‌ಎ ಕೇವಲ 17.4 ಓವರ್‌ಗಳಲ್ಲೇ 3 ವಿಕೆಟ್ ನಷ್ಟಕ್ಕೆ 197 ರನ್ ಸಿಡಿಸಿ ಗೆಲುವಿನ ಖಾತೆ ತೆರೆಯಿತು.

ಚೇಸಿಂಗ್ ಆರಂಭಿಸಿದ ಯುಎಸ್ ತಂಡ 6.3 ಓವರ್‌ಗಳಲ್ಲಿ 42 ರನ್ ಗಳಿಗೆ ಪ್ರಮುಖ 2 ವಿಕೆಟ್ ಕಳೆದುಕೊಂಡಿತ್ತು. ಆದ್ರೆ, 3ನೇ ವಿಕೆಟ್‌ಗೆ ಜೊತೆಗೂಡಿದ ಆಂಡ್ರೀಸ್ ಗೌಸ್ ಹಾಗೂ ಆರನ್ ಜೋನ್ಸ್ ಜೋಡಿ 58 ಎಸೆತಗಳಲ್ಲಿ ಬರೋಬ್ಬರಿ 131 ರನ್ ಸಿಡಿಸಿ ತಂಡವನ್ನು ಗೆಲುವಿನ ದಡ ಸೇರಿಸಿತು.



**ಕೈತಪ್ಪಿದ ಶತಕ:** ಆರಂಭಿಕ ಪಂದ್ಯದಲ್ಲೇ ಸ್ಫೋಟಕ ಇನ್ನಿಂಗ್ಸ್ ಕಟ್ಟಿ ತಂಡದ ಗೆಲುವಿಗೆ ಕಾರಣವಾದ ಆರನ್ ಜೋನ್ಸ್ 40 ಎಸೆತಗಳಲ್ಲಿ ಸ್ಫೋಟಕ 96 ರನ್ (10 ಸಿಕ್ಸರ್, 4 ಬೌಂಡರಿ) ಸಿಡಿಸಿ ಶತಕ ವಂಚಿತರಾದರು. ಇದರೊಂದಿಗೆ ಆಂಡ್ರೀಸ್ ಗೌಸ್ 46 ಎಸೆತಗಳಲ್ಲಿ 65 ರನ್ (3 ಸಿಕ್ಸರ್, 7 ಬೌಂಡರಿ), ಮೊನಾಂಕ್ ಪಟೇಲ್ 16 ರನ್ ಗಳಿಸಿದರು.

ಇದಕ್ಕೂ ಮುನ್ನ ಬ್ಯಾಟಿಂಗ್ ಮಾಡಿದ ಕೆನಡಾ ತಂಡ ಸಹ ಉತ್ತಮ ಬ್ಯಾಟಿಂಗ್ ಪ್ರದರ್ಶನವನ್ನೇ ನೀಡಿತ್ತು. ನವನೀತ್ ಧಲಿವಾಲ್44 ಎಸೆತಗಳಲ್ಲಿ 61 ರನ್ (3 ಸಿಕ್ಸರ್, 6 ಬೌಂಡರಿ), ನಿಕೋಲಸ್ ಕಿರ್ಟನ್ 51 ರನ್ (31 ಎಸೆತ, 3 ಬೌಂಡರಿ, 2 ಸಿಕ್ಸರ್) ಚಚ್ಚಿದರೆ, ಶ್ರೇಯಸ್ ಮೊವ್ವ 16 ಎಸೆತಗಳಲ್ಲಿ ಸ್ಫೋಟಕ 32 ರನ್ ಸಿಡಿ ಮಿಂಚಿದರು.

ಕ್ರಿಸ್‌ಗೇಲ್ ಅಪರೂಪದ ದಾಖಲೆ ಉಡೀಸ್:

ಟಿ20 ವಿಶ್ವಕಪ್ ಟೂರ್ನಿಯ ಆರಂಭಿಕ ಪಂದ್ಯದಲ್ಲೇ ಆರನ್ ಜೋನ್ಸ್, ಕ್ರಿಸ್‌ಗೇಲ್ ಅವರ ಅಪರೂಪದ ಸಿಕ್ಸರ್ ದಾಖಲೆಯೊಂದನ್ನು ಸರಿಗಟ್ಟಿದ್ದಾರೆ. ವಿಶ್ವಕಪ್ ಟೂರ್ನಿಯ ಪಂದ್ಯವೊಂದರಲ್ಲೇ 10 ಸಿಕ್ಸರ್ ಸಿಡಿಸುವ ಮೂಲಕ 2007ರಲ್ಲಿ ಈ ಸಾಧನೆ ಮಾಡಿದ ಗೇಲ್ ದಾಖಲೆಯನ್ನ ಸರಿಗಟ್ಟಿದ್ದಾರೆ.

## ನಾನು ಹಿಂಗೆಲ್ಲ ಬದುಕಿಲ್ಲ, ಮಲಗಲು ಒಳ್ಳೆ ರೂಮ್ ಕೊಡಿ

# ಅಧಿಕಾರಿಗಳೊಂದಿಗೆ ಪ್ರಜ್ವಲ್ ಕಿರಿಕ್!

**ಬೆಂಗಳೂರು:** ಪೆನ್‌ಡ್ರೈವ್ ಕೇಸಲ್ಲಿ ಅರೆಸ್ಟ್ ಆಗಿರೋ ಹಾಸನ ಸಂಸದ ಪ್ರಜ್ವಲ್ ರೇವಣ್ಣರನ್ನ ವಿಚಾರಣೆಗೆ ಒಳಪಡಿಸಲು ಎಸ್‌ಐಟಿ ನೋಡ್ತಿದೆ. ಆದ್ರೆ, ಅಧಿಕಾರಿಗಳ ಯಾವುದೇ ಪ್ರಶ್ನೆಗೆ ಪ್ರಜ್ವಲ್ ರೇವಣ್ಣ ಉತ್ತರಿಸದೇ ಅಸಹಕಾರ ತೋರುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಅತ್ಯಾಚಾರ ಆರೋಪ ಪ್ರಕರಣದಲ್ಲಿ ಎಸ್‌ಐಟಿ ಅಧಿಕಾರಿಗಳ ಪ್ರಶ್ನೆಗೆ ಸೂಕ್ತ ಉತ್ತರ ನೀಡದ ಪ್ರಜ್ವಲ್, ಕಿರಿಕ್ ತೆಗೆಯುತ್ತಿದ್ದಾರೆ. ವಾಶ್‌ರೂಮ್‌ಗಾಗಿ ಕಿರಿಕ್ ತೆಗೆಯುತ್ತಿದ್ದಾರೆ. ನಾನು ಹಿಂಗೆಲ್ಲ ಬದುಕಿಲ್ಲ ನನಗೆ ಸರಿಯಾದ ಟಾಯ್ಲೆಟ್ ಹಾಗೂ ಮಲಗಲು ರೂಮ್ ಕೊಡಿ ಅಂತಾ ಕಿರಿಕ್ ಮಾಡ್ತಿರೋದಾಗಿ ತಿಳಿದುಬಂದಿದೆ. ಈ ವೇಳೆ ಎಸ್‌ಐಟಿ ಅಧಿಕಾರಿಗಳು ಯಾವುದೇ ಆರೋಪಿಗಳಿಗೂ ರೂಮ್ ಅದೇ ಆಗಿರುತ್ತೆ. ನಿಮ್ಮ ತಂದೆಗೂ ಇದೇ ರೂಮ್ ಕೊಡಲಾಗಿತ್ತು ಎಂದು ಹೇಳಿರುವುದಾಗಿ ಮೂಲಗಳು ತಿಳಿಸಿವೆ.

ಮುಂದುವರಿದು, ಯಾರೋ ಆಗದೇ ಇರೋರು ಮಾಡಿದ್ದಾರೆ. ಇದರಲ್ಲಿ ನನ್ನದು ಏನು ತಪ್ಪಿಲ್ಲ. ನನ್ನ ರಾಜಕೀಯವಾಗಿ ಬೆಳೆಯಬಾರದು ಅಂತ ಸಂಚು ಮಾಡಿದ್ದಾರೆ. ರಾಜಕೀಯವಾಗಿ ಮುಗಿಸಲು ಪ್ಲಾನ್ ಮಾಡಿದ್ದಾರೆ. ಇದೊಂದು ರಾಜಕೀಯ ಷಡ್ಯಂತ್ರ ಎನ್ನುತ್ತಾ ಪ್ರಜ್ವಲ್ ಒಂದೇ ಉತ್ತರ ಕೊಡುತ್ತಿದ್ದಾರೆ ಎನ್ನಲಾಗಿದೆ.





**ಸ್ಥಳ ಮಹಜರಿಗೆ ಸಿದ್ಧತೆ:** ಕಳೆದ ಎರಡು ದಿನಗಳಿಂದಲೂ ಎಸ್ಪಿ ಸುಮನ ಡಿ. ಪನ್ನೇಕರ್ ನೇತೃತ್ವದಲ್ಲಿ ಎಸ್‌ಐಟಿ ವಿಚಾರಣೆ ಎದುರಿಸುತ್ತಿರುವ ಪ್ರಜ್ವಲ್ ರೇವಣ್ಣ, ಎಸ್‌ಐಟಿಯ ಯಾವುದೇ ಪ್ರಶ್ನೆಗೂ ಸರಿಯಾಗಿ ಉತ್ತರ ನೀಡದೇ ಇರುವ ಕಾರಣ ಸ್ಥಳ ಮಹಜರು ನಡೆಸಲು ಎಸ್‌ಐಟಿ ಅಧಿಕಾರಿಗಳು ಪ್ಲ್ಯಾನ್ ಮಾಡಿಕೊಂಡಿದ್ದಾರೆ. ಅಶ್ಲೀಲ ವೀಡಿಯೋ ಚಿತ್ರೀಕರಣ ನಡೆದಿತ್ತು ಎನ್ನಲಾದ ಎಂ.ಪಿ ನಿವಾಸದಲ್ಲಿ ಸ್ಥಳಮಹಜರು ನಡೆಸಲು ಸಿದ್ಧತೆ ಮಾಡಿಕೊಂಡಿದ್ದಾರೆ.

ಈ ಮೊದಲು ಬಳಸ್ತಿದ್ದ ಮೊಬೈಲ್ ಬಗ್ಗೆ ಗುಟ್ಟು ಬಿಟ್ಟುಕೊಡದ ಪ್ರಜ್ವಲ್, ವರ್ಷದ ಹಿಂದೆಯೇ ಮೊಬೈಲ್ ಕಳೆದುಹೋಗಿದೆ. ಈ ಬಗ್ಗೆ ದೂರು ಕೂಡ ಕೊಟ್ಟಿದ್ದೆ, ಈಗ ನನ್ನ ಬಳಿಯಿದ್ದ ಮೊಬೈಲ್‌ನ್ನು ಏರ್ ಪೋರ್ಟ್‌ನಲ್ಲಿಯೇ ವಶಕ್ಕೆ ತಗೊಂಡ್ರಿ ಅಲ್ವಾ, ನನ್ನ ಬಳಿ ಬೇರೆ ಮೊಬೈಲ್ ಇಲ್ಲ ಅಂತ ವಿಚಾರಣೆಯಲ್ಲಿ ಹೇಳುತ್ತಿರುವುದಾಗಿ ತಿಳಿದುಬಂದಿದೆ.

# ದಾಂಪತ್ಯ ಜೀವನಕ್ಕೆ ಕಾಲಿಟ್ಟ ಕ್ರಿಕೆಟಿಗ ವೆಂಕಟೇಶ್ ಅಯ್ಯರ್

17ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ ಟೂರ್ನಿಯಲ್ಲಿ ಅದ್ಭುತ ಪ್ರದರ್ಶನ ತೋರುವ ಮೂಲಕ ಕೋಲ್ಕತಾ ನೈಟ್ ರೈಡರ್ಸ್ ತಂಡವನ್ನು ಚಾಂಪಿಯನ್ ಪಟ್ಟಕ್ಕೇರಿಸಿದ್ದ ವೆಂಕಟೇಶ್ ಅಯ್ಯರ್, ಇದೀಗ ಜೀವನದ ಹೊಸ ಇನಿಂಗ್ಸ್ ಆರಂಭಿಸಿದ್ದು, ಬಹುಕಾಲದ ಗೆಳತಿ ಶೃತಿ ರಘುನಾಥನ್ ಅವರೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ.ವೆಂಕಟೇಶ್ ಅಯ್ಯರ್ ಹಾಗೂ ಶೃತಿಯವರ ಎಂಗೇಜ್‌ಮೆಂಟ್ 2023ರ ನ.21ರಂದು ನೆರವೇರಿತ್ತು. ಇದೀಗ ಅವರ ಮದುವೆ ನೆರವೇರಿದ್ದು, ಕ್ರಿಕೆಟ್ ಅಭಿಮಾನಿಗಳು ಹಾಗೂ ಕ್ರಿಕೆಟ್ ಆಟಗಾರರು ಸಾಮಾಜಿಕ ಜಾಲತಾಣದಲ್ಲಿ ಶುಭ ಹಾರೈಸಿದ್ದಾರೆ.



ವೆಂಕಟೇಶ್ ಅಯ್ಯರ್ 15 ಪಂದ್ಯಗಳನ್ನಾಡಿ 4 ಅರ್ಧಶತಕ ಸಹಿತ 370 ರನ್ ಸಿಡಿಸುವ ಮೂಲಕ ಕೋಲ್ಕತಾ ನೈಟ್ ರೈಡರ್ಸ್ ತಂಡದ ಯಶಸ್ಸಿನಲ್ಲಿ ಪ್ರಮುಖ ಪಾತ್ರವಹಿಸಿದ್ದರು. 17ನೇ ಆವೃತ್ತಿಯ ಐಪಿಎಲ್ ಟೂರ್ನಿಯಲ್ಲಿ ಶ್ರೇಯಸ್ ಅಯ್ಯರ್ ನೇತೃತ್ವದ ಕೋಲ್ಕತಾ ನೈಟ್ ರೈಡರ್ಸ್ ತಂಡವು ಸನ್‌ರೈಸರ್ಸ್ ಹೈದರಾಬಾದ್ ತಂಡವನ್ನು ಮಣಿಸಿ ಮೂರನೇ ಬಾರಿಗೆ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಟೀಂ ಇಂಡಿಯಾ ಕ್ರಿಕೆಟಿಗ ವೆಂಕಟೇಶ್ ಅಯ್ಯರ್ ಐಪಿಎಲ್ ಟೂರ್ನಿಯಲ್ಲಿ ಅದ್ಭುತ ಪ್ರದರ್ಶನದ ಹೊರತಾಗಿಯೂ, 2024ರ ಐಸಿಸಿ ಟಿ20 ವಿಶ್ವಕಪ್ ಟೂರ್ನಿಯಲ್ಲಿ ಭಾರತ ತಂಡದಲ್ಲಿ ಸ್ಥಾನ ಪಡೆಯಲು ವಿಫಲವಾಗಿದ್ದಾರೆ.

# ಭ್ರೂಣ ಹತ್ಯೆ ತಡೆಯುವಲ್ಲಿ ಸರ್ಕಾರ ವಿಫಲ

**ಕೊಪ್ಪಳ:** ಇತ್ತೀಚೆಗೆ ಆಸ್ಪತ್ರೆಗಳು ಗರ್ಭಪಾತ ಮಾಡಿಸಿಕೊಳ್ಳಲು ಬರುವ ಮಹಿಳೆಯರ ಸ್ಥಿತಿ ನೋಡಿ ದರ ಫಿಕ್ಸ್ ಮಾಡುತ್ತಿವೆ. ಮದುವೆಯಾಗಿ ಹೆಣ್ಣು ಭ್ರೂಣ ಹತ್ಯೆಗೆ ಬರುವ ಮಹಿಳೆಯರಿಗೆ ಒಂದು ದರವಾದರೆ, ಮದುವೆ ಆಗದೇ ಗರ್ಭ ಧರಿಸಿ ಬರುವವರಿಗೆ ಬೇರೆ ದರ ಪಡೆದು ಗರ್ಭಪಾತ ಮಾಡಲಾಗುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್ ಗಂಭೀರ ಆರೋಪ ಮಾಡಿದ್ದಾರೆ.



ಕೊಪ್ಪಳದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಗರ್ಭಪಾತ ಮಾಡಿಸಿಕೊಳ್ಳಲು ಬರುವ ಮಹಿಳೆಯರ ಸ್ಥಿತಿ ನೋಡಿಕೊಂಡು, ಆಸ್ಪತ್ರೆಗಳು ಬೆಲೆ ನಿರ್ಧಾರ ಮಾಡುತ್ತವೆ. ಮದುವೆಯಾಗಿ ಹೆಣ್ಣು ಭ್ರೂಣ ಹತ್ಯೆಗೆ ಬರುವ ಮಹಿಳೆಯರಿಗೆ ಒಂದು ದರವಾದರೆ, ಮದುವೆ ಆಗದೇ ಗರ್ಭ ಧರಿಸಿದವರಿಗೆ ಒಂದು ದರ ಪಡೆದು ಗರ್ಭಪಾತ ಮಾಡಲಾಗುತ್ತಿದೆ. ಇಂದರ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ಹಾಗೂ ಇಂತಹ ಕೃತ್ಯಗಳಿಗೆ ಕಡಿವಾಣ ಹಾಕುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಕಿಡಿ ಕಾರಿದ್ದಾರೆ.

ಹೆಣ್ಣು ಮಕ್ಕಳಿಗೆ ಗ್ಯಾರಂಟಿ ಯೋಜನೆ ಮೂಲಕ ಹಣ ನೀಡುತ್ತಿರುವ ರಾಜ್ಯ ಸರ್ಕಾರ, ಹೆಣ್ಣು ಭ್ರೂಣ ಹತ್ಯೆ ತಡೆಯುವ ಹಾಗೂ ವಿವಿಧ ಕಾರಣಕ್ಕೆ ಹತ್ಯೆ ಆಗುತ್ತಿರುವ ಹೆಣ್ಣು ಮಕ್ಕಳ ಸುರಕ್ಷತೆಗೆ ಗ್ಯಾರಂಟಿ ನೀಡುತ್ತಿಲ್ಲ. ಗರ್ಭಪಾತಕ್ಕೆ ಕನಿಷ್ಠ 25,000 ರೂ.ನಿಂದ 1 ಲಕ್ಷ ರೂ. ವರೆಗೆ ಹಣ ಪೀಕುತ್ತಿದ್ದಾರೆ. ಕಳೆದ 2 ವರ್ಷಗಳಲ್ಲಿ ಸುಮಾರು 900ಕ್ಕೂ ಹೆಚ್ಚು ಹೆಣ್ಣು ಭ್ರೂಣ ಹತ್ಯೆ ಆಗಿವೆದೆ ಎಂದು ತನಿಖಾ ವರದಿಗಳು ಹೇಳುತ್ತಿವೆ. ಇನ್ನೂ ಗೊತ್ತಾಗದಂತೆ ಅದೆಷ್ಟು ಭ್ರೂಣಗಳನ್ನ ಹೊಸಕಿ ಹಾಕಿದ್ದಾರೆ ಎಂಬುದನ್ನು ಊಹೆ ಮಾಡಲು ಸಾಧ್ಯವಾಗುತ್ತಿಲ್ಲ. ಇಂಥ ಪ್ರಕರಣ ತಡೆಯುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ದೂರಿದ್ದಾರೆ.

ಮೈಸೂರು ಮತ್ತು ಮಂಡ್ಯ ಜಿಲ್ಲೆಗಳಲ್ಲಂತೂ ಹಣಕ್ಕಾಗಿ ವೈದ್ಯರು ಕ್ರೂರ ಕೃತ್ಯಕ್ಕೆ ಇಳಿದಿದ್ದಾರೆ. ಇತ್ತೀಚೆಗೆ ಹೊಸಕೋಟೆ, ಬಾಗಲಕೋಟೆ, ವಿಜಯಪುರ ಜಿಲ್ಲೆಯಲ್ಲಿಯೂ ಇಂತಹ ಪ್ರಕರಣ ಬೆಳಕಿಗೆ ಬಂದಿವೆ. ಈ ಎಲ್ಲ ಪ್ರಕಣಗಳನ್ನು ರಾಜ್ಯ ಸರ್ಕಾರ ನೆಪಮಾತ್ರಕ್ಕೆ ಎನ್ನುವಂತೆ ಸಿಐಡಿ ತನಿಖೆಗೆ ವಹಿಸಿದೆ. ಆದರೆ, ತನಿಖೆಯಲ್ಲಿ ಕಾರ್ಯ ಯಾವುದೇ ಪ್ರಗತಿ ಕಂಡಿಲ್ಲ. ಸರ್ಕಾರದ ಭಾಗವಾಗಿರುವವರೇ ಇಂತಹ ಹೀನ ಕೃತ್ಯಕ್ಕೆ ಬೆಂಬಲ ನೀಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com